ಬೀದರ | ಕಲಬುರಗಿ | ಯಾದಗಿರಿ | ರಾಯಚೂರು | ಕೊಪ್ಪಳ | ಬಳ್ಳಾರಿ | ಬಾಗಲಕೋಟೆ | ವಿಜಯಪುರ ಜಿಲ್ಲೆಗಳಲ್ಲಿ ಏಕಕಾಲಕ್ಕೆ ಪ್ರಸಾರ Postal Reg. No. BDR/054/2026-2027 Email: mallammanudi@gmail.com E-paper: www.mallammanudi.in

# ಮಲ್ಲಮ್ಮ ನುಡಿ

ಸತ್ಯಮೇವ ಜಯತೆ

ಪ್ರಾದೇಶಿಕ ಕನ್ನಡ ದಿನಪತ್ರಿಕೆ

ಸಂಪಾದಕರು: ರಮೇಶರೆಡ್ಡಿ | 9448 604450

Mallammanudi Regional News Paper | Editor: Ramesh Reddy | RNI NO:KARKAN/2011/48371

VOLUME - 13 ಸಂಪುಟ-13 | ISSUE - 39 ಸಂಚಿಕೆ- 39 | PAGE- 8 ಪುಟ-8 | ಭಾನುವಾರ 16.03.2025 | RS.2/- ಬೆಲೆ 2/-

# ಬಿಸಿಲಿನ ತಾಪಮಾನ ಹೆಚ್ಚಳ

## ಮಧ್ಯಾಹ್ನ 12 ರಿಂದ 3ರ ವರೆಗೆ ಮನೆಯಿಂದ ಹೊರ ಬರಬೇಡಿ

ಮಲ್ಲಮ್ಮ ನುಡಿ ವಾರ್ತೆ

ರಾಯಚೂರು:ಮಾ.15: ಈ ವರ್ಷ ರಾಜ್ಯದಲ್ಲಿ ಬಿಸಿಲಿನ ತಾಪಮಾನ ಹೆಚ್ಚಾಗುವ ಸಾಧ್ಯತೆಯಿದ್ದು, ಮಧ್ಯಾಹ್ನ 12 ರಿಂದ 3 ರವರೆಗೆ ಹೊರಗೆ ಕೆಲಸ ಮಾಡಬಾರದು, ಮನೆ, ಕಚೇರಿಯಲ್ಲೇ ಇರಬೇಕು ಎಂದು ಆರೋಗ್ಯ ಸಚಿವ ದಿನೇಶ್ ಗುಂಡೂರಾವ್ ಹೇಳಿದ್ದಾರೆ.ರಾಯಚೂರಿನ ಮಾನ್ವಿಯಲ್ಲಿ ಮಾತನಾಡಿದ ಅವರು, ಮುಂಜಾಗ್ರತಾ ಕ್ರಮಗಳನ್ನುತೆಗೆದುಕೊಳ್ಳುವಂತೆ ಈಗಾಗಲೇ ಸೂಚಿಸಿದ್ದೇವೆ. ಬಿಸಿಲುಹೆಚ್ಚಾಗುತ್ತಿರುವುದರಿಂದ ಸರ್ಕಾರಿ ಕಚೇರಿಗಳ ಕೆಲಸದ ಸಮಯ ಬದಲಾವಣೆಯ ಬಗ್ಗೆ ಸರ್ಕಾರ ಮಟ್ಟದಲ್ಲಿ ತೀರ್ಮಾನ ಮಾಡಿಕೊಳ್ಳಲಿ. ಮಧ್ಯಾಹ್ನ ಹೊತ್ತು ಫೀಲ್ಡ್ ವಿಸಿಟ್ ಮಾಡುವುದನ್ನು ಅಧಿಕಾರಿಗಳು ಬಿಡಬೇಕು. ಸರ್ಕಾರಿ ನೌಕರರು ಹೊರಗಡೆ ವೀಕ್ಷಣೆಯನ್ನು ಮಧ್ಯಾಹ್ನ 12 ರಿಂದ 3ರ ವರೆಗೆ ಮಾಡಬಾರದು. ಬೆಳಗಿನ



ಜಾವ ಅಥವಾ ಸಾಯಂಕಾಲ ಮಾಡಬೇಕು. ಸರ್ಕಾರ ರಜೆ ಕೊಡಬೇಕು ಅಂತ ಹೇಳುವುದಿಲ್ಲ, ಸಮಯ ಬದಲಾವಣೆ ಮಾಡಿಕೊಂಡರೆ ಒಳ್ಳೆಯದು ಎಂದರು. ರಾಯಚೂರು ಜಿಲ್ಲೆ ಸೇರಿ ಈ ಭಾಗದಲ್ಲಿ 43 ರಿಂದ 44 ಡಿಗ್ರಿ ಸೆಲ್ಸಿಯಸ್‌ವರೆಗೆ ತಾಪಮಾನ ಹೋಗುತ್ತದೆ. ಮಧ್ಯಾಹ್ನ ಸಮಯದಲ್ಲಿ ಮನೆಯೊಳಗೆ ಅಥವಾ ಕಚೇರಿಯೊಳಗೆ ಇರುವಂತೆ ನೋಡಿಕೊಳ್ಳಲುಸೂಚಿಸಲಾಗಿದೆ. ಶಾಲೆಗಳು,ಎಲ್ಲಾ ಸಂಸ್ಥೆಗಳು ಆ ಬಗ್ಗೆ ಗಮನ ಕೊಡಬೇಕು. ಆಹಾರದ ಬಗ್ಗೆಯೂ ಗಮನ ಕೊಡಬೇಕು. ಆಗಾಗ ನೀರು ಕುಡಿದರೆ ನಿರ್ಜಲೀಕರಣದಿಂದ ದೂರ ಇರಬಹುದು. ಬಿಸಿಲಿನ ತಾಪಮಾನ ಹೆಚ್ಚಳ ಹಿನ್ನೆಲೆ ಸರ್ಕಾರಿ ಆಸ್ಪತ್ರೆಗಳಲ್ಲಿ ಸ್ಪೆಷಲ್ ವಾರ್ಡ್ ಅಗತ್ಯ ಇಲ್ಲ. ನಮ್ಮಲ್ಲಿ ಎಲ್ಲಾ ಸೌಲಭ್ಯಗಳಿವೆ ಎಂದು ತಿಳಿಸಿದರು

## ರಸ್ತೆ ಸುರಕ್ಷತಾ ಕ್ರಮ ಕೈಗೊಳ್ಳಲು ಜಿಲ್ಲಾಧಿಕಾರಿ ಸೂಚನೆ



ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ:ಮಾ.15:ಕಲಬುರಗಿ ಜಿಲ್ಲೆಯಲ್ಲಿ ಪ್ರಮುಖವಾದ ರಸ್ತೆಗಳು ಹಾಗೂ ಅಪಘಾತ ಸಂಭವಿಸುವಸ್ಥಳಗಳನ್ನುಗುರುತಿಸಿ ಸಂಬಂಧಿತ ಅಧಿಕಾರಿಗಳು ರಸ್ತೆ ಸುರಕ್ಷತಾ ಕ್ರಮಗಳನ್ನು ಕಟ್ಟುನಿಟ್ಟಾಗಿ ಕೈಗೊಳ್ಳಬೇಕು ಎಂದು ಜಿಲ್ಲಾಧಿಕಾರಿ ಬಿ.ಫೌ- ಜಿಯಾ ತರನ್ನುಮ್ ಅವರು ಅಧಿಕಾರಿಗಳಿಗೆ ಸೂಚಿಸಿದರು.

ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿಂದು ಹಮ್ಮಿಕೊಳ್ಳಲಾಗಿದ್ದ ರಸ್ತೆ ಸುರಕ್ಷತಾ ಪೂರ್ವಭಾವಿ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿ, ಲಾಲಗಿರಿ ಕ್ರಾಸ್‌ನಲ್ಲಿ ಮೊದಲನೆ ಹಂತದ ಕಾಮಗಾರಿ ಪೂರ್ಣಗೊಂಡಿ- ದ್ದು, ಇನ್ನುಳಿದಂತೆ ಎರಡನೆ ಹಂತದ ಕಾಮಗಾರಿಯನ್ನು ಶೀಘ್ರದಲ್ಲಿ ಪೂರ್ಣಗೊಳಿಸಬೇಕು ಎಂದು ತಿಳಿಸಿದರು.

ಯುಡಿಆರ್ ಫಂಡ್ ಮತ್ತು ಇತರೆ ಅನುದಾನವನ್ನು ಬಳಸಿ ಅಪಘಾತ ಸಂಭವಿಸುವ ಸ್ಥಳಗಳಲ್ಲಿ ಬ್ಯಾರಿಕೆಡ್ ಮತ್ತು ಟ್ರಾಫಿಕ್ ಸಿಗ್ನಲ್‌ಗಳನ್ನು ಅಳವಡಿಸಿ ಸುರಕ್ಷತಾ ಕ್ರಮಗಳನ್ನು ಕೈಗೊಳ್ಳಬೇಕು ಎಂದು ಅಧಿಕಾರಿಗಳಿಗೆ ಸೂಚಿಸಿದರು.

ಶಹಾಬಾದ ಪಟ್ಟಣ ವ್ಯಾಪ್ತಿಯಲ್ಲಿ ಬರುವ ಎನ್. ಎಚ್.150ಹಾಗೂಅಫಜಲಪೂರ ಪಿ.ಎಸ್. ವ್ಯಾಪ್ತಿಯಲ್ಲಿ ಎನ್. ಎಚ್. 150ಇ ರಲ್ಲಿ ಬರುವ ಬ್ಲ್ಯಾಕ್ ಸ್ಪಾಟ್‌ಗಳು ಸುಧಾರಣೆ- ಯ ಪ್ರಗತಿಯಲ್ಲಿರುತ್ತದೆಂದು ಕಾರ್ಯನಿರ್ವಾಹಕ

(2ನೇ ಪುಟ ನೋಡಿ)

## ಮೊಮ್ಮಕ್ಕಳ ರಕ್ಷಿಸಲು ಹೋಗಿ ತಾತ ಸೇರಿ ಮೂವರ ಜಲಸಮಾಧಿ

ಮಲ್ಲಮ್ಮ ನುಡಿ ವಾರ್ತೆ

ಮೈಸೂರು:ಮಾ.15:ನೀರಿನಲ್ಲಿ ಮುಳುಗಿ ತಾತ ಹಾಗೂ ಇಬ್ಬರು ಮೊಮ್ಮಕ್ಕಳು ಜಲಸಮಾಧಿಯಾದ ಘಟನೆ ಮೈಸೂರು ಜಿಲ್ಲೆಟಿ.ನರಸಿಪುರ ತಾಲೂಕಿನಲ್ಲಿ ನಡೆದಿದೆ.

ಚೌಡಯ್ಯ (70), ಭರತ್ (13), ಧನುಷ್ (10) ಮೃತ ದುರ್ದೈವಿಗಳು. ಮೃತರು ಟಿ.ನರಸೀಪುರ ಪಟ್ಟಣದ ತಿರುಮಕೂಡಲಿನ ನಿವಾಸಿಗಳಾಗಿದ್ದು, ಕಾವೇರಿ ನದಿ ಬಳಿಗೆ ತೆರಳಿದ್ದ ವೇಳೆ



ಘಟನೆ ಸಂಭವಿಸಿದೆ.

ಇಬ್ಬರು ಮೊಮ್ಮಕ್ಕಳು ನೀರಿನಲ್ಲಿ ಮುಳುಗಿದ್ದ ಹಿನ್ನೆಲೆ ತಾತ ಮಕ್ಕಳ ರಕ್ಷಣೆಗೆಂದು ತಾವೂ ನೀರಿಗಿಳಿದಿದ್ದರು. ಈ ವೇಳೆ ಇಬ್ಬರು ಮೊಮ್ಮಕ್ಕಳನ್ನು ರಕ್ಷಿಸಲಾಗದೇ ಚೌಡಯ್ಯ ಕೂಡ ಸಾವನ್ನಪ್ಪಿದ್ದಾರೆ. ಮೂವರ ಮೃತದೇಹಗಳನ್ನು ಟಿ.ನರಸೀಪುರ ಸಾರ್ವಜನಿಕ ಆಸ್ಪತ್ರೆಗೆ ರವಾನಿಸಲಾಗಿದೆ. ಟಿ.ನರಸೀಪುರ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ,ತನಿಖೆ ನಡೆದಿದೆ.

## ಜಾನಪದ ಕಲೆ ಉಳಿಸಿ ಬೆಳೆಸಬೇಕಾದ ಅಗತ್ಯವಿದೆ:ಸಚಿವ ಈಶ್ವರ ಖಂಡ್ರೆ





ಮಲ್ಲಮ್ಮ ನುಡಿ ವಾರ್ತೆ

ಬೀದರ:ಮಾ.15: ಜಾನಪದ ಕಲೆ ಅತೀ ಪ್ರಾಚೀನವಾದದ್ದು, ಮಾನವನ ಸಂಸ್ಕೃತಿ, ಪರಂಪರೆಯೊಂದಿಗೆ ಹಾಸು ಹೊಕ್ಕಾಗಿದೆ.ಜಾನಪದಕಲೆಯನ್ನು ಉಳಿಸಿಬೆಳೆಸಬೇಕಾದದ್ದುಎಲ್ಲರ ಜವಾಬ್ದಾರಿಯಾಗಿದೆಯೆಂದು ಅರಣ್ಯ, ಪರಿಸರ ಮತ್ತು ಜೀವಿಶಾಸ್ತ್ರ ಹಾಗೂ ಬೀದರ ಜಿಲ್ಲಾ ಉಸ್ತುವಾರಿ ಸಚಿವರಾದ ಈಶ್ವರ ಖಂಡ್ರೆ ತಿಳಿಸಿದರು.

ಕರ್ನಾಟಕ ಜಾನಪದ ಅಕಾಡೆಮಿರಂಗಮಂದಿರದಲ್ಲಿಂದು ಹಮ್ಮಿಕೊಂಡ 2023-2024ನೇ ಸಾಲಿನ ಗೌರವ ಪ್ರಶಸ್ತಿ, ತಜ್ಞ ಪ್ರಶಸ್ತಿ ಪ್ರಧಾನ ಹಾಗೂ ಪುಸ್ತಕ ಬಹುಮಾನ ವಿತರಣಾ ಸಮಾರಂಭ ಬೆಂಗಳೂರಿನಿಂದ ನೇರವಾಗಿ ವಿತರಣಾ ಸಮಾರಂಭದಲ್ಲಿ ಮೊಬೈಲ್ ಮುಖಾಂತರ ಸಂದೇಶ ನೀಡಿದರು.

ಕರ್ನಾಟಕವು ಜಾನಪದದ ತವರಾಗಿದೆ. ಎಲ್ಲ ಕಲೆ, ಸಾಹಿತ್ಯ, ಸಂಸ್ಕೃತಿ, ಪರಂಪರೆಯ ತಾಯಿಬೇರು ಜಾನಪದ. ಮನುಷ್ಯನ ಎಲ್ಲ ಹಂತಗಳಲ್ಲಿ ಜನಮಾನಸದಲ್ಲಿ ಜಾನಪದ ಹಾಸುಹೊಕ್ಕಾಗಿದೆ. ಮನುಷ್ಯ ಅಧುನಿಕತೆಗೆ ಎಷ್ಟೇ ಒಗ್ಗಿಕೊಂಡರು ಜಾನಪದ ಅತೀ ಮಹತ್ವದ ಕ್ಷೇತ್ರವಾಗಿದೆ. ಯಾವುದೇ ಜಾತಿ ಮತ ಧರ್ಮಕ್ಕೆ ಸೀಮಿತವಾಗದೇ ಜಾನಪದವು ಈಗಲೂ ಉಳಿದುಕೊಂಡಿದ್ದು ಮಾನವೀಯ ಮೌಲ್ಯಗಳನ್ನು ಬೆಳೆಸುವುದರಲ್ಲಿ ಮಹತ್ವದ ಪಾತ್ರ ವಹಿಸಿದೆಯೆಂದರು.

ಕಲ್ಯಾಣ ಕರ್ನಾಟಕದ ಎಲ್ಲ ಜಾನಪದ ಸಾಹಿತಿ ಕಲಾವಿದರ ಕಾರ್ಯಕ್ರಮಕ್ಕೆ ಕೆಕೆಆರ್‌ಡಿಬಿಯಿಂದ ಅನುದಾನ ನೀಡುವುದಾಗಿ ತಿಳಿಸಿದರು.

ಜಿಲ್ಲಾಧಿಕಾರಿಗಳಾದ ಶಿಲ್ಪಾ ಶರ್ಮಾ ಅವರು ಒಣಕೆಯ ಮೂಲಕ ಭತ್ತ ಕುಟ್ಟುವುದರ ಮೂಲಕ ಕಾರ್ಯಕ್ರಮಕ್ಕೆ ಚಾಲನೆ ನೀಡಿದರು.

ಕರ್ನಾಟಕ ಜಾನಪದ ಅಕಾಡೆಮಿಯ ಅಧ್ಯಕ್ಷ ಗೊಲ್ಲಹಳ್ಳಿ ಶಿವಪ್ರಸಾದ ಅವರು ಪ್ರಾಸ್ತಾವಿಕವಾಗಿ ಮಾತನಾಡಿ, ಜೀವ ವಿಕಾಸದಲ್ಲಿ ಜಾನಪದ ಪ್ರಮುಖ ಪಾತ್ರ ವಹಿಸುತ್ತದೆ. ಅಮ್ಮನ ಲಾಲಿ ಹಾಡಿನಿಂದ ಮನುಷ್ಯ ಮಣ್ಣಾಗುವ ತನಕ ಜಾನಪದಯಿದೆ. ನೈತಿ- ಕತೆ ಮರೆಯಾಗುತ್ತಿರುವ ಇಂದಿನ ದಿನಮಾನಗಳಲ್ಲಿ ಜಾನಪದ ನೈತಿಕತೆಯು ಅಸ್ತ್ರವಾಗಿದೆಯೆಂದರು.

ಈ ಕಾರ್ಯಕ್ರಮದಲ್ಲಿ ಜಿಲ್ಲಾ ಪಂಚಾಯತ ಮುಖ್ಯ ಕಾರ್ಯನಿರ್ವಾಹಕಅಧಿಕಾರಿಗಳಾದ ಡಾ.ಗಿರೀಶ ಬದೋಲೆ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಕಲಬುರಗಿ ವಿಭಾಗದ ಜಂಟಿ ನಿರ್ದೇಶಕರಾದ ಬಸವರಾಜ ಹೂಗಾರ, ಜಾನಪದ ಅಕಾಡೆಮಿ ಸದಸ್ಯರಾದ ವಿಜಯಕುಮಾರ ಸೋನಾರೆ, ಹಲತುಂಬಿ ಮೂರ್ತಿ, ಮಂಜುನಾಥ ರಾಮಣ್ಣ, ಮೆಹಬೂಬ ಕಿಲ್ಲೇದಾರ, ಶಿವಮೂರ್ತಿ ಭೀಮಬಾಯಿ, ಡಾ.ನಿಂಗಪ್ಪ ಮುದೆನೂರ ಸೇರಿದಂತೆ ಇನ್ನಿತರ ಅಕಾಡೆಮಿ ಸದಸ್ಯರು, ಕರ್ನಾಟಕ ಜಾನಪದ ಅಕಾಡೆಮಿ ಬೆಂಗಳೂರಿನ ಲೆಕ್ಕಾಧಿಕಾರಿ ಸುರೇಶ ನಾಯ್ಕ, ಶ್ರೀಮತಿ ಎನ್.ನಮ್ರತಾ ಸೇರಿದಂತೆ ಇನ್ನಿತರ ಅಕಾಡೆಮಿ ಸದಸ್ಯರು ಉಪಸ್ಥಿತರಿದ್ದರು.

(2ನೇ ಪುಟ ನೋಡಿ)

## ಶೇ.4 ಮೀಸಲಾತಿ ಮುಸ್ಲಿಮರಿಗೆ ಮಾತ್ರ ಸೀಮಿತವಲ್ಲ:ಡಿಕೆಶಿ

ಬೆಂಗಳೂರು:ಮಾ.15:ಸರ್ಕಾರಿ ಗುತ್ತಿಗೆ ಕಾಮಗಾರಿಗಳಲ್ಲಿ ಶೇ.4 ಮೀಸಲಾತಿ ನೀಡುವ ರಾಜ್ಯ ಸರ್ಕಾರದನಿರ್ಧಾರವುಮುಸ್ಲಿಮರಿಗೆ ಮಾತ್ರ ಸೀಮಿತವಾಗಿಲ್ಲ. ಎಲ್ಲಾ ಅಲ್ಪಸಂಖ್ಯಾತ ಸಮುದಾಯಗಳು ಮತ್ತು ಹಿಂದುಳಿದ ವರ್ಗಗಳಿಗೆ ಅನ್ವಯಿಸುತ್ತದೆ ಎಂದು ಡಿಸಿಎಂ ಡಿ.ಕೆ ಶಿವಕುಮಾರ್ ಹೇಳಿದರು.

ಗುತ್ತಿಗೆಯಲ್ಲಿ ಮುಸ್ಲಿಮರಿಗೆ ಮೀಸಲಾತಿಗೆ ಸಂಪುಟ ಒಪ್ಪಿಗೆ ನೀಡಿದ ವಿಚಾರಕ್ಕೆ ಸಂಬಂಧಿಸಿದಂತೆಬೆಂಗಳೂರಿನಲ್ಲಿಂದು ಮಾಧ್ಯಮಗಳೊಂದಿಗೆ ಅವರು ಮಾತನಾಡಿದರು.

ಶೇ.4 ಮೀಸಲಾತಿ ಮುಸ್ಲಿಮರಿಗೆ ಅಂತ ಎಲ್ಲಿದೆ? ಅಲ್ಪಸಂಖ್ಯಾತರಿಗೆ ಅಂತ ಇರೋದು. ಅಲ್ಪ



ಸಂಖ್ಯಾತರು ಅಂದ್ರೆ ಎಲ್ಲರೂ ಬರ್ತಾರೆ. ಎಲ್ಲಾ ಅಲ್ಪಸಂಖ್ಯಾತ ಸಮುದಾಯಗಳು ಮತ್ತು ಹಿಂದುಳಿದ ವರ್ಗಗಳಿಗೆ ಈ ಮೀಸಲಾತಿ ಅನ್ವಯಿಸುತ್ತದೆ. ಅವರ ಹಕ್ಕನ್ನು ಅವರಿಗೆ ಕೊಡ್ತಾ ಇದ್ದೇವೆ. ಆದ್ರೆ ಬಿಜೆಪಿಯವರೇ ವಿರೋಧ ಮಾಡ್ತಿದ್ದಾರೆ ಎಂದು ತಿಳಿಸಿದರು.

(2ನೇ ಪುಟ ನೋಡಿ)

## ಭಾರತದ ಕಾನೂನು ಜಾರಿ ವ್ಯವಸ್ಥೆ ಬಲಪಡಿಸುವಲ್ಲಿ ತಂತ್ರಜ್ಞಾನ ಮತ್ತು ತರಬೇತಿ ನಿರ್ಣಾಯಕ : ಗೃಹ ಸಚಿವ ಡಾ. ಜಿ ಪರಮೇಶ್ವರ್




ಮಲ್ಲಮ್ಮ ನುಡಿ ವಾರ್ತೆ

ಬೆಂಗಳೂರು,ಮಾ.15 :ಭಾರತದ ಕಾನೂನು ಜಾರಿ ವ್ಯವಸ್ಥೆಯನ್ನು ಬಲಪಡಿಸುವಲ್ಲಿ ತಂತ್ರಜ್ಞಾನ ಮತ್ತುತರಬೇತಿಯನಿರ್ಣಾಯಕ ಪಾತ್ರವನ್ನುವಹಿಸುತ್ತದೆ ಎಂದು ಗೃಹ ಸಚಿವ ಪರಮೇಶ್ವರ್ ತಿಳಿಸಿದರು.

ಇಂದುಬೆಂಗಳೂರಿನಹೋಟೆಲ್ ಜೆಡಬ್ಲ್ಯೂ ಮ್ಯಾರಿಯಟ್‌ನಲ್ಲಿ ಆಯೋಜಿಸಿದ್ದ ಅಪರಾಧ ತನಿಖಾ ಇಲಾಖೆ (ಸಿಐಡಿ) ಕರ್ನಾಟಕ, ಇನ್ಫೋಸಿಸ್ ಫೌಂಡೇಶನ್ ಮತ್ತು ಡೇಟಾ ಸೆಕ್ಯುರಿಟಿ ಕೌನ್ಸಿಲ್ ಆಫ್ ಇಂಡಿಯಾ (ಡಿಎಸ್‌ಸಿಐ) ರವರ ಜಂಟಿ ಸಹಯೋಗದಿಂದ ಸ್ಥಾಪಿತವಾದ ಸೈಬರ್ ಅಪರಾಧಗಳ ತನಿಖಾ ತರಬೇತಿ ಮತ್ತು ಸಂಶೋಧನಾ ಕೇಂದ್ರ ವತಿಯಿಂದ ಒಂದು ದಿನದ ಸೈಬರ್ ಅಪರಾಧ ತನಿಖಾ ಶೃಂಗಸಭೆಯಾದ "ಸಿಐಡಿ ಡಿಕೋಡ್-2025ನ್ನು ಉದ್ಘಾಟಿಸಿ ಮಾತನಾಡಿದರು.

ಸೈಬರ್ ಅಪರಾಧಗಳು ವಿಕಸನಗೊಳ್ಳುತ್ತಿದ್ದಂತೆ, ನಮ್ಮ ದೃಢತೆ ಮತ್ತು ಸಾಮರ್ಥ್ಯಗಳು ಕೂಡ ವಿಕಸನಗೊಳ್ಳಬೇಕು. ಈ ಹೋರಾಟದಲ್ಲಿ ಸಿಐಡಿ ಡಿಕೋಡ್-2025 ಕರ್ನಾಟಕದ ಮುಂದಾಳತ್ವಕ್ಕೆ ಸಾಕ್ಷಿಯಾಗಿದೆ. ಸೈಬರ್ ಅಪರಾಧ ತನಿಖಾ ಮ್ಯಾನುಯಲ್ 4ನೇ ಆವೃತ್ತಿ ಬಿಡುಗಡೆ, ಹ್ಯಾಕಥಾನ್ ಮತ್ತು ಸೈಬರ್‌ಲಾ, ಐಡಿಯಾಥಾನ್‌ನಂತಹ ಉಪಕ್ರಮಗಳು ಸುರಕ್ಷಿತ, ಡಿಜಿಟಲ್ ಕರ್ನಾಟಕ ಹಾಗೂ ಸುರಕ್ಷಿತ ಭಾರತವನ್ನು ನಿರ್ಮಿಸುವ ನಮ್ಮ ಅಚಲ ಬದ್ಧತೆಯನ್ನು ಪ್ರತಿಬಿಂಬಿಸುತ್ತದೆ ಎಂದು ತಿಳಿಸಿದರು.


ದಿನವಿಡೀ ಜರುಗುವ ಈ ಶೃಂಗಸಭೆಯು ಹಿರಿಯ ಪೊಲೀಸ್ ಅಧಿಕಾರಿಗಳು ಮತ್ತು (2ನೇ ಪುಟ ನೋಡಿ)

## ಕಲಬುರಗಿಯಲ್ಲಿ ಭಾರೀ ಬಿಸಿಲು; ಐನಾಪುರದಲ್ಲಿ 42.8 ಡಿಗ್ರಿ ಸೆಲ್ಸಿಯಸ್ ತಾಪಮಾನ ದಾಖಲು

ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ:ಮಾ.15:ಚಳಿಗಾಲ ಕಡಿಮೆಯಾಗುತ್ತಿದ್ದಂತೆತಾಪಮಾನ ದಿನದಿಂದ ದಿನಕ್ಕೆಹೆಚ್ಚಾಗುತ್ತಿದ್ದು, ಕಲ್ಯಾಣ ಕರ್ನಾಟಕದ ಕಲಬುರಗಿ ಜಿಲ್ಲೆಯ ಐನಾಪುರ ಹೋಬಳಿ ಗ್ರಾಮದಲ್ಲಿಕಳೆದ 24ಗಂಟೆಗಳಲ್ಲಿ ಗರಿಷ್ಠ ತಾಪಮಾನ 42.8 ಡಿಗ್ರಿ ಸೆಲ್ಸಿಯಸ್ ದಾಖಲಾಗಿದೆ.

ಐಎಂಡಿ ನೀಡಿದ ಮುನ್ಸೂಚನೆ ಪ್ರಕಾರ, ಮುಂದಿನ ಐದು ದಿನಗಳವರೆಗೆಉತ್ತರಕರ್ನಾಟಕದ ಒಳನಾಡಿನಲ್ಲಿ ಮಾರ್ಚ್ 15 ರಿಂದ 17 ರವರೆಗೆ ಗರಿಷ್ಠ ತಾಪಮಾನ 2 ರಿಂದ 4 ಡಿಗ್ರಿ ಸೆಲ್ಸಿಯಸ್ ಹೆಚ್ಚಾಗುವ ಸಾಧ್ಯತೆಯಿದೆ ಎಂದು ಹೇಳಿದೆ.



ಮಾರ್ಚ್ 18 ರಿಂದ 19 ರವರೆಗೆ ಉತ್ತರ ಕರ್ನಾಟಕದ ಜಿಲ್ಲೆಗಳಲ್ಲಿ ಪ್ರತ್ಯೇಕ ಸ್ಥಳಗಳಲ್ಲಿ ಇಂತಹ ಪರಿಸ್ಥಿತಿಗಳು ಉಂಟಾಗುವ ಸಾಧ್ಯತೆ ಇರುವುದರಿಂದ ಐಎಂಡಿ ಬಿಸಿ ಗಾಳಿಯ ಎಚ್ಚರಿಕೆಯನ್ನು ನೀಡಿದೆ.

ಆದಾಗ್ಯೂ, ಮುಂದಿನ 24 ಗಂಟೆಗಳ ಕಾಲ ದಕ್ಷಿಣ ಕರ್ನಾಟಕದಲ್ಲಿ ಗರಿಷ್ಠ ತಾಪಮಾನದಲ್ಲಿಯಾವುದೇದೊಡ್ಡ ಬದಲಾವಣೆಕಂಡುಬರುವುದಿಲ್ಲ. ಆದರೆ ಮುಂದಿನ ದಿನಗಳಲ್ಲಿ ತಾಪಮಾನ ಕ್ರಮೇಣ 2-3 ಡಿಗ್ರಿ ಸೆಲ್ಸಿಯಸ್ ಹೆಚ್ಚಾಗುತ್ತದೆ ಎಂದು ಹೇಳಿದೆ.

ಕರ್ನಾಟಕ ರಾಜ್ಯ ನೈಸರ್ಗಿಕ ವಿಕೋಪ ಮೇಲ್ವಿಚಾರಣಾ ಕೇಂದ್ರ(ಏಖಓಆಒಅ)ದ ಪ್ರಕಾರ, ಕಲಬುರಗಿ, ಬೀದರ್, ಬಾಗಲಕೋಟೆ, ರಾಯಚೂರು, ಯಾದಗಿರಿ ಮತ್ತು ವಿಜಯಪುರ ಜಿಲ್ಲೆಗಳು ಸೇರಿದಂತೆ ಹಲವಾರು ಜಿಲ್ಲೆಗಳ ಅನೇಕ ಸ್ಥಳಗಳು ಮತ್ತು ಬಾಗಲಕೋಟೆ ಹಾಗೂ ಬೆಳಗಾವಿ ಜಿಲ್ಲೆಗಳ ಕೆಲವು ಸ್ಥಳಗಳಲ್ಲಿ ನಿನ್ನೆ ಗರಿಷ್ಠ ತಾಪಮಾನ 40 ಡಿಗ್ರಿ ಸೆಲ್ಸಿಯಸ್ ಮತ್ತು ಅದಕ್ಕಿಂತ ಹೆಚ್ಚು ದಾಖಲಾಗಿದೆ. ಅದೇ ರೀತಿ, ತುಮಕೂರು,

(2ನೇ ಪುಟ ನೋಡಿ)

## ಒಂದನೇ ಪುಟದಿಂದ

### ತರಬೇತಿ ನಿರ್ಣಾಯಕ : ಗೃಹ ಸಚಿವ ಡಾ. ಜಿ ಪರಮೇಶ್ವರ್

ಸೈಬರ್ ಭದ್ರತಾ ತಜ್ಞರೊಂದಿಗೆ ಸಂವಾದ ಗೋಷ್ಠಿಗಳು, ಸೈಬರ್ ಕಾನೂನುಗಳ ಕುರಿತು ಒಂದು ಮಾಸ್ಟರ್ ಕ್ಲಾಸ್ ಮತ್ತು ಈ ಕ್ಷೇತ್ರದಲ್ಲಿ ಮುಂಚೂಣಿಯಲ್ಲಿರುವ ವೃತ್ತಿಪರರಿಂದ ತಾಂತ್ರಿಕ ಪ್ರಸ್ತುತಿ ಒಳಗೊಂಡಿವೆ. ವಿಶೇಷವಾಗಿ ಪೊಲೀಸ್ ಅಧಿಕಾರಿಗಳಿಗೆ ನೈಜ ಸನ್ನಿವೇಶಗಳಲ್ಲಿ ತಂತ್ರಾಂಶದ ಮೂಲಕ ಬೇಡಿಕೆ ಹಣ ಕುರಿತಾದ ದಾಳಿಗಳನ್ನು ನಿರ್ವಹಿಸುವ ಹಾಗೂ ಪ್ರತಿಕ್ರಿಯಿಸುವ ಕಾರ್ಯತಂತ್ರವನ್ನೊಳಗೊಂಡ ವಿನೂತನ ರೀತಿಯ ಟೇಬಲ್ ಟಾಪ್ ಅಭ್ಯಾಸಗಳನ್ನು ಒಳಗೊಂಡಿದೆ.ಇನ್ಫೋಸಿಸ್ ಫೌಂಡೇಶನ್ ಮತ್ತು ಡೇಟಾ ಸೆಕ್ಯುರಿಟಿ ಕೌನ್ಸಿಲ್ ಆಫ್ ಇಂಡಿಯಾ ರವರ ಪಾಲುದಾರಿಕೆಯ ಸಹಯೋಗದೊಂದಿಗೆ 2019 ರಲ್ಲಿ ಸೃಜಿಸಿದ ಸಿಸಿಐಟಿಆರ್ ಕೇಂದ್ರವು ಸೈಬರ್ ಅಪರಾಧ ತನಿಖೆಯಲ್ಲಿ ಸಾಮರ್ಥ್ಯ ವರ್ಧನೆಯ ಪ್ರಯತ್ನಗಳನ್ನು ಮುಂದುವರೆಸಿದೆ. ಇದುವರೆಗೆ ಸಿಸಿಐಟಿಆರ್ ನಿಂದ ಪೊಲೀಸ್, ನ್ಯಾಯಾಂಗ, ಅಭಿಯೋಜನೆ ಸೇರಿದಂತೆ ಇತರೆ ವಲಯಗಳ 46.000 ಕ್ಕೂ ಹೆಚ್ಚು ಅಧಿಕಾರಿ ಮತ್ತು ಸಿಬ್ಬಂದಿಯವರಿಗೆ ತರಬೇತಿ ನೀಡಲಾಗಿದೆ. ಮುಂಚೂಣಿಯಲ್ಲಿರುವ 12 ಕ್ಕೂ ಅಧಿಕ ಕಂಪನಿಗಳು ಅಭಿವೃದ್ಧಿಗೊಳಿಸಿರುವ ಅತ್ಯಾಧುನಿಕ ಡಿಜಿಟಲ್ ಫೊರೆನ್ಸಿಕ್ ಉಪಕರಣಗಳು ಮತ್ತು ಪರಿಹಾರಗಳನ್ನು ಪ್ರದರ್ಶಿಸುವ ಮಳಿಗೆಗಳನ್ನು ತೆರೆಯಲಾಗಿದೆ. ಪ್ರದರ್ಶಿತ ಮಳಿಗೆಗೆ ಭೇಟಿ ನೀಡುವವರಿಗೆ ಸೈಬರ್ ಅಪರಾಧ ತನಿಖೆಯ ಭವಿಷ್ಯವನ್ನು ರೂಪಿಸುವ ತಂತ್ರಜ್ಞಾನಗಳ ಬಗ್ಗೆ ನೇರ ಅನುಭವವನ್ನು ನೀಡುವ ವ್ಯವಸ್ಥೆ ಕಲ್ಪಿಸಲಾಗಿದೆ. ಇದು ಕಾನೂನು ಜಾರಿ ಮತ್ತು ಉದ್ಯಮಗಳ ನಡುವಿನ ಅಂತರವನ್ನು ಕಡಿಮೆ ಮಾಡುವ ಈ ಶೃಂಗಸಭೆಯ ಬದ್ಧತೆಯನ್ನು ಬಲಪಡಿಸುತ್ತದೆ.ಕರ್ನಾಟಕ ರಾಜ್ಯದ ಸನ್ಮಾನ್ಯ ಗೃಹ ಮಂತಿಗಳು, ಹ್ಯಾಕಥಾನ್ ಮತ್ತು ಸೈಬರ್ ಲಾ, ಐಡಿಯಾಥಾನ್‌ಗಳಲ್ಲಿ ವಿಜೇತರಾದ ವಿದ್ಯಾರ್ಥಿಗಳನ್ನು ಸನ್ಮಾನಿಸಿದರು. ಹ್ಯಾಕಥಾನ್‌ನಲ್ಲಿ ಪಾಲ್ಗೊಂಡ ವಿದ್ಯಾರ್ಥಿಗಳು "ಡೀಪ್ ಫೇಕ್ ಗಳ ಪತ್ತೆ, ಬ್ಲಾಕ್ ಚೈನ್ ತಂತ್ರಜ್ಞಾನ ಬಳಕೆ, ಮುಂತಾದ ಸಮಸ್ಯೆಗಳನ್ನು ಬಗೆಹರಿಸಲು ಸಾಫ್ಟವೇರ್ ಅಭಿವೃದ್ಧಿಪಡಿಸಿದರು. ಸೈಬರ್ ಲಾ ಐಡಿಯಾಥಾನ್‌ನಲ್ಲಿ ಪಾಲ್ಗೊಂಡವರು ಸೈಬರ್ ಅಪರಾಧಗಳ ಅಭಿಯೋಜನೆ ಬಲಪಡಿಸುವ ಬಗ್ಗೆ ಸೃಜನಶೀಲರಾಗಿ ಕಾನೂನಿನ ಚೌಕಟ್ಟುಗಳು ಮತ್ತು ನೀತಿಗಳ ಬಗ್ಗೆ ರೂಪುರೇಷುಗಳನ್ನು ಸಿದ್ಧಪಡಿಸಿದ್ದಾರೆ.ಇದೇ ಸಂದರ್ಭದಲ್ಲಿ ಸೈಬರ್ ಅಪರಾಧಗಳನ್ನು ಪರಿಣಾಮಕಾರಿಯಾಗಿ ನಿರ್ವಹಿಸಲು ಇತ್ತೀಚಿನ ಪ್ರವೃತ್ತಿಗಳು, ಸಾಧನಗಳು ಮತ್ತು ತಂತ್ರಗಳಿಂದ ಕೂಡಿದ ಪ್ರಮುಖ ಸಂಪನ್ಮೂಲವಾದ ಬಹು ನಿರೀಕ್ಷಿತ ಪರಿಷ್ಕೃತ "ಸೈಬರ್ ಅಪರಾಧ ತನಿಖಾ ಮ್ಯಾನುಯಲ್'ನ 4ನೇ ಆವೃತ್ತಿಯನ್ನು ಕೂಡ ಬಿಡುಗಡೆಗೊಳಿಸಿದರು.ಸೈಬರ್ ಅಪರಾಧಗಳಲ್ಲಿ ವೃದ್ಧಿಸುತ್ತಿರುವ ಸವಾಲುಗಳನ್ನು ಜ್ಞಾನದ ಹಂಚಿಕೆ, ಕೌಶಲ್ಯಾಭಿವೃದ್ಧಿ ಹಾಗೂ ಸಹಯೋಗದ ಮೂಲಕ ಪರಿಹರಿಸುವ ಸಲುವಾಗಿ ಕರ್ನಾಟಕದ 150 ಕ್ಕೂ ಹೆಚ್ಚು ಉನ್ನತ ಪೊಲೀಸ್ ಅಧಿಕಾರಿಗಳು ಹಾಗೂ ಇತರೆ ರಾಜ್ಯಗಳ ಮತ್ತು ಕೇಂದ್ರದ 55 ಉನ್ನತ ಪೊಲೀಸ್ ಅಧಿಕಾರಿಗಳು ಪಾಲ್ಗೊಂಡಿದ್ದರು.ಸೈಬರ್ ಜಗತ್ತಿನಲ್ಲಿ ಖಚಿಟಿಠಿಟತಿಚಿಡಿಜ, ಫಿಶಿಂಗ್, ಆಥೈನ್ ವಂಚನೆ ಸೇರಿದಂತೆ ಉದ್ಭವಿಸುತ್ತಿರುವ ಸಮಸ್ಯೆಗಳನ್ನು ಕಾನೂನು ಜಾರಿ, ಸರ್ಕಾರ ಹಾಗೂ ಖಾಸಗಿ ಪಾಲುದಾರರ ನಡುವಿನ ನಿರಂತರ ಸಹಯೋಗದ ಮೂಲಕ ಎದುರಿಸಲು ಕರೆ ನೀಡುವ ಮೂಲಕ ಶೃಂಗಸಭೆಗೆ ತೆರೆ ಎಳೆಯಲಾಯಿತು.

### ಬೆಳೆಸಬೇಕಾದ ಅಗತ್ಯವಿದೆ:ಸಚಿವ ಈಶ್ವರ ಖಂಡ್ರೆ

ಮೆರವಣಿಗೆಯಲ್ಲಿ ಬಸವರಾಜ ಧನ್ನೂರ, ಪರ್ನಾಡಿಂಸ್ ಹಿಪ್ಪಳಗಾಂವ, ಗೀತಾ ರೆಡ್ಡಿ, ಬೀದರ ವಿಶ್ವವಿದ್ಯಾಲಯದ ಕುಲಸಚಿವರಾದ ಸುರೇಖಾ, ಕನ್ನಡ ಸಾಹಿತ್ಯ ಪರಿಷತ್ತಿನ ಬೀದರ ಸುರೇಶ ಚನ್ನಶೆಟ್ಟಿ, ಸಿದ್ರಾಮಪ್ಪ ಮಾಸಿಮಾಡ, ಕನ್ನಡ ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕರಾದ ಸಿದ್ರಾಮ ಶಿಂಧೆ ಸೇರಿದಂತೆ ಇನ್ನಿತರರು ಉಪಸ್ಥಿತರಿದ್ದರು.

2024ನೇ ಸಾಲಿನ ವಾರ್ಷಿಕ ಗೌರವ ಪ್ರಶಸ್ತಿ ಪುರಸ್ಕೃತರು: ಬಿ.ಪಿ.ಪರಮೇಶ್ವರಪ್ಪ (ಭಜನೆ), ಸಿದ್ದರಾಜು ಆರ್. (ತಂಬೂರಿ ಪದ), ಜಯಂತಿ (ಪಾಡ್ದನ), ಎನ್.ಗಣೇಶ ಗಂಗೊಳ್ಳಿ (ಜಾನಪದ ಗಾಯನ), ಎಸ್.ಆರ್.ಸರೋಜ (ಬುಡಕಟ್ಟು ಕೋಲಾಟ), ಕಮಲಾ ಮರಗನ್ನವರ (ಚೌಡಿಕೆ ಪದ), ಪ್ರಭು ಬಸಪ್ಪ ಕುಂದರಗಿ (ಜಾನಪದ ಸಂಗೀತ), ಸೋಮಣ್ಣ ದುಂಡಪ್ಪ ಧನಗೊಂಡ (ಡೊಳ್ಳು ಕುಣಿತ), ಗಂಗಪ್ಪ ಮ. ಕರಡಿ (ಕರಡಿ ಮಜಲು), ಗಣಪು ಬಡವಾ ಗೌಡ (ಹಾಲಕ್ಕಿ ಸುಗ್ಗಿ ಕುಣಿತ), ಗಿರಿಜವ್ವ ಹನುಮಪ್ಪ ಬಣಕಾರ (ಸೋಬಾನೆ ಪದ), ಡಾ.ಗೋವಿಂದಪ್ಪ ರಾಮಚಮದ್ರಪ್ಪ (ಹಗಲುವೇಷ), ಬೋರಮ್ಮ (ತತ್ವಪದ ಗಾಯನ), ಮಾರುತಿ ಕೋಳಿ (ಜಾನಪದ ಗಾಯನ), ಯಲ್ಲಮ್ಮ (ತತ್ವಪದ), ಹೆಚ್.ಚಂದ್ರಶೇಖರ ಹಡಪದ (ಭಜನೆ). ಕೆ.ಶಂಕರಪ್ಪ (ಹಗಲುವೇಷ), ಗೋಪಣ್ಣ (ತತ್ವಪದ/ಭಜನೆ).

2024ನೇ ಸಾಲಿನ ತಜ್ಞ ಪ್ರಶಸ್ತಿ ಪುರಸ್ಕೃತರು: ಡಾ.ಮೈಲಹಳ್ಳಿ ರೇವಣ್ಣ (ಡಾ.ಜೀ.ಶಂ.ಪ.ತಜ್ಞ ಪ್ರಶಸ್ತಿ), ಡಾ.ವೆಂಕಟೇಶ ಇಂದ್ವಾಡಿ (ಡಾ.ಬಿ.ಎಸ್.ಗದ್ದಗಿಮಠ ತಜ್ಞ ಪ್ರಶಸ್ತಿ).

ಪುಸ್ತಕ ಬಹುಮಾನ ವಿಜೇತರು: ಬಿ.ಎಸ್.ಸ್ವಾಮಿ (2022 ಪ್ರಕಾರ: ಸಂಕೀರ್ಣ ಪುಸ್ತಕದ ಹೆಸರು: ಜಾನಪದ ಲೇಖನ ಗುಚ್ಛ ಬೆಂಗಳೂರು), ಡಾ.ಕುರುವ ಬಸವರಾಜು (2022 ಪ್ರಕಾರ: ಗದ್ಯ ಪುಸ್ತಕ ಹೆಸರು: ಭೌತಿಕ ವಸ್ತು ವಿಜ್ಞಾನ ಜಾನಪದ ಮತ್ತು ವಸ್ತು ಸಂಗ್ರಹಾಲಯಗಳ ಕುರಿತು ಲೇಖನಗಳು), ಡಾ.ನಾಗ ಹೆಚ್.ಹುಬ್ಬಿ (2022 ಪ್ರಕಾರ: ಸಂಶೋಧನೆ ಪುಸ್ತಕ ಹೆಸರು: ಆದಿವಾಸಿ ಸಂಸ್ಕೃತಿಕ ಬೆಂಗಳೂರು), ವ.ನಂ.ಶಿವರಾಮು (2023 ಪ್ರಕಾರ: ಸಂಶೋಧನೆ ಪುಸ್ತಕದ ಹೆಸರು: ಜನಪದ ಜಾನಪದ ಮತ್ತು ಕ್ಷೇತ್ರ ಕಾರ್ಯ ಮೈಸೂರು), ಡಾ.ವಿಜಯಶ್ರೀ ಸಬರದ (2023 ಪ್ರಕಾರ: ಸಂಕೀರ್ಣ ಪುಸ್ತಕದ ಹೆಸರು: ಸಬರದ ಮತ್ತು ಜಾನಪದ ಬೆಂಗಳೂರು).

2023ನೇ ಸಾಲಿನ ವಾರ್ಷಿಕ ಗೌರವ ಪ್ರಶಸ್ತಿ ಪುರಸ್ಕೃತರು: ಅಕ್ಕಮ್ಮ (ಸಂಪ್ರದಾಯ ಪದ), ಏಸಪ್ಪ ಗುಂಡಪ್ಪ (ಶಹನಾಯಿ ವಾದನ), ಶಾಂತಮ್ಮ ಜಂಬಣ್ಣ (ಬರ್ರಕಥೆ), ರೇವಣಪ್ಪ ನಿಂಗಪ್ಪ (ಡೊಳ್ಳಿನ ಹಾಡು ಮತ್ತು ಕುಣಿತ), ಡಾ.ರಾಮು ಮೂಲಿ (ಹಂತಿ ಪದ), ಅಮರಯ್ಯ ಸ್ವಾಮಿ (ಭಜನೆ), ಡಾ.ಕೆ.ಚಿನ್ನಪ್ಪಗೌಡ (ತಜ್ಞ ಪ್ರಶಸ್ತಿ ಪುರಸ್ಕೃತರು), ಡಾ.ಮಂಜುನಾಥ ಬೇವಿನಕಟ್ಟಿ (ತಜ್ಞ ಪ್ರಶಸ್ತಿ ಪುರಸ್ಕೃತರು),

2024ನೇ ಸಾಲಿನ ವಾರ್ಷಿಕ ಗೌರವ ಪ್ರಶಸ್ತಿ ಪುರಸ್ಕೃತರು: ಡಾ.ಜೋಗಿಲ ಸಿದ್ಧರಾಜು (ಜಾನಪದ ಗಾಯನ), ಸಿದ್ದಯ್ಯ ಸಿ.ಎಚ್. (ತತ್ವಪದ ಮತ್ತು ಗೀಗೀಪದ), ಎಂ.ಮಹೇಶ (ಡೊಳ್ಳು ಕುಣಿತ), (ಸುನಂದಮ್ಮ (ಕೋಲಾಟ), ವೆಂಕಟರಮಣಪ್ಪ (ಅರೆವಾದ್ಯ ತಮಟೆ), ಸಿದ್ದಪ್ಪ (ಕಿನ್ನರಿ ಜೋಗಿ), ಮಾರ್ತಾಂಡಪ್ಪ (ಭಜನೆ), ಎ.ಶ್ರೀನಿವಾಸ (ಹಗಲುವೇಷ), ಗೌರಮ್ಮ (ಹಸೆ ಚಿತ್ತಾರ), ಸಿ.ಮಂಜುನಾಥ (ನಗಾರಿ ವಾದನ), ಹುರುಗಲವಾಡಿ ರಾಮಯ್ಯ (ಜಾನಪದ ಗಾಯನ0, ಬಿ.ಟಿ.ಮಾನವ (ಕೋಲಾಟ ಸಂಘನಟ), ಕೆ.ಎಂ.ರಾಮಯ್ಯ (ಏಕತಾರಿ ತಂಬೂರಿ ಪದ), ಓಬಮ್ಮ ವೆಂಕಟೇಶ (ಸೋಬಾನೆ ಪದ), ರಂಗಯ್ಯ (ಪಟ ಕುಣಿತ), ತೋಪಣ್ಣ (ಕೀಲು ಕುದರೆ ಕುಣಿತ), ದೊಡ್ಡ ಕೂರ್ಲಪ್ಪ (ತಮಟೆ ವಾದನ), ಕದರಮ್ಮ (ಜಾನಪದ ಹಾಡುಗಾರ್ತಿ), ಕಾಟಮ್ಮ (ಕಥನ ಕಾವ್ಯ), ಸಿರಿಯಮ್ಮ (ಮಹಾಕಾವ್ಯ), ಟೀಕಪ್ಪ ಕಣ್ಣೂರ (ಡೊಳ್ಳು ಕುಣಿತ), ದೇವಕಿ ಕೆ.ಸಿ. (ಊರ್ಟಿಕೋಟ್ ಆಟ), ಗುರುಬಸವಯ್ಯ (ತಂಬೂರಿ ಪದ), ವೀರಭದ್ರಯ್ಯ (ತತ್ವಪದ ಗಾಯನ), ನಾಗರಾಜಪ್ಪ ವೈ.ಪಿ. (ಕರಡಿಗೆ ವಾದ್ಯ), ಗುರುಸಿದ್ದಯ್ಯ (ತಂಬೂರಿ ಪದ), ಅಪ್ಪಿ (ಜಾನಪದ ಸೂಲಗಿತ್ತಿ), ಲೀಲಾವತಿ (ನಾಟಿ ವೈದ್ಯೆ), ಗೌರಮ್ಮ (ಸೋಬಾನೆ ಪದ, ಅಂಧ ಕಲಾವಿದರು), ಶಿವನಪ್ಪ ಚಂದರಗಿ (ಡೊಳ್ಳು ಕುಣಿತ), ಹನಮಂತ ವೆಂಕಪ್ಪ ಸುಗತೇಕರ (ಗೊಂದಳಿ ಪದ), ಇಮಾಂಬಿ ಇಮಾಮಸಾಬ್ ದೊಡ್ಡಮನಿ (ಸೋಬಾನೆ ಪದ), ಬಸಪ್ಪ ಹಡಗಲಿ (ಗೀಗಿ ಪದ), ದಳವಾಯಿ ಚಿತ್ತಪ್ಪ (ಜಾನಪದ ಮಹಾಕಾವ್ಯ), ಸಾವಕ್ಕಾ ಓಲೇಕಾರ (ಸಂಪ್ರದಾಯ ಪದ), ಈರಯ್ಯ ಮೋಗೆರ (ಕಾರಿನಮನೆ ಮತ್ತು ಹೌಂದೆರಾಯನ ಕುಣಿತ).

### 42.8 ಡಿಗ್ರಿ ಸೆಲ್ಸಿಯಸ್ ತಾಪಮಾನ ದಾಖಲು

ಬಳ್ಳಾರಿ, ಗದಗ, ಕೊಪ್ಪಳ, ಉತ್ತರ ಕನ್ನಡ, ವಿಜಯನಗರ, ಚಿಕ್ಕಬಳ್ಳಾಪುರ ಮತ್ತು ಮೈಸೂರು ಜಿಲ್ಲೆಗಳ ಪ್ರತ್ಯೇಕ ಸ್ಥಳಗಳಲ್ಲಿ ತಾಪಮಾನವು ವಿಪರೀತ ಹೆಚ್ಚಾಗಿದೆ.

"ಕಲಬುರಗಿ ಜಿಲ್ಲೆಯಲ್ಲಿ 17 ಸ್ಥಳಗಳು, ಬೀದರ್ ಮತ್ತು ರಾಯಚೂರು ಜಿಲ್ಲೆಗಳಲ್ಲಿ ತಲಾ 13 ಸ್ಥಳಗಳು, ವಿಜಯಪುರ ಜಿಲ್ಲೆಯಲ್ಲಿ 10 ಸ್ಥಳಗಳು,

ಯಾದಗಿರಿ ಜಿಲ್ಲೆಯಲ್ಲಿ ಎಂಟು ಸ್ಥಳಗಳು, ಬಾಗಲಕೋಟೆ ಮತ್ತು ಬೆಳಗಾವಿ ಜಿಲ್ಲೆಗಳಲ್ಲಿ ತಲಾ ಆರು ಸ್ಥಳಗಳು, ತುಮಕೂರು ಜಿಲ್ಲೆಯಲ್ಲಿ ಮೂರು ಸ್ಥಳಗಳು, ಬಳ್ಳಾರಿ, ಗದಗ, ಕೊಪ್ಪಳ, ಉತ್ತರ ಕನ್ನಡ ಮತ್ತು ವಿಜಯನಗರ ಜಿಲ್ಲೆಗಳಲ್ಲಿ ತಲಾ ಎರಡು ಸ್ಥಳಗಳು, ಚಿಕ್ಕಬಳ್ಳಾಪುರ ಮತ್ತು ಮೈಸೂರು ಜಿಲ್ಲೆಗಳಲ್ಲಿ ಒಂದು ಸ್ಥಳದಲ್ಲಿ 40 ಡಿಗ್ರಿ ಸೆಲ್ಸಿಯಸ್ ಮತ್ತು ಅದಕ್ಕಿಂತ ಹೆಚ್ಚಿನ ತಾಪಮಾನ ದಾಖಲಿಸಿದೆ" ಎಂದು ಕೆಎಸ್‌ಎನ್‌ಡಿಎಂಸಿ ಬಿಡುಗಡೆ ಮಾಡಿದ ಹವಾಮಾನ ಬುಲೆಟಿನ್ ನಲ್ಲಿ ತಿಳಿಸಿದೆ.

### ಜಿಲ್ಲಾಧಿಕಾರಿ ಸೂಚನೆ

ಅಭಿಯಂತರರು ರಾಷ್ಟ್ರೀಯ ಹೆದ್ದಾರಿ ವಿಭಾಗ ಕಲಬುರಗಿ ರವರು ವರದಿ ಸಲ್ಲಿಸಿರುತ್ತಾರೆ ಅಧಿಕಾರಿ ಗಮನಕ್ಕೆ ತಂದರು.

ಆಟೋ ಸಂಘಟನೆಗಳಿಂದ ಇಲೆಕ್ಟ್ರಿಕ್ ಆಟೋಗಳ ಖರೀದಿಸಲು ಬ್ಯಾಂಕ್‌ಗಳಲ್ಲಿ ಸುಲಭವಾಗಿ ಲೋನ್ ಲಭ್ಯವಿರುವ ಕಾರಣದಿಂದ ಅನೇಕರು ಇಲೆಕ್ಟ್ರಿಕ್ ಆಟೋಗಳನ್ನು ಖರೀದಿಸುತ್ತಿದ್ದು,ಹೆಚ್ಚಾಗುತ್ತಿರುವ ಇಲೆಕ್ಟ್ರಿಕ್ ವಾಹನಗಳನ್ನು ಗಮನದಲ್ಲಿಟ್ಟುಕೊಂಡು ಜಿಲ್ಲೆಯಲ್ಲಿ ಇಲೆಕ್ಟ್ರಿಕಲ್ ಚಾರ್ಜಿಂಗ್ ಕೇಂದ್ರಗಳ ಸ್ಥಾಪನೆಗೆ ಸ್ಥಳವನ್ನು ಗುರುತಿಸಬೇಕೆಂದು ಜಿಲ್ಲಾಧಿಕಾರಿ ಅವರು ಹೇಳಿದರು. ಬ್ಲಾಕ್ ಸ್ಪಾಟ್ ಸ್ಥಳಗಳಿಗೆ ಸಂಬಂಧಿಸಿದಂತೆ ಮಹಾನಗರ ಪಾಲಿಕೆ, ಲೋಕೋಪಯೋಗಿ ಇಲಾಖೆ, ರಸ್ತೆ ಹೆದ್ದಾರಿ, ಕೆ.ಆರ್.ಐ.ಡಿ.ಎಲ್.,ಕೆ.ಆರ್.ಡಿ.ಸಿ.ಎಲ್. ಹಾಗೂ ಇತರೆ ರಸ್ತೆ ನಿರ್ಮಾಣ ಮಾಡುವ ಸಂಬಂಧಪಟ್ಟ ಕಾರ್ಯನಿರ್ವಾಹಕ ಅಭಿಯಂತರರು ಸ್ಥಳಕ್ಕೆ ಭೇಟಿ ನೀಡಿ ತುರ್ತಾಗಿ ಬಾಕಿ ಉಳಿದಿರುವ ರಸ್ತೆ ಕಾಮಗಾರಿಗಳನ್ನು ಪೂರ್ಣಗೊಳಿಸಬೇಕೆಂದು ಹೇಳಿದರು. ಜಿಲ್ಲೆಯಲ್ಲಿ 64 ಆಟೋಸ್ಟ್ಯಾಂಡ್‌ಗಳಿದ್ದು. ಅಲ್ಲದೆ ಹೆಚ್ಚುವರಿಯಾಗಿ ಇನ್ನು 72 ಆಟೋಸ್ಟ್ಯಾಂಡ್‌ಗನ್ನು ಸ್ಥಾಪಿಸಬೇಕೆಂದು ಆಟೋ ಸಂಘಗಳ ಬೇಡಿಕೆಯಿದ್ದು. ತ್ವರಿತವಾಗಿ ಮಹಾನಗರ ಪಾಲಿಕೆಯಿಂದ 10 ಆಟೋ ಸ್ಟ್ಯಾಂಡಗಳನ್ನು ಸ್ಥಾಪಿಸಬೇಕೆಂದು ಹೇಳಿದರು. ಜಿಲ್ಲೆಯಲ್ಲಿ ಸ್ಥಾಪಿಸುವ ಆಟೋ ಸ್ಟ್ಯಾಂಡ್‌ಗಳಿಗೆ ಕಾಮಾನುಗಳು ಬ್ಯಾರಿಕೇಡ್‌ಗಳನ್ನು ಅಳವಡಿಸಿ ಅಪಘಾತ ಸಂಭವಿಸುವುದನ್ನು ತಡೆಗಟ್ಟಲು ಲೈಟಿಂಗ್ ಮತ್ತು ಟ್ರಾಫಿಕ್ ಸಿಗ್ನಲ್ ಮತ್ತು ಬೀದಿ ದೀಪಗಳನ್ನು ಆಳವಡಿಸಿ ಯಾವುದೇ ರಸ್ತೆ ಅಪಘಾತ ಮತ್ತು ಟ್ರಾಫಿಕ್ ಸಮಸ್ಯೆಯಾಗದಂತೆ ಕ್ರಮವಹಿಸಬೇಕೆಂದು ಪೋಲಿಸ ಇಲಾಖೆ ಸೂಚಿಸಿದರು. ಈ ದಿಶೆಯಲ್ಲಿ ಮಹಾನಗರಪಾಲಿಕೆ,ಸಾರಿಗೆ ಮತ್ತು ಪೋಲಿಸ್ ಇಲಾಖೆ ಸಂಚಾರಿ ಪೋಲಿಸ್ ಇಲಾಖೆಯಿಂದ ಸ್ಥಳಗಳನ್ನು ಗುರುತಿಸಿದ್ದು 44 ಸ್ಥಳಗಳಲ್ಲಿ ಆಟೋಸ್ಟ್ಯಾಂಡ್‌ಗನ್ನು ಮಾಡಬೇಕೆಂದು ಸಭೆಯಲ್ಲಿ ನಿರ್ಧರಿಸಿದ್ದೇವೆ ಎಂದು ಅಧಿಕಾರಿಯೊಬ್ಬರು ಜಿಲ್ಲಾಧಿಕಾರಿಯವರಿಗೆ ಮಾಹಿತಿಯನ್ನು ನೀಡಿದರು. ಇದೇ ಸಂದರ್ಭದಲ್ಲಿ ಜಿಲ್ಲಾಮಟ್ಟದ ಅಧಿಕಾರಿಗಳು ಬೈಕ್ ರ್‍ಯಾಲಿ ಮೂಲಕ ಟ್ರಾಫಿಕ್ ಸಮಸ್ಯೆ ಕುರಿತು ಜಾಗೃತಿ ಮೂಡಿಸಬೇಕೆಂದು ತಿಳಿಸಿದರು.

ನಗರ ಪೋಲಿಸ್ ಆಯುಕ್ತ ಶರಣಪ್ಪ ಎಸ್.ಡಿ. ಜಿಲ್ಲೆಯಲ್ಲಿ ಏರಪೋರ್ಟ ಹೋಗುವ ದಾರಿ ಮತ್ತು ರಿಂಗ್‌ರೋಡನಲ್ಲಿ ಹೆಚ್ಚಿನ ಟ್ರಾಫಿಕ್ ಸಮಸ್ಯೆಯಿದ್ದು, ಸಾಯಂಕಾಲ 6 ರಿಂದ ರಾತ್ರಿ 9 ರವರೆಗೆ ಲೋಡೆಡ್ ವಾಹನಗಳಿಗೆ ಮಾರ್ಗ ಬದಲಾವಣೆಯನ್ನು ಮಾಡಿ ಟ್ರಾಫಿಕ್ ಸಮಸ್ಯೆಗಳನ್ನು ನಿಯಂತ್ರಿಸಬೇಕು, ರಸ್ತೆ ಸುರಕ್ಷತಾ ಕ್ರಮಗಳನ್ನು ಉಲ್ಲಂಘಿಸುವರ ಮೇಲೆ ಕಾನೂನು ಕ್ರಮ ಕೈಗೊಳ್ಳಬೇಕೆಂದು ಹೇಳಿದರು.

ಸಭೆಯಲ್ಲಿ ಜಿಲ್ಲಾ ಪೋಲಿಸ್ ವರಿಷ್ಠಾಧಿಕಾರಿ ಶ್ರೀನಿವಾಸ ಅಡ್ಡೂರು, ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಧಿಕಾರಿ. ಭಂವರ್ ಸಿಂಗ್ ಮೀನಾ, ಮಹಾನಗರ ಪಾಲಿಕೆಯ ಆಯುಕ್ತ ಅವಿನಾಶ ಶಿಂಧೆ ಸೇರಿದಂತೆ ಜಿಲ್ಲಾಮಟ್ಟದ ಅಧಿಕಾರಿಗಳು ಉಪಸ್ಥಿತರಿದ್ದರು.

### ಮಾತ್ರ ಸೀಮಿತವಲ್ಲ:ಡಿಕೆಶಿ

ಸಂಪುಟ ಸಭೆಯಲ್ಲಿ ಆಗಿದ್ದೇನು?

ರಾಜ್ಯದಲ್ಲಿ 2 ಕೋಟಿ ರೂ.ಗಳ ವರೆಗಿನ ಗುತ್ತಿಗೆ ಕಾಮಗಾರಿ ಹಾಗೂ 1 ಕೋಟಿ ರೂ. ವರೆಗಿನ ಖರೀದಿ, ಸೇವೆಗಳಲ್ಲಿ ಮುಸ್ಲಿಮರಿಗೆ ಶೇ.4 ರಷ್ಟು ಮೀಸಲಾತಿ ಸೇರಿ ಎಸ್ಸಿ, ಎಸ್ಟಿ, ಪ್ರವರ್ಗ–1, 2ಎ ವರ್ಗಗಳಿಗೆ ಮೀಸಲಾತಿ ಕಲ್ಪಿಸುವ ಕೆಟಿಟಿಪಿ ಕಾಯ್ದೆ 1999ರ ತಿದ್ದುಪಡಿ ವಿಧೇಯಕಕ್ಕೆ ಶುಕ್ರವಾರ ಸಂಪುಟ ಸಭೆ ಒಪ್ಪಿಗೆ ಸೂಚಿಸಲಾಯಿತು.

ಮುಖ್ಯಮಂತ್ರಿ ಸಿದ್ದರಾಮಯ್ಯ ನೇತೃತ್ವದಲ್ಲಿ ನಡೆದ ಸಂಪುಟ ಸಭೆಯಲ್ಲಿ ಗುತ್ತಿಗೆಯಲ್ಲಿ ಮುಸ್ಲಿಮರಿಗೆ ಮೀಸಲಾತಿ ವಿಚಾರವಾಗಿ ಬಜೆಟ್?ನಲ್ಲಿ ಘೋಷಣೆ ಮಾಡಿದಂತೆ ಸದನಕ್ಕೆ ವಿಧೇಯಕ ತರಲು ಅನುಮೋದನೆ ನೀಡಲಾಗಿದೆ. 1 ಕೋಟಿವರೆಗಿನ ಕಾಮಗಾರಿಗಳಲ್ಲಿ ಮುಸ್ಲಿಮರಿಗೆ ಮೀಸಲಾತಿ ನೀಡುವುದು. ಹಿಂದುಳಿದ, ಇತರೇ ಹಿಂದುಳಿದ ವರ್ಗಗಳಿಗೆ ಮಾತ್ರ ಇದ್ದ ಕಾಮಗಾರಿ ಮೀಸಲಾತಿಯನ್ನು ಮುಸ್ಲಿಂ ಸಮುದಾಯಕ್ಕೂ ಮೀಸಲಾತಿ ವಿಸ್ತರಿಸಿ ಗುತ್ತಿಗೆ ನೀಡಲು ಅವಕಾಶ ಕೊಡಲು ನಿರ್ಧಾರ ಮಾಡಲಾಯಿತು. ಎಸ್?ಸಿ ಎಸ್?ಟಿ ಸಮುದಾಯಕ್ಕೆ ಈ ಹಿಂದೆ ಇದ್ದ 1 ಕೋಟಿವರೆಗಿನ ಮೊತ್ತ ವಿಸ್ತರಿಸಿ 2 ಕೋಟಿವರೆಗೆ ಮೀಸಲಾತಿ ಅವಕಾಶ ಕಲ್ಪಿಸಲಿದೆ. ವಿಧೇಯಕವನ್ನು ಇದೇ ಅಧಿವೇಶನದಲ್ಲಿ ಮಂಡಿಸಲು ಸಚಿವ ಸಂಪುಟ ಅನುಮೋದನೆ ನೀಡಿತು.

## ಅಬಕಾರಿ ದಾಳಿ 20 ಲೀ ಸೇಂದಿ ಜಪ್ತಿ

ಮಲ್ಲಮ್ಮ ನುಡಿ ವಾರ್ತೆ

ಇಂಡಿ :ಮಾ.15: ವಲಯ ವ್ಯಾಪ್ತಿಯ ಚಡಚಣ ತಾಲೂಕಿನ ಚಡಚಣ–ದೇವರ ನಿಂಬರಗಿ ಕ್ರಾಸ್ ನಲ್ಲಿ ಎಡಬದಿಯ ರಸ್ತೆಯ ಮೇಲೆ ಅಬಕಾರಿ ದಾಳಿ ಮಾಡಿ ಒಟ್ಟು 20 ಲೀಟರ್ ಸೇಂದಿಯನ್ನು ಜಪ್ತು ಪಡಿಸಿಕೊಂಡಿದ್ದು ಆರೋಪಿತನಾದ ಸದಾಶಿವ ಗೋಪಾಲ ವಾಘಮೋರೆ ಸಾ– ವಾರ್ಡ ನಂ–8 ಇಂದಿರಾ ನಗರ ಚಡಚಣ ತಾಲೂಕು ಚಡಚಣ ಸದರಿ ಆರೋಪಿತರ ವಿರುದ್ಧ ಪ್ರಕರಣ ದಾಖಲಿಸಿಕೊಂಡು ಮಾನ್ಯ ನ್ಯಾಯಾಲಯಕ್ಕೆ ಹಾಜರು ಪಡಿಸಲಾಯಿತು.

ರಾಹುಲ್ ಎಸ್ ನಾಯಕ ಅಬಕಾರಿ ನಿರೀಕ್ಷಕರು ಇಂಡಿ ವಲಯ ರವರ ನೇತೃತ್ವದಲ್ಲಿ ವಾದಿರಾಜ ಎನ್ ಆಶ್ರೀತ ಅಬಕಾರಿ ಉಪ ನಿರೀಕ್ಷಕರು ಇಂಡಿ ವಲಯ ರವರು ಪ್ರಕರಣವನ್ನು ದಾಖಲಿಸಿಕೊಂಡರು. ಸಿಬ್ಬಂದಿಗಳಾದ, ಅಶೋಕ ಎಸ್ ಗೋಣಸಗಿ, ಶಿವಾನಂದ ಕೊಡತೆ, ಮಂಜುನಾಥ ಬಡಿಗೇರ, ಬಸವಂತ ಭೈರಗೊಂಡ, ಮಲ್ಲಪ್ಪ ಬಿರಾದಾರ. ದಾಳಿಯಲ್ಲಿ ಪಾಲ್ಗೊಂಡಿದರು ಅಂತಾ ರಾಹುಲ್ ನಾಯಕ ಅಬಕಾರಿ ನಿರೀಕ್ಷಕರು ಇಂಡಿ ವಲಯ ರವರು ತಿಳಿಸಿರುತ್ತಾರೆ.

## ಡ್ಯಾನ್ಸ್ ಮಾಡು,ಇಲ್ಲದಿದ್ದರೆ ಸಸ್ಪೆಂಡ್ ಆಗ್ತೀಯಾ!

### ಪೊಲೀಸ್ ಅಧಿಕಾರಿಗೆ ತೇಜ್ ಪ್ರತಾಪ್ ವಾರ್ನಿಂಗ್




ಮಲ್ಲಮ್ಮ ನುಡಿ ವಾರ್ತೆ

ಪಾಟ್ನಾ:ಮಾ.15:ಯೂನಿಫಾರ್ಮ್ ನಲ್ಲಿದ್ದ ಪೊಲೀಸ್ ಅಧಿಕಾರಿಗೆ ಡ್ಯಾನ್ಸ್ ಮಾಡುವಂತೆ ರಾಷ್ಟೀಯ ಜನತಾದಳ (ಆರ್ ಜೆಡಿ) ನಾಯಕ ತೇಜ್ ಪ್ರತಾಪ್ ಯಾದವ್ ಆದೇಶಿಸಿರುವುದು ಕ್ಯಾಮರಾದಲ್ಲಿ ಸೆರೆಯಾಗಿದೆ.

ಹೌದು.ಶುಕ್ರವಾರ ಪಾಟ್ನಾದಲ್ಲಿನ ತನ್ನ ನಿವಾಸದ ಬಳಿ ಹೋಳಿ ಸಂಭ್ರಮಾಚರಣೆ ವೇಳೆಯಲ್ಲಿ ಕರ್ತವ್ಯದಲ್ಲಿ ನಿರತರಾಗಿದ್ದ ಪೊಲೀಸ್ ಅಧಿಕಾರಿಗೆ ತೇಜ್ ಪ್ರತಾಪ್ ಡ್ಯಾನ್ಸ್ ಮಾಡುವಂತೆ ಹೇಳಿದ್ದಾರೆ. ಡ್ಯಾನ್ಸ್ ಮಾಡಲು ನಿರಾಕರಿಸಿದರೆ ಸಸ್ಪೆಂಡ್ ಆಗ್ತೀಯಾ ಎಂದು ಹೇಳುವುದು ವಿಡಿಯೋದಲ್ಲಿ ಸೆರೆಯಾಗಿದೆ. ವಿಡಿಯೋ ದೃಶ್ಯಾವಳಿಗಳು ಸಾಮಾಜಿಕ ಜಾಲತಾಣಗಳಲ್ಲಿ ವೈರಲ್ ಆಗಿವೆ.

ಪಕ್ಷದ ಕಾರ್ಯಕರ್ತರೊಂದಿಗೆ ಹೋಳಿ ಹಬ್ಬ ಆಚರಿಸುತ್ತಿದ್ದ ಯಾದವ್, ಗೀತೆಯೊಂದನ್ನು ಡ್ಯಾನ್ಸ್ ಮಾಡುವಂತೆ ಪೊಲೀಸ್ ಅಧಿಕಾರಿಗೆ ನಿರ್ದೇಶಿಸುವುದು ವಿಡಿಯೋದಲ್ಲಿದೆ. ಯಾದವ್ ನಡೆಗೆ ಕೆಲವರು ಸಾಮಾಜಿಕ ಜಾಲತಾಣಗಳಲ್ಲಿ ತೀವ್ರವಾಗಿ ಟೀಕಿಸುತ್ತಿದ್ದರೆ ಮತ್ತೆ ಕೆಲವರು ಹೋಳಿಯಲ್ಲಿ ಇದು ಚಿಕ್ಕ ತಮಾಷೆ ಅಷ್ಟೇ ಎಂದಿದ್ದಾರೆ.

ನಾನು ಸಾಂಗ್ ಹೇಳ್ತಿನಿ, ನೀನು ಡ್ಯಾನ್ಸ್ ಮಾಡು. ಇಲ್ಲದಿದ್ದರೆ ಸಸ್ಪೆಂಡ್ ಆಗ್ತೀಯಾ. ಕೆಟ್ಟದಾಗಿ ಯೋಚಿಸಬೇಡ. ಇದು ಹೋಳಿ ಎಂದು ತೇಜ್ ಪ್ರತಾಪ್ ಯಾದವ್ ಪೊಲೀಸ್ ಅಧಿಕಾರಿಗೆ ಹೇಳ್ತಾರೆ. ಈ ಘಟನೆಗೆ ಮೈತ್ರಿ ಪಾಲುದಾರ ಪಕ್ಷ ಕಾಂಗ್ರೆಸ್ ಸೇರಿದಂತೆ ಜೆಡಿಯು, ಬಿಜೆಪಿ ತೀವ್ರವಾಗಿ ಟೀಕಿಸಿವೆ. ಜಂಗಲ್ ರಾಜ್ ಕೊನೆಯಾಗಿದೆ. ಆದರೆ, ಡ್ಯಾನ್ಸ್ ಮಾಡದಿದ್ದರೆ ಸಸ್ಪೆಂಡ್ ಮಾಡುವುದಾಗಿ ಲಾಲು ಪುತ್ರ ಪೊಲೀಸ್ ಅಧಿಕಾರಿಗೆ ಬೆದರಿಕೆ ಹಾಕಿದ್ದಾರೆ.

ಬಿಹಾರ ಈಗ ಬದಲಾಗಿದೆ. ಬಿಹಾರದಲ್ಲಿ ಬದಲಾದ ಪರಿಸರದಲ್ಲಿ ಇಂತಹ ನಡವಳಿಕೆಗಳು ನಡೆಯುವುದಿಲ್ಲ ಎಂಬುದನ್ನು ತೇಜಸ್ವಿ ಯಾದವ್, ತೇಜ್ ಪ್ರತಾಪ್ ಯಾದವ್ ಅಥವಾ ಅಥವಾ ಲಾಲು ಪ್ರಸಾದ್ ಯಾದವ್ ಕುಟುಂಬದಲ್ಲಿ ಯಾವುದೇ ಸದಸ್ಯರು ಅರ್ಥ ಮಾಡಿಕೊಳ್ಳಬೇಕಾದ ಅಗತ್ಯವಿದೆ ಎಂದು ಜೆಡಿಯು ವಕ್ತಾರ ರಾಜೀವ್ ರಂಜನ್ ಪ್ರಸಾದ್ ಹೇಳಿದ್ದಾರೆ

ಕಾನೂನನ್ನು ಕೈಗೆ ತೆಗೆದುಕೊಳ್ಳುವುದು ಆರ್‌ಜೆಡಿಯ ಸಂಪ್ರದಾಯವಾಗಿದೆ ಎಂದು ಬಿಜೆಪಿ ವಕ್ತಾರ ಶೆಹಜಾದ್ ಪೂನವಲ್ಲ ಆರೋಪಿಸಿದ್ದಾರೆ. ಇದು ದುರಾದೃಷ್ಟಕರ ಘಟನೆಯಾಗಿದೆ. ತೇಜ್ ಪ್ರತಾಪ್ ಹೇಳಿರುವುದನ್ನು ಖಂಡಿಸುತ್ತೇನೆ. ಸಸ್ಪೆಂಡ್ ಮಾಡುವ ಅಧಿಕಾರ ನನಗಿಲ್ಲ ಎಂಬುದನ್ನು ಅವರು ಅರಿತಿಲ್ಲ ಎಂದು ಕಾಂಗ್ರೆಸ್ ನಾಯಕ ರಶೀದ್ ಅಲ್ವಿ ಹೇಳಿದ್ದಾರೆ.

## ರೈತರಿಂದ ಕುಸುಬೆ ಉತ್ಪನ್ನ ಖರೀದಿಸಲು ಜಿಲ್ಲೆಯಲ್ಲಿ 09 ಖರೀದಿ ಕೇಂದ್ರ ಪ್ರಾರಂಭ

ಮಲ್ಲಮ್ಮ ನುಡಿ ವಾರ್ತೆ

ಬೀದರ:ಮಾ.15: ಎಫ್‌ಎಕ್ಯೂ ಗುಣಮಟ್ಟದ ಕುಸುಬೆ ಉತ್ಪನ್ನವನ್ನು ಎಂಎಸ್‌ಪಿ ದರದಲ್ಲಿ ರೈತ–ರಿಂದ ಖರೀದಿಸಲು ಬೀದರ ಜಿಲ್ಲೆಯಲ್ಲಿ ಒಟ್ಟು 09 ಖರೀದಿ ಕೇಂದ್ರಗಳನ್ನು ತೆರೆಯಲಾಗಿದೆ ಎಂದು ಜಿಲ್ಲಾಧಿಕಾರಿಗಳು ಹಾಗೂ ಜಿಲ್ಲಾ ಟಾಸ್ಕ್‌ಫೋರ್ಸ್ ಸಮಿತಿಯ ಅಧ್ಯಕ್ಷರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.2024–25ನೇ ಸಾಲಿಗೆ ಭಾರತ ಸರ್ಕಾರವು ಘೋಷಿಸಿರುವ ಕನಿಷ್ಠ ಬೆಂಬಲ ಬೆಲೆ ಯೋಜನೆಯಡಿ ಬೀದರ ಜಿಲ್ಲೆಯಲ್ಲಿ ಹಿಂಗಾರು ಹಂಗಾಮಿನಲ್ಲಿ ರೈತರು ಬೆಳೆದಿರುವ ಎಫ್‌ಎಕ್ಯೂ ಗುಣಮಟ್ಟದ ಕುಸುಬೆ ಉತ್ಪನ್ನವನ್ನು ಪ್ರತಿ ಕ್ವಿಂಟಾಲಿಗೆ ರೂ. 5940–00 ದರದಲ್ಲಿ ಬೆಂಬಲ ಬೆಲೆ ಮಾರ್ಗಸೂಚಿಗಳನ್ವಯ ರೈತರಿಂದ ಖರೀದಿಸಲು ಕರ್ನಾಟಕ ಸಹಕಾರ ಎಣ್ಣೆ ಬೀಜ ಬೆಳೆಗಾರರ ಮಹಾ ಮಂಡಳ ನಿಯಮಿತ (ಕೆಓಎಫ್) ರಾಜ್ಯದ ವತಿಯಿಂದ ಖರೀದಿ ಸಂಸ್ಥೆಯನ್ನಾಗಿ ನೇಮಿಸಿ, ರಾಜ್ಯ ಸರ್ಕಾರ ಆದೇಶಿಸಿರುತ್ತದೆ. ಈ ಆದೇಶದನ್ವಯ ಮಾನ್ಯ ಜಿಲ್ಲಾಧಿಕಾರಿಗಳು ಬೀದರ ಹಾಗೂ ಅಧ್ಯಕ್ಷರು ಜಿಲ್ಲಾ ಟಾಸ್ಕ್‌ಫೋರ್ಸ್ ಸಮಿತಿ ಬೀದರ ರವರ ಅಧ್ಯಕ್ಷತೆಯಲ್ಲಿ ದಿನಾಂಕ: 15–03–2025 ರಂದು ಜರುಗಿದ ಸಭೆಯ ನಡವಳಿಗಳ ಪ್ರಕಾರ ಈ ಖರೀದಿ ಕೇಂದ್ರಗಳನ್ನು ತೆರೆಯಲಾಗಿದೆ.ಕುಸುಬೆ ಖರೀದಿ ಕೇಂದ್ರಗಳ ವಿವರ: ಔರಾದ (ಬಾ) ತಾಲ್ಲೂಕು: ಪಿ.ಎ.ಸಿ.ಎಸ್. ಔರಾದ (ಬಾ), ಪಿ.ಎ.ಸಿ.ಎಸ್. ಕಮಲನಗರ, ಬಸವಕಲ್ಯಾಣ ತಾಲ್ಲೂಕು: ಪಿ.ಎ.ಸಿ.ಎಸ್. ನಾರಾಯಣಪೂರ್, ಪಿ.ಎ.ಸಿ.ಎಸ್. ಮುಡಬಿ, ಪಿ.ಎ.ಸಿ.ಎಸ್. ಗಡಿಗೌಡಗಾಂವ್, ಭಾಲ್ಕಿ ತಾಲ್ಲೂಕು: ಪಿ.ಎ.ಸಿ.ಎಸ್. ಭಾತಂಬ್ರಾ, ಪಿ.ಎ.ಸಿ.ಎಸ್. ಕೋಣಮೇಳಕುಂದಾ, ಬೀದರ ತಾಲ್ಲೂಕು: ಪಿ.ಎ.ಸಿ.ಎಸ್. ಜನವಾಡಾ, ಹುಮನಾಬಾದ ತಾಲ್ಲೂಕು: ಪಿ.ಎ.ಸಿ.ಎಸ್. ಚಿಟಗುಪ್ಪಾ,

ರಾಜ್ಯ ಸರ್ಕಾರದ ಆದೇಶ ಹೊರಡಿಸಿದ ದಿನಾಂಕದಿಂದ ರೈತರ ನೋಂದಣಿ ಕಾಲಾವಧಿಯನ್ನು 80 ದಿನಗಳವರೆಗೆ ಹಾಗೂ ಖರೀದಿ ಅವಧಿಯನ್ನು 90 ದಿನಗಳವರೆಗೆ ನಿಗಧಿಪಡಿಸಿದೆ. ಖರೀದಿ ಪ್ರಕ್ರಿಯೆಯಲ್ಲಿ ರೈತರು ಪ್ರತಿ ಎಕರೆಗೆ ಗರಿಷ್ಠ 5 ಕ್ವಿಂಟಾಲ್‌ನಂತೆ ಹಾಗೂ ಪ್ರತಿ ರೈತರಿಗೆ ಗರಿಷ್ಠ 20 ಕ್ವಿಂಟಾಲ್‌ನಂತೆ ಎಫ್‌ಎಕ್ಯೂ \ಗುಣಮಟ್ಟದ ಕುಸುಬೆ ಉತ್ಪನ್ನವನ್ನು ಮಾರಾಟ ಮಾಡಬಹುದಾಗಿದೆ. ಖರೀದಿ ಕೇಂದ್ರಗಳು ಲಾಗ್‌ಇನ್ ಕ್ರೆಡೆನ್ಸಿಯಲ್ಲಳನ್ನು ಪಡೆದು ನೋಂದಣಿ ಪ್ರಕ್ರಿಯೆ ಪ್ರಾರಂಭಿಸಿದ ಮೇಲೆ ನೋಂದಣಿ ಮಾಡಿಕೊಳ್ಳಲು ಇಚ್ಛಿಸುವ ರೈತರು ಸಮೀಪದ ಖರೀದಿ ಕೇಂದ್ರಗಳಿಗೆ ನೋಂದಣಿ ಮಾಡಿಸಿಕೊಂಡು ತಮ್ಮ ಕುಸುಬೆ ಉತ್ಪನ್ನವನ್ನು ಕನಿಷ್ಠ ಬೆಂಬಲ ಬೆಲೆ ಯೋಜನೆಯಡಿ ಮಾರಾಟ ಮಾಡಿ ಸದರಿ ಯೋಜನೆಯ ಸದುಪಯೋಗಪಡೆದುಕೊಳ್ಳಬೇಕೆಂದು ಜಿಲ್ಲಾಧಿಕಾರಿಗಳು ತಿಳಿಸಿದ್ದಾರೆ.

## ಜೀವನ ದರ್ಶನ ಪ್ರವಚನ ಮಾಲೆ ಇಂದಿನಿಂದ

ಮಲ್ಲಮ್ಮ ನುಡಿ ವಾರ್ತೆ



ಭಾಲ್ಕಿ:ಮಾ.15: ಪಟ್ಟಣದ ಭಾಲ್ಕೇಶ್ವರ ಮಂದಿರ ಪ್ರಾಂಗಣದಲ್ಲಿ, 89ನೇ ತ್ರೀಮೂರ್ತಿ ಮಹಾಶಿವರಾತ್ರಿ ಮಹೋತ್ಸವ ನಿಮಿತ್ಯ, ಮಾ.16 ರವಿವಾರ ದಿಂದ 18 ರ ಮಂಗಳವಾರದ ವರೆಗೆ 3 ದಿನಗಳ ಕಾಲ, ಜೀವನ ದರ್ಶನ ಪ್ರವಚನ ಮಾಲೆ ನಡೆಯಲಿದೆ ಎಂದು ಪ್ರಜಾಪಿತ ಬ್ರಹ್ಮಕುಮಾರಿ ಈಶ್ವರೀಯ ವಿಶ್ವವಿದ್ಯಾಲಯ ಭಾಲ್ಕಿಯ ರಾಜಯೋಗಿನಿ ಬ್ರಹ್ಮಕುಮಾರಿ ರಾಧಾ ಸಹೋದರಿ ತಿಳಿಸಿದ್ದಾರೆ.

ಈ ಕುರಿತು ಪ್ರಕಟಣೆ ಹೊರಡಿಸಿದ ಅವರು, ಜೀವನ ದರ್ಶನ ಪ್ರವಚನ ಮಾಲೆಯು ವರಿಷ್ಟ ರಾಜಯೋಗ ಶಿಕ್ಷಕಿ ಹುಬ್ಬಳ್ಳಿಯ, ರಾಜಯೋಗಿನಿ ಬ್ರಹ್ಮಕುಮಾರಿ ವೀಣಾ ಸಹೋದರಿ ಯವರಿಂದ ನಡೆಯಲಿದ್ದು, ಮಾ.16 ರಂದು ರವಿವಾರ ಸಾಯಂಕಾಲ 5 ಗಂಟೆಯಿಂದ 7 ಗಂಟೆಯ ವರೆಗೆ ಪ್ರವಚನ ನಡೆಯುವುದು. ಈ ಸಂದರ್ಭದಲ್ಲಿ ಹಲಬರ್ಗಾ ಮಠದ ಶ್ರೀ ಹಾವಗಿಲಿಂಗೇಶ್ವರ ಶಿವಾಚಾರ್ಯರು ಮತ್ತು ನ್ಯಾಯಾಧೀಶ ಆನಂದ ಕೊಣ್ಣೂರ, ಡಿವಾಯ್‌ಎಸ್‌ಪಿ ಶಿವಾನಂದ ಪವಾಡಶೆಟ್ಟಿ ಉಪಸ್ಥಿತರಿರುವರು. ಮಾ.17 ಮತ್ತು 18 ರಂದು ಮುಂಜಾನೆ 6.30 ರಿಂದ 8 ಗಂಟೆಯವರೆಗೆ ಮತ್ತು ಸಾಯಂಕಾಲ 5 ರಿಂದ 7 ಗಂಟೆಯ ವರೆಗೆ ವೀಣಾ ಸಹೋದರಿಯರಿಂದ ಪ್ರವಚನ ಮಾಲೆ ನಡೆಯುವುದು. ಮಾ.17 ರ ಸೋಮವಾರ ಸಾಯಂಕಾಲ 5 ರಿಂದ 7 ಗಂಟೆಯ ವರೆಗೆ ನಡೆಯಲಿರುವ ಪ್ರವಚನ ಮಾಲೆಯಲ್ಲಿ ಪುರಸಭೆ ಅಧ್ಯಕ್ಷೆ ಶಶಿಕಲಾ ಸಿಂಧನಕೇರೆ ಮತ್ತು ಪತ್ರಕರ್ತ ಜಯರಾಜ ದಾಬಶೆಟ್ಟಿ ಉಪಸ್ಥಿತರಿರುವರು. ಮಾ.18 ರ ಮಂಗಳವಾರ ಸಾಯಂಕಾಲ 5 ರಿಂದ 7 ರ ವರೆಗೆ ನಡೆಯುವ ಪ್ರವಚನ ಮಾಲೆಯಲ್ಲಿ ನಾಡೋಜ ಡಾ. ಬಸವಲಿಂಗ ಪಟ್ಟದ್ದೇವರು, ಸರ್ಕಾರಿ ಪದವಿ ಕಾಲೇಜಿನ ಪ್ರಾಚಾರ್ಯ ಮಲ್ಲಿಕಾರ್ಜುನ ಕಾಂಬಳೆ ಉಪಸ್ಥಿತರಿರುವರು.

ಇದೇವೇಳೆ ಸಹಸ್ರ ಜ್ಯೋತಿರ್ಲಿಂಗ ದರ್ಶನ ವಿಶೇಷ ಆಕರ್ಷಣೆಯಾಗಿರುವುದು. ಸಾರ್ವಜನಿಕರು ಹೆಚ್ಚಿನ ಸಂಖೆಯಲ್ಲಿ ಭಾಗವಹಿಸಿ ಈ ಎಲ್ಲಾ ಕಾರ್ಯಕ್ರಮಗಳ ಲಾಭ ಪಡೆಯಬೇಕು ಎಂದು ತಿಳಿಸಿದ್ದಾರೆ.

# ಎಂ ನಾಮದೇವರಾವ ತಾರೆ ಶಾಲೆಯಲ್ಲಿ 8ನೇ ವಾರ್ಷಿಕೋತ್ಸವ



ಮಲ್ಲಮ್ಮ ನುಡಿ ವಾರ್ತೆ

ಔರಾದ್:ಎಂನಾಮದೇವರಾವ ತಾರೆ ಶಾಲೆಯಲ್ಲಿ 12 ಮಾರ್ಚ್ 2025 ರಂದು 8ನೇ ವಾರ್ಷಿಕೋತ್ಸವ ನಕ್ಷತ್ರ( ಮಿನುಗುವ ತಾರೆ ) ಕಾರ್ಯಕ್ರಮವನ್ನು ಆಯೋಜಿಸಲಾಗಿದು. ಈ ಕಾರ್ಯಕ್ರಮದಲ್ಲಿ ಶಾಲೆಯ ಅಧ್ಯಕ್ಷರು ಲಕ್ಷ್ಮೀಬಾಯಿ ಎನ್. ತಾರೆ ಹಾಗೂ ಉದ್ಘಾಟಕರಾಗಿ ಮಲಶೆಟ್ಟಿ ಚಿದ್ರೆ ಔರಾದ್ ತಾಲೂಕಿನ ತಹಸಿಲ್ದಾರರು, ಮುಖ್ಯಅತಿಥಿಗಳಾಗಿ.ಸರುಬಾಯಿ ವಿ ಘುಳೆ ಅಧ್ಯಕ್ಷರು ಪಟ್ಟಣ ಪಂಚಾಯತ್ ಔರಾದ್, ಅದೇ ರೀತಿ ಬಿ ಎಮ್ ಅಮರವಾಡಿ ಅಧ್ಯಕ್ಷರು ಕನ್ನಡ ಸಾಹಿತ್ಯ ಪರಿಷತ್ ಔರಾದ್, ಲಿಂಗರಾಜ್ ಭಲ್ಕೆ ಮುಖ್ಯಗುರುಗಳು ಮಹಾತ್ಮ ಗಾಂಧಿ ಶಾಲೆ, ಬೀದರ್, ಜೈ ಶ್ರೀ ಎಸ್ ಸಹಾಯ ಶಿಕ್ಷಕರು ಮಹಾತ್ಮ ಗಾಂಧಿ ಶಾಲೆ ಬೀದರ್,ಶಿವಾನಂದ್ ಮುಕ್ತಿದಾರ್ ಅಧ್ಯಕ್ಷರುಕರ್ನಾಟಕ ಕಾರ್ಯನಿರತ ಪತ್ರಕರ್ತ ಸಂಘ ಔರಾದ್,ನಮ್ಮ ಓಣಿಯ ಹಿರಿಯರು ಸೋಪನರಾವ್ ಡೋಗ್ರೆ ಸುನಿತಾ ಖಾರತ್ ಮೇಡಂ ಹಾಗೂ ಶಾಲೆಯ ಉಪಾಧ್ಯಕ್ಷರು ಗೌತಮ್ ತಾರೆ, ಶಾಲೆಯ ಕೋಶಾಧಿಕಾರಿಗಳು ದೀಲಿಪ್ ತಾರೆ & ಶಾಲೆಯ ಕಾರ್ಯದರ್ಶಿಗಳು ನಗಸೇನ್ ತಾರೆ, ಶಾಲೆಯ ಸದಸ್ಯರು ಮಿಲಿಂದ ತಾರೆ, ಶಾಲೆಯ ಕಾರ್ಯನಿರ್ವಾಹಕಅಧಿಕಾರಿಗಳು ಜ್ಯೋತಿ ಎನ್ ತಾರೆ,ಶಾಲೆಯ ಮುಖ್ಯ ಗುರುಗಳು ದೀಪಕ್ ಕಾಂಬ್ಳೆ, ಹಾಗೂ ಶಾಲೆಯ ಎಲ್ಲಾ ಶಿಕ್ಷಕರುಗಳಾದ ನಿಲಾವತಿ ರಂಜಿರಿ, ಚೈತನ್ಯ ಗಜರೇ, ಹೇಮಾ ಖಾರಬೇ, ಪಲ್ಲವಿ ಕಾಂಬ್ಳೆ, ಅಂಬಿಕಾ ಸಿರಂಜೆ, ಸುಧೀರ್ ಪವಾರ್, ನಂದಿನಿ ಭಲ್ಕೆ, ಸುಧಾ ಚಿಮ್ಮ, ಭಾಗ್ಯಶ್ರೀ ಡ್ಯಾಡೇ, ಸುಜಾತ ಕಾಂಬ್ಳೆ, ಐಶಾ ಸಭಾ, ಮುಸ್ಕಾನ್ ಬಾಗ್ಗವಾನ್,ಹಾಗೂಶಿಕ್ಷಕೇತರರು ಸಂದೀಪ್ ಕಾಂಬ್ಳೆ, ಸಚಿನ್ ಕಾಂಬ್ಳೆ, ಸಂದೀಪ್ ಕಾಂಬ್ಳೆ, ಬಾಲಾಜಿ ಗಜರೆ,ಸುರೇಖಾ ಬುರೇ, ನಾಗಮಣಿ ಸ್ವಾಮಿ, ಪಾಲಕರು & ಮಕ್ಕಳು ಉಪಸ್ಥಿತರಿದ್ದರು, ನೀಲಾವತಿ ರಂಜಿರೆ ಕಾರ್ಯಕ್ರಮದ ನಿರೂಪಣೆ ಮಾಡಿದರು ಅದೇ ರೇತಿ. ಮಲಶೆಟ್ಟಿ ಚಿದ್ರೆ ಸರ್ ಹಾಗೂ ಬಿ ಎಮ್ ಅಮರವಾಡಿ ಸರ್ ರವರು ಶಾಲೆಯ ಕುರಿತು & ಮಕ್ಕಳನ್ನು ಉದ್ದೇಶಿಸಿ ಮಾತನಾಡಿದರು.ನಗಸೇನ್ ತಾರೆ ಸರ್ ವಾರ್ಷಿಕ ಶಾಲಾ ವರದಿ ನೀಡಿರುತ್ತಾರೆ,ಶಾಲೆಯ ವಾರ್ಷಿಕ ಕಾರ್ಯಕ್ರಮದಲ್ಲಿ ಎಲ್ಲಾ ಮಕ್ಕಳು ಉತ್ತಮವಾಗಿ ನೃತ್ಯ ಮಾಡಿದರು..

# 70 ನೇ ಶಾಲಾ ವಾರ್ಷಿಕೋತ್ಸವ ಹಾಗೂ 7 ನೇ ತರಗತಿಯ ಮಕ್ಕಳಿಗೆ ಬೀಳ್ಕೊಡುಗೆ ಸಮಾರಂಭ




ಮಲ್ಲಮ್ಮ ನುಡಿ ವಾರ್ತೆ

ಬಸವಕಲ್ಯಾಣ :– ಮಾ 15 ತಾಲೂಕಿನ ಮುಡಬಿ ಸರಕಾರಿಮಾದರಿಯಪ್ರಾಥಮಿಕ ಶಾಲೆಯಲ್ಲಿ 70 ನೇ ಶಾಲಾ ವಾರ್ಷಿಕೋತ್ಸವ ಹಾಗೂ 7 ನೇ ತರಗತಿಯ ಮಕ್ಕಳ ಬೀಳ್ಕೊಡುಗೆ ಸಮಾರಂಭ ಕಾರ್ಯಕ್ರಮ ಜರುಗಿತು. ಮಾಜಿ ವಿಧಾನ ಪರಿಷತ್ ಸದಸ್ಯ ವಿಜಯಸಿಂಗ ಅವರು ಉದ್ಘಾಟಿಸಿ ಮಾತನಾಡಿ ಈ ಶಾಲೆಯು ತಾಲೂಕಿನಲ್ಲಿಯೇ ಅತಿಹೆಚ್ಚುಮಕ್ಕಳು ಹೊಂದಿದ್ದು, ಅಂದರೆ ಸುಮಾರು 500 ದಾಖಲಾತಿ ಇರುವದು ದಾಖಲೆಯವಾಗಿದೆ.ಇದು 72 ವರ್ಷ ಕ್ಕಿಂತ ಹಳೆಯ ಶಾಲೆಯಾಗಿದೆ. ಇಲ್ಲಿ ಕಲಿತ ಅನೇಕ ಜನ ಇಂದು ವಿವಿಧ ಹುದ್ದೆ ಹಾಗೂ ಪ್ರತಿಷ್ಠೆಯ ಸ್ಥಾನಗಳಲಿದ್ದಾರೆ.ಇವತ್ತಿನ ಈ ಅದ್ಭುತಕಾರ್ಯಕ್ರಮದಲ್ಲಿಅವರಲ್ಲಿ ಹಲವರು ಭಾಗಿಯಾಗಿದ್ದಾರೆ. ಈ ಕಾರ್ಯಕ್ರಮ ನೋಡಿದರೆ ಯಾವುದೇ ಖಾಸಗಿ ಶಾಲೆಗೂ ಮೀರಿಸುವಂತೆ ಈ ಶಾಲೆ ನಡೆಯುತ್ತಿದೆ ಎನಿಸುತ್ತದೆ. ಈ ಶಾಲೆಯ ಹಾಗೂ ಮುಖ್ಯ ಗುರುಗಳು ಹಾಗೂ ಶಿಕ್ಷಕರಿಗೆ ನಾನು ಧನ್ಯವಾದಗಳು ಅರ್ಪಿಸುವೆ.ನನಗೆ ಈ ಶಾಲೆಯ ಬಗ್ಗೆ ಹೆಮ್ಮೆ ಅನಿಸುತಿದೆ.ನಾನು ಶಾಲೆಯ ಯಾವುದೇ ಸಮಸ್ಯೆ ಇದ್ದರೆ ತಿಳಿಸಿ, ತಕ್ಷಣ ಸ್ಪಂದಿಸಿ ಬಗೆ ಹರಿಸುತ್ತೆನೆ. ಶಾಲೆಗೆ ಸುಸಜ್ಜಿತ ಕಟ್ಟಡ ಹಾಗೂ ಮೂಲಭೂತ ಸೌಕರ್ಯ ಒದಗಿಸಲು ಪ್ರಯತ್ನಿಸುವೆ ಎಂದರು.

ತಿಪುರಾಂತಿನಗವಿಮಠದಪೂಜ್ಯ ಶ್ರೀ ಡಾ. ಅಭಿನವಘನಲಿಂಗ ರುದ್ರಮುನಿ ಶಿವಾಚಾರ್ಯರು ಮಾತನಾಡಿ ನಾನು ಹಲವಾರು ಶಾಲಾ ವಾರ್ಷಿಕೋತ್ಸವಗಳಲ್ಲಿ ಭಾಗವಹಿಸಿದ್ದೇನೆ, ಆದರೆ ಸರಕಾರಿ ಶಾಲೆಯೊಂದು ಇಷ್ಟು ಅಚ್ಚುಕಟ್ಟಾಗಿರುವದು ಇದೆ ಮೊದಲು ಸಲ ನೋಡುತಿದ್ದೇನೆ. ಇಲ್ಲಿನ ಶಿಕ್ಷಕ 'ರು,ಪಾಲಕರು,ಮಕ್ಕಳು,ಹಳೆಯ ವಿದ್ಯಾರ್ಥಿಗಳು, ಗ್ರಾಮಸ್ಥರು ಇಷ್ಟೊಂದು ಸಂಖ್ಯೆಯಲ್ಲಿ ಸೇರಿ ಅದ್ದೂರಿ ಕಾರ್ಯಕ್ರಮ ಆಯೋಜಿಸಿರುವದು ಅತ್ಯಂತ ಹೆಮ್ಮೆಯ ಸಂಗತಿ ಎಂದರು. ಅಧ್ಯಕ್ಷತೆ ಎಸ್ ಡಿ ಎಮ್ ಸಿ ಅಧ್ಯಕ್ಷರಾದ ದತ್ತಾತ್ರೇಯ ಸೋನಕೆರೆ ವಹಿಸಿದ್ದರು. ಶಾಲೆಯ ಮುಖ್ಯ ಶಿಕ್ಷಕರಾದ ತುಕಾರಾಮ ಕೆ. ರೊಡ್ಡೆ.

ಈ ಸಂದರ್ಭದಲ್ಲಿ ಶಾಲೆಯಲ್ಲಿ ಕಲಿತು ವಿವಿಧ ಹುದ್ದೆಗಳಲ್ಲಿರುವ ಅನೇಕರನ್ನು ಸನ್ಮಾನಿಸಿ ಗೌರವಿಸಲಾಯಿತು.

ಈ ಸಂದರ್ಭದಲ್ಲಿ ಗ್ರಾ.ಪಂ ಅಧ್ಯಕ್ಷೆ ಕಾವೇರಿ ಯಶವಂತ ಕಾಂಬಳೆ, ಗ್ರಾ.ಪಂ ಉಪಾಧ್ಯಕ್ಷ ಅಮರ ಮೆರ್ಲಿ,ಹಾಗೂ ಶಿಕ್ಷಕರಾದ ಚನ್ನವೀರ ಎಸ್. ಜಮಾದಾರ್, ಶಿಕ್ಷಕರ ಸಂಘದ ಅಧ್ಯಕ್ಷ ಸಂತೋಷ ಅಕ್ಕಣ್ಣ, ಕಾರ್ಯದರ್ಶಿ ಲಕ್ಷ್ಮಣ ಹೆಂಬಾಡೆ,ಸಿ ಆರ್ ಪಿ. ದಿಲೀಪ ಮಂಠಾಳೆ, ಡಾ. ಸತೀಶ ಪಾಟೀಲ. ಹಣಮಂತರಾವ್ ದೇಸಾಯಿ,ಇ ಇ. ರಾಜರೆಡ್ಡಿ ಪೊಲೀಸ್ ಪಾಟೀಲ,ತಮಿಜೋದ್ದಿನ್. ಮಾರುತಿ ಕಮಾಲೆ, ಮೋನಪ್ಪ ಪಾಂಚಾಳ್, ಸಿದ್ದು ಪಾಂಚಾಳ್, ಉಮೇಶ, ಸಿರಾಜೋದ್ದಿನ್, ಗ್ರಾ ಪ. ಸದಸ್ಯರು ಕಮಲಬಾಯಿ, ಲಲಿತಾಬಾಯಿ, ಶಿವರಾಜ, ಸಿದ್ದಲಿಂಗ, ನಾಗಮ್ಮ, ಶಂಕರ, ಸುಮಿತಕುಮಾರ, ಶ್ರೀಶೈಲ್, ರೇಷ್ಮಾಬೇಗಂ,ಮುಖಂಡರುಗಳಾದ ಜಗದೀಶಪಾಟೀಲ್ ಬಸವರಾಜ, ಅರ್ಜುನ,ಧನರಾಜ್,ಯಶವಂತ, ವಾಲ್ಮೀಕ್,ಗೊರಖನಾಥ್, ತುಕಾರಾಮ, ರಾಜಕುಮಾರ್, ವಿಜಯಕುಮಾರ್. ಗ್ರಾಮ ಪಂಚಾಯತ ಸದಸ್ಯರು,ಎಸ್ ಡಿ ಎಮ್ ಸಿ ಸದಸ್ಯರು, ಪಾಲಕರು, ಪೋಷಕರು,ಮಕ್ಕಳು,ನಿವೃತ್ತಿ ಹೊಂದಿದ ನೌಕರರು, ಶಾಲೆಯ ಹಳೆಯ ವಿದ್ಯಾರ್ಥಿಗಳು. ಅಕ್ಕ ಪಕ್ಕದ ಶಾಲೆಯ ಮುಖ್ಯ ಶಿಕ್ಷಕರು ಸೇರಿದಂತೆ ಇನ್ನಿತರರು ಉಪಸ್ಥಿತರಿದ್ದರು.

ಶ್ರೀ ಗುರು ಬಕ್ಕಪ್ರಭುಗಳ ಜಾತ್ರಾ ಮಹೋತ್ಸವ

# ಇಂದು ಪಶುಗಳ ಪ್ರದರ್ಶನ ರಾತ್ರಿ ಸಂಗೀತ ದರ್ಬಾರ್




ಮಲ್ಲಮ್ಮ ನುಡಿ ವಾರ್ತೆ

ಚಿಟಗುಪ್ಪ:– ತಾಲೂಕಿನ ಕರಕನಳ್ಳಿ ಶ್ರೀ ಗುರು ಗಂಗಾಧರ್ ಬಕ್ಕ ಪ್ರಭುಗಳ 211ನೇ ಪುಣ್ಯಸ್ಮರಣೆ ಮಾರ್ಚ್ 13ರಂದು ಜರುಗಿತ್ತು. ಈ ಪುಣ್ಯತಿಥಿ ಅಂಗವಾಗಿ ಮಾರ್ಚ 13ರಿಂದ ಪ್ರಾರಂಭವಾಗಿ ಮಾರ್ಚ 19ರ ವರೆಗೆ ಜರುಗಲಿದೆ. 16 ಮಾರ್ಚ ಪ್ರತಿ ವರ್ಷದಂತೆ ಈ ವರ್ಷವೂ ಕೂಡ ರಾತ್ರಿ ಸಂಗೀತದರ್ಬಾರ್ ವೈಭವದಿಂದ ಜರುಗಲಿದೆ.ಮಾರ್ಚ 17ರಂದು ದೇವರ ಪಲ್ಲಕ್ಕಿ ಪುರವಂತರ ಸೇವೆಯೊಂದಿಗೆ ಅಗ್ಗಿ ತುಳಿಯುವುದು,ಸಾಯಂಕಾಲ ರಥೋತ್ಸವ ಮದ್ದು ಸುಡುವ ಕಾರ್ಯಕ್ರಮ ಜರುಗಲಿದೆ. ಮಾರ್ಚ 18ರಂದು ಮುಂಜಾನೆ ಖ್ಯಾತ ಪೈಲವಾನರಿಂದ ಜಂಗಿ ಕುಸ್ತಿಗಳು, ಪ್ರಥಮ ಬಹುಮಾನ 50ಗ್ರಾಂ ಬೆಳ್ಳಿ ಖಡ್ಗ ಮತ್ತು ಕ್ರಿಕೆಟ್ ಪಂದ್ಯವಳಿಗಳು ನಡೆಯುವುದು. ಮಾರ್ಚ 19 ರಂದು ಬೀಳ್ಕೊಡುಗೆ (ಬಿದಾಯಿ) ಜರುಗುವುದು. ಈ ಕಾರ್ಯಕ್ರಮಕ್ಕೆ ಭಕ್ತಾಧಿಗಳು ಹೆಚ್ಚಿನ ಸಂಖ್ಯೆಯಲ್ಲಿ ಆಗಮಿಸಿ ಜಾತ್ರಾ ಮಹೋತ್ಸವ ಯಶಸ್ವಿಗೊಳಿಸಲು ದೇವಸ್ಥಾನ ಆಡಳಿತ ಮಂಡಳಿ ತಿಳಿಸಿದೆ.

# 47 ಸಾವಿರ ರೂ.ಮೌಲ್ಯದ ಆಹಾರ ಧಾನ್ಯ ಕಳವು

ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ,ಮಾ.15–ತಾಲ್ಲೂಕಿನ ಖಣದಾಳ ಸೀಮಾಂತರದಲ್ಲಿರುವ ಜಮೀನಿನಲ್ಲಿರುವ ಮನೆಯೊಂದರ ಬೀಗ ಮುರಿದು 47,500 ರೂ.ಮೌಲ್ಯದ ಆಹಾರ ಧಾನ್ಯ ಕಳವು ಮಾಡಿರುವ ಘಟನೆ ನಡೆದಿದೆ.

ತುಕಾರಾಮ ಚವ್ಹಾಣ್ ಎಂಬುವವರ ಜಮೀನಿನಲ್ಲಿರುವ ಮನೆಯ ಬೀಗ ಮುರಿದು 25 ಸಾವಿರ ರೂ.ಮೌಲ್ಯದ 5 ಚೀಲ ಬಿಳಿ ಜೋಳ, 20 ಸಾವಿರ ರೂ.ಮೌಲ್ಯದ 4 ಚೀಲ ಗೋಧಿ,2500 ರೂ.ಮೌಲ್ಯದ 25 ಕೆಜಿ ಸಕ್ಕರೆ ಸೇರಿ 47500 ರೂ.ಮೌಲ್ಯದ ಆಹಾರ ಧಾನ್ಯ ಕಳವು ಮಾಡಲಾಗಿದೆ.

ಬಿಳಿ ಜೋಳ, ಗೋಧಿ ರಾಶಿ ಮಾಡಿ ಹೊಲದಲ್ಲಿರುವ ಮನೆಯಲ್ಲಿ ಇಡಲಾಗಿತ್ತು ಎಂದು ತಿಳಿದುಬಂದಿದೆ. ಈ ಸಂಬಂಧ ತುಕಾರಾಮ ಚವ್ಹಾಣ್ ಅವರು ಫರಹತಾಬಾದ ಪೊಲೀಸ್ ಠಾಣೆಯಲ್ಲಿ ದೂರು ಸಲ್ಲಿಸಿದ್ದು, ತನಿಖೆ ನಡೆದಿದೆ.

# ಐಬಿ ತಾಂಡದಲ್ಲಿ ಸಂಭ್ರಮದಿಂದ ಜರುಗಿದ ಹೋಳಿಹಬ್ಬ ಆಚರಣೆ



ಮಲ್ಲಮ್ಮ ನುಡಿ ವಾರ್ತೆ

ಹುಣಸಗಿ ತಾಲೂಕಿನ ಐ.ಬಿ ತಾಂಡದಲ್ಲಿ ಹೋಳಿ ಹಬ್ಬವನ್ನ ಸಂಭ್ರಮದಿಂದಆಚರಿಸಲಾಗುತ್ತಿದೆ. ಪರಸ್ಪರ ಬಣ್ಣ ಎರಚಿಕೊಂಡು ಜನ ಸಂಭ್ರಮ ಪಟ್ಟಿದರು. ಬಿರುಬೇಸಿಗೆಯಲ್ಲಿ ಹೋಳಿ ಹಬ್ಬ ಜನರಿಗೆ ತಂಪನೆರೆಯುತ್ತಿದೆ.

ವಯಸ್ಸಿನ ಭೇದ ಮರೆತು ಯುವಕರು ,ವೃದ್ದರು, ಮಕ್ಕಳು ಹೋಳಿಯಲ್ಲಿ ಮಿಂದೇಳುತ್ತಿದ್ದಾರೆ.ಸಂಗೀತಕ್ಕೆನೃತ್ಯ ಮಾಡುವ ಮೂಲಕ ಹೋಳಿ ಆಚರಣೆ ಮಾಡಲಾಗುತ್ತಿದೆ.

ಬೆಳಿಗ್ಗೆಯಿಂದಲೇ ಹೋಳಿ ಆಚರಣೆ ಜೋರಾಗಿದೆ ಐಬಿ ತಾಂಡದಲ್ಲಿ ಹೋಳಿ ಹಬ್ಬದ ಆಚರಣೆ ಜೋರಾಗಿ ನಡೆದಿದೆ. ಬೇಸಿಗೆಯ ಬಿಸಿಲ ಬೇಗೆಯನ್ನ ಹೋಳಿ ಹಬ್ಬ ತಣಿಸುವಂತೆ ಮಾಡಿದೆ.

ಈ ಸಂದರ್ಭದಲ್ಲಿ ರಾಜು ರಾಠೋಡ, ಚಂದು ಹರವತ್ತ, ಸಂತು, ತಾಂಡದ ಗುರು ಹಿರಿಯರು ಇದ್ದರು.

# ತ್ರಿಪುರಾಂತ ಶ್ರೀಗಳಿಗೆ ಸಕ್ಕರೆ ಹಾರ ಹಾಕಿ ಸನ್ಮಾನ




ಮಲ್ಲಮ್ಮ ನುಡಿ ವಾರ್ತೆ

ಚಿಟಗುಪ್ಪ:–ಬಸವಕಲ್ಯಾಣ ನಗರದ ತ್ರಿಪುರಾಂತ ಗವಿಮಠದ ಘನಲಿಂಗ ರುದ್ರಮುನಿ ಶಿವಾಚಾರ್ಯರಿಗೆ ಸಮಾಜ ಕಾರ್ಯಕರ್ತ ಮಹಮ್ಮದ್ ಅಸ್ಲಾಂಮಿಯಾ ಅವರು ಗುರುಗಳಿಗೆ ಹೋಳಿ ಹಬ್ಬ ಮತ್ತು ಪವಿತ್ರ ರಂಜಾನ್ ಉಪವಾಸದ ಅಂಗವಾಗಿ ಪೂಜ್ಯರಿಗೆ ಸಕ್ಕರೆ ಹಾರ ಹಾಕಿ ಸನ್ಮಾನಿಸಿದರು. ರಂಜಾನ್ ಹಬ್ಬದ ಉಪವಾಸದ ಅಂಗವಾಗಿ ಖಜೂರ, ಹಣ್ಣು ಹಂಪಲು ಅರ್ಪಿಸಿ ಆಶೀರ್ವಾದ ಪಡೆದು ಹೋಳಿ ಹಬ್ಬ ಮತ್ತು ಪವಿತ್ರ ರಂಜಾನ್ ಹಬ್ಬದ ಶುಭಾಶಯಗಳು ತಿಳಿಸಿದರು. ಈ ಸಂದರ್ಭದಲ್ಲಿ ಪರಿಸರವಾದಿ ಶೈಲೇಂದ್ರ ಕಾವಡಿ ಉಪಸ್ಥಿತರಿದ್ದರು.

# ವಿಶ್ವ ಗ್ರಾಹಕರ ಹಕ್ಕುಗಳ ದಿನಾಚರಣೆ

ಕಲಬುರಗಿ,ಮಾ.15)–ಕಲಬುರಗಿ ರಾಷ್ಟ್ರೀಯ ಸೇವಾ ಯೋಜನಾ ಘಟಕ ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ ಇವುಗಳ ಸಂಯುಕ್ತ ಆಶ್ರಯದಲ್ಲಿ ಕಲಬುರಗಿ ಕೃಷಿ ಮಹಾವಿದ್ಯಾಲಯದಲ್ಲಿ ಶನಿವಾರ ವಿಶ್ವಗ್ರಾಹಕರ ಹಕ್ಕುಗಳ ದಿನಾಚರಣೆಯನ್ನು ಆಚರಿಸಲಾಯಿತು. ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದ ಕೃಷಿ ಮಹಾವಿದ್ಯಾಲಯದ ಡೀನ್(ಕೃಷಿ) ಡಾ. ಎಮ್.ಎಮ್. ಧನೋಜಿ ಅವರು, ಗ್ರಾಹಕರಿಗೆ ಜಾಗೃತಿ ಮೂಡಿಸಿ ಅವರ ಹಕ್ಕುಗಳ ಬಗ್ಗೆ ತಿಳಿಸಿಕೊಡುವ ಉದ್ದೇಶದಿಂದ ಪ್ರಪಂಚದಾದಂತ್ಯ ಪ್ರತಿ ವರ್ಷವೂ ಮಾರ್ಚ್ 15ರಂದು 'ವಿಶ್ವ ಗ್ರಾಹಕರ ದಿನ'ವನ್ನು ಆಚರಿಸುತ್ತ ಬರಲಾಗುತ್ತಿದೆ.ಗ್ರಾಹಕರು ವಸ್ತುಗಳನ್ನು ಖರೀದಿಸುವಾಗ ಯಾವುದೇ ವಂಚನೆಗೆ ಗುರಿಯಾಗಬಾರದು, ಅವರಿಗಿರುವ ಗ್ರಾಹಕ ಹಕ್ಕುಗಳ ಬಗ್ಗೆ ತಿಳಿಸಿ ಕೊಡುವುದು ಈ ವಿಶ್ವ ಗ್ರಾಹಕ ಹಕ್ಕುಗಳ ದಿನದ ಉದ್ದೇಶವಾಗಿದೆ ಎಂದರು.

ಈ ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಗಳಾಗಿ ಆಗಮಿಸಿ ಮಾತನಾಡಿದ ಹಿರಿಯ ಸಿವಿಲ್ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಶ್ರೀನಿವಾಸ ನವಲೆ ಅವರು ಗ್ರಾಹಕರ ಹಿತರಕ್ಷಣೆ ಕಾಯ್ದೆಯಡಿ ಬರುವ ಹಕ್ಕುಗಳ ಕುರಿತು ಮಾತನಾಡಿದರು. ಈ ಕಾರ್ಯಕ್ರಮದಲ್ಲಿ ವಿಶೇಷ ಉಪನ್ಯಾಸಕರಾಗಿ ಆಗಮಿಸಿ ಮಾತನಾಡಿದ, ಖ್ಯಾತ ನ್ಯಾಯವಾದಿಗಳಾದ ವೈಜನಾಥ ಎಸ್. ಝುಳಕಿ "ಗ್ರಾಹಕರು ಕಾನೂನಿನ ಅರಿವು ಹೊಂದುವುದರಿಂದ ಗ್ರಾಹಕರು ತಮಗೆ ಸೇವಾ ನ್ಯೂನತೆ, ಅನುಚಿತ ವ್ಯಾಪಾರ ಪದ್ಧತಿಗಳಿಂದ ಆಗುವ ಸಮಸ್ಯೆಗಳಿಗೆ ಹಾಗೂ ನಷ್ಟಗಳಿಗೆ ಸುಲಭವಾಗಿ ಗ್ರಾಹಕರ ಆಯೋಗಗಳ ಮೂಲಕ ಪರಿಹಾರ ಪಡೆಯಲು ಸಾಧ್ಯವಾಗುತ್ತದೆ ಎಂದು ಅವರು ಹೇಳಿದರು. ನೊಂದ ಗ್ರಾಹಕರು ಗ್ರಾಹಕರ ಹಿತರಕ್ಷಣಾ ಕಾಯ್ದೆಯಡಿ ಲಭ್ಯವಿರುವ ಹಕ್ಕುಗಳ ಮೂಲಕ ಜಿಲ್ಲಾ, ರಾಜ್ಯ ಅಥವಾ ರಾಷ್ಟ್ರೀಯ ಗ್ರಾಹಕರ ಆಯೋಗಗಳಿಗೆ ದೂರು ಸಲ್ಲಿಸಿ ತಮಗೆ ವ್ಯಾಪಾರಿಗಳಿಂದ ಅಥವಾ ಸೇವಾ ಸರಬರಾಜು ಮಾಡುವುವರಿಂದ ಆದ ನಷ್ಟಕ್ಕೆ ಕಡಿಮೆ ಸಮಯದಲ್ಲಿ ಸರಳವಾಗಿ ಸುಲಭವಾಗಿ ಸೂಕ್ತ ಪರಿಹಾರ ಪಡೆಯಬಹುದಾಗಿದೆ ಎಂದು ಹೇಳಿದರು. ರಾಷ್ಟ್ರೀಯ ಸೇವಾ ಯೋಜನಾ ಅಧಿಕಾರಿ ಡಾ. ರಾಜಶೇಖರ ಟಿ. ಬಸನಾಯಕ, ಕಾರ್ಯಕ್ರಮ ನಿರ್ವಹಿಸಿ ಕೊನೆಯಲ್ಲಿ ವಂದಿಸಿದರು. ಕಾರ್ಯಕ್ರಮದಲ್ಲಿ ಎಲ್ಲಾ ಶಿಕ್ಷಕ / ಶಿಕ್ಷಕೇತರ ವೃಂದ ಮತ್ತು ವಿದ್ಯಾರ್ಥಿಗಳು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿದ್ದರು.

# ಶರಣೆ ದಾನಮ್ಮ ಜ್ಞಾನ ಜ್ಯೋತಿ ಯಾತ್ರೆಗೆ ಚಾಲನೆ ಏಪ್ರಿಲ್ 5. ಮತ್ತು 6ರ ರಂದು ದಾನಮ್ಮ ಉತ್ಸವ





ಮಲ್ಲಮ್ಮ ನುಡಿ ವಾರ್ತೆ

ಬಸವಕಲ್ಯಾಣ :– ಮಾ 15 ಐತಿಹಾಸಿಕ ಅಲ್ಲಮಪ್ರಭು ದೇವರ ಗದ್ದಿಗೆ ಮಠದಲ್ಲಿ ಲಿಂಗಯೋಗ ಮಾಡುವುದರ ಮೂಲಕ ಬಸವ ತತ್ವ ಪ್ರಸಾರ ಮತ್ತು ಪ್ರಚಾರ ಕೇಂದ್ರದ ಅಧ್ಯಕ್ಷರಾದ ಜಯಪ್ರಕಾಶ ಸದಾನಂದೆ ಚಾಲನೆ ನೀಡಿ ಮಾತನಾಡಿ ಪೂಜ್ಯ ಶ್ರೀ. ಬಸವಪ್ರಭು ಸ್ವಾಮೀಜಿಯವರು ಬಸವ ಧರ್ಮ ಪ್ರಚಾರಾರ್ಥವಾಗಿ ಕಳೆದ 13ವರ್ಷದಿಂದ ಶರಣೆ ದಾನಮ್ಮ ಜ್ಞಾನ ಜ್ಯೋತಿ ಯಾತ್ರೆಯನ್ನು ಹಮ್ಮಿಕೊಂಡು ಕರ್ನಾಟಕ–ಮಹಾರಾಷ್ಟ್ರದ ಗಡಿಭಾಗದ ಐದು ಜಿಲ್ಲೆಗಳ ನೂರಾರು ಊರುಗಳಲ್ಲಿ ಪ್ರಚಾರ ಮಾಡಿ ಸುಮಾರು 6 ಸಾವಿರಕ್ಕೂ ಹೆಚ್ಚು ಜನಗಳಿಗೆ ಲಿಂಗದೀಕ್ಷೆ ನೀಡಿ ಬಸವತತ್ವವನ್ನು ಉಳಿಸಿ ಬೆಳೆಸುವಲ್ಲಿ ಸಾಕಷ್ಟು ಶ್ರಮ ವಹಿಸಿತಿದ್ದಾರೆ. ಪೂಜ್ಯರು ಬಸವಕಲ್ಯಾಣದ ಗುಣತೀರ್ಥವಾಡಿ–ನಾರಾಯಣಪೂರವನ್ನು ದಾನಮ್ಮನ ತಪೋಕ್ಷೇತ್ರವೆಂದು ಸಂಶೋಧನೆ ಮೂಲಕ ಗುರುತಿಸಿ ಅಲ್ಲಿ ಕಲ್ಯಾಣ ಮಹಾಮನೆಯನ್ನು ಕಟ್ಟಿ, ಪ್ರತಿವರ್ಷ ಶರಣ ಸಮಾಗಮ ಹಾಗೂ ದಾನಮ್ಮ ಉತ್ಸವವನ್ನು ಹಮ್ಮಿಕೊಳ್ಳುತ್ತಿರುವರು. ಬರುವ ಏಪ್ರಿಲ್ 5, 6ರಂದು ನಡೆಯುವ ಕಾರ್ಯಕ್ರಮದ ಉದ್ಘಾಟನೆಗಾಗಿ ದಾನಮ್ಮನ ಐಕ್ಯಕ್ಷೇತ್ರ ಗುಡ್ಡಾಪೂರದಿಂದ, ಸೋಲಾಪೂರ ಸಿದ್ಧರಾಮೇಶ್ವರದಿಂದ, ಕೊಲ್ಲಾಪೂರ ಜಿಲ್ಲೆಯ ಅಲ್ಲಮಗಿರಿಯಿಂದ ಜ್ಯೋತಿಯನ್ನು ಹೊತ್ತಿಸಿಕೊಂಡು ಬರುತ್ತಿರುವರು. ಪೂಜ್ಯರು ಶರಣ ಜ್ಞಾನಿಗಳಾಗಿದ್ದು ಅವರು ಹಮ್ಮಿಕೊಳ್ಳುವ ಕಾರ್ಯಕ್ರಮ ಅನುಭಿವದಿಂದ ಕೂಡಿರುತ್ತವೆ ಎಲ್ಲರೂ ತನು ಮನ ಧನದಿಂದ ಸಹಕರಿಸಬೇಕೆಂದು ಕರೆ ನೀಡಿದರು.

ಕಲ್ಯಾಣ ಮಹಾಮನೆಯ ಪೂಜ್ಯ ಶ್ರೀ ಸದ್ಗುರು ನಿಜಲಿಂಗ ದೇವರು ಪ್ರಾಸ್ತಾವಿಕವಾಗಿ ಮಾತನಾಡಿ ಪೂಜ್ಯ ಶ್ರೀ ಸದ್ಗುರು ಬಸವಪ್ರಭು ಸ್ವಾಮೀಜಿಯವರು ಹಮ್ಮಿಕೊಂಡ ಜ್ಯೋತಿ ಯಾತ್ರೆಯು ಆಡಂಬರದ ಪಾದಯಾತ್ರೆಯಾಗಿರದೆ, ಜನಗಳನ್ನು ಧಾರ್ಮಿಕವಾಗಿ ಪರೀವರ್ತಿಸುವ ಜ್ಞಾನ ಜ್ಯೋತಿ ಯಾತ್ರೆಯಾಗಿದೆ. ಪೂಜ್ಯ ಶ್ರೀ ಮಾತೆ ಮಹಾದೇವಿಯವರ ಕರ ಸಂಜಾತರಾದ ಪೂಜ್ಯರು ಅವರಂತೆ ಮುಂದುವರೆದ ಭಾಗವಾಗಿ ಧರ್ಮ ಪ್ರಚಾರ ಮಾಡುವ ಕಾರ್ಯವನ್ನು ಹೊಂದಿದ್ದಾರೆ ಎಂದರಲ್ಲದೆ 25ದಿನ ನಡೆಯಲಿರುವ ಜ್ಞಾನ ಜ್ಯೋತಿ ಯಾತ್ರೆಯಲ್ಲಿ ಬಸವಧರ್ಮಿಯರಿಗೆ ಪ್ರವಚನ, ಸಾಮೂಹಿಕ ಇಷ್ಟಲಿಂಗ ಪೂಜೆ ಮತ್ತು ಉಚಿತವಾಗಿ ಲಿಂಗದೀಕ್ಷೆ ಮಾಡಲಾಗುತ್ತದೆ ಸರ್ವರೂ ಸದುಪಯೋಗ ಪಡಿಸಿಕೊಳ್ಳಬೇಕೆಂದರು.

ಕಾರ್ಯಕ್ರಮದಲ್ಲಿ ಆಶಿರ್ವಚನ ಶರಣೆ ದಾನಮ್ಮ ಜ್ಯೋತಿ ನೀಡಿದರು. ಯಾತ್ರೆಯ ರೂಹಾರಿ ಪೂಜ್ಯ ಶ್ರೀ ಸದ್ಗುರು ಬಸವಪ್ರಭು ಸ್ವಾಮೀಜಿಯವರು ಮಾತನಾಡಿ ಹನ್ನೆರಡನೇ ಶತಮಾನದಲ್ಲಿ ಗುರು ಬಸವಣ್ಣನವರ ಅನುಭವ ಮಂಟಪದಲ್ಲಿದ್ದ ಮಹಾಶರಣೆ ದಾನಮ್ಮನವರು ಅದ್ಭುತ ಲಿಂಗಯೋಗಿಗಳಾಗಿದ್ದಾರೆ. ಬೇಡಿದವರಿಗೆ ಇಷ್ಟಾರ್ಥವನ್ನು ಈಡೇರಿಸುವ ವರದಾನಿಯಾಗಿದ್ದಾಳೆ. ಅವರು ದಾಂಪತ್ಯ ಧರ್ಮವನ್ನು ಸ್ವೀಕರಿಸಿ, ಸಾಮಾಜಿಕ ಮತ್ತು ಮಾನವೀಯ ಕಾರ್ಯಗಳನ್ನು ಮಾಡಿ ಜನಮಾನಸದ ಹೃದಯದಲ್ಲಿ ಶಾಶ್ವತ ನೆಲೆ ನಿಂತಿದ್ದಾರೆ. ಅವರು ಕಲ್ಯಾಣಕ್ಕೆ ಬಂದ ಕುರುಹುಗಳಿರಲಿಲ್ಲ ಇತ್ತೀಚೆಗೆ ನಾವು ಕಂಡುಕೊಂಡಿದ್ದೇವೆ. ಗುಣತೀರ್ಥವಾಡಿಯನ್ನು ನಾವು ದಾನಮ್ಮನ ತಪೋಸ್ಥಾನವೆಂದು ಘೋಷಿಸಿದ್ದೇವೆ. ಈ ಕ್ಷೇತ್ರವನ್ನು ಪವಿತ್ರ ಧಾರ್ಮಿಕ ಶರಣ ಕ್ಷೇತ್ರವಾಗಿಸಲು ನಾನು ಸಂಕಲ್ಪ ಮಾಡಿರುವೆ ಈ ಕಾರಣವಾಗಿ ಸತತ 13ವರ್ಷದಿಂದ ಪ್ರಯತ್ನಿಸಿದ ಫಲವಾಗಿ ಅದು ಸಾಧ್ಯವಾಗಿದೆ ಎಂದರು. ದಾನಮ್ಮನ ಉತ್ಸವನ್ನು ಒಂದು ಜಾತ್ರೆಯಾಗಿ ಮಾಡದೆ, ಶರಣ ಜ್ಞಾನವನ್ನು ಬಿತ್ತರಿಸುವ ಅನುಭವ ಮಂಟಪದ ಉತ್ಸವಾಗಿ, ಕಲ್ಯಾಣದ ಹಬ್ಬವಾಗಿ ಆಚರಿಸಬೇಕೆಂದು ಸಂಕಲ್ಪಿಸಿರುವೆ. ಈ ಕಾರ್ಯಕ್ರಮಕ್ಕೆ ನಾಡಿನಾದ್ಯಂತ ಸಾಕಷ್ಟು ಅನುಭಾವಿಗಳು, ಚಿಂತಕರು, ದಾನಮ್ಮನ ಬಸವ ಭಕ್ತಿಯ ಬಳಗ ಸಾವಿರ ಸಾವಿರ ಸಂಖ್ಯೆಯಲ್ಲಿ ಆಗಮಿಸಲಿದ್ದಿರೆ. ತಾವು ತಮ್ಮ ಸಹ ಕುಟುಂಬ ಪರಿವಾರದೊಂದಿಗೆ ಆಗಮಿಸಬೇಕೆಂದು ಕರೆ ನೀಡಿದರು.

ಶರಣೆ ಲಕ್ಷ್ಮಿಬಾಯಿ ಪಾಟೀಲ್ ಮಾತನಾಡಿದರು. ಶರಣೆ ಸವಿತಾ ರಗಟೆ ಪೂಜೆ ನೆರವೇರಿಸಿದರು. ಈ ಸಂದರ್ಭದಲ್ಲಿ ನೀಲಕಂಠಯ್ಯ ಸ್ವಾಮಿ, ಗಣಪತಿ ಖಸಗೆ, ರಾಮ ಮಜ್ಜಿಗೆ, ಡಾ. ಬಸವರಾಜ ಮೂಲಗೆ, ಸರಸ್ವತಿ ಹೋದಲೂರೆ, ಸಿದ್ಧರಮಪ್ಪ ಹಂಗರಗಿಕರ್, ರೇಣುಕಾ ಮಾಮಾ, ಸುಮಿತ್ರಾ ದಾವಣಗಾವೆ, ಗುಣತೀರ್ಥವಾಡಿಯ ಸವಿತಾ, ಜಯಶ್ರೀ, ಅಂಬರೇಶ ಸೇರಿದಂತೆ ಇನ್ನಿತರರು ಇದ್ದರು. ಗಿರಿಜಿ ಎಸ್ ಹಂಗರಗೀಕರ್ ಸ್ವಾಗತಿಸಿದರು. ಸಂಗಮೇಶ ತೊಗರಖೇಡೆ ನಿರೂಪಿಸಿದರು. ದೀಪ್ತಿ ಶ್ರೀ ಶೈಲ್ ಬಿರಾದಾರ ವಂದಿಸಿದರು.

# ಸೈದಾಪುರ:ಬುಲೇರೋ, ಲಾರಿ ಮುಖಾಮುಖಿ ಡಿಕ್ಕಿ: ಇಬ್ಬರು ಸಾವು

ಮಲ್ಲಮ್ಮ ನುಡಿ ವಾರ್ತೆ

ಸೈದಾಪುರ:ಮಾ.13:ಸಮೀಪದ ಕಿಲ್ಲನಕೇರಾ–ನೀಲಹಳ್ಳಿ ಗ್ರಾಮದ ಕ್ರಾಸ್ ಹತ್ತಿರದ ರಾಯಚೂರು–ಯಾದಗಿರಿ ರಾಷ್ಟ್ರೀಯ ಹೆದ್ದಾರಿ 150ರಲ್ಲಿ ಬುಲೇರೋ ಮತ್ತು ಲಾರಿ ಮಧ್ಯೆ ಮುಖಾಮುಖಿ ಡಿಕ್ಕಿಯಾಗಿ ಸ್ಥಳದಲ್ಲೇ ಇಬ್ಬರು ವ್ಯಕ್ತಿಗಳು ಮೃತ ಪಟ್ಟ ದುರ್ಘಟನೆ ಬುಧವಾರ ಸಂಭವಿಸಿದೆ.

ಎಸ್ ಪಿಜೆಸಿ ಕಂಪನಿಯಲ್ಲಿ ಕಾರ್ಯನಿರ್ವಹಿಸುತ್ತಿದ್ದ 3 ಜನ ಉದ್ಯೋಗಿಗಳು ಬುಧವಾರ ಬೆಳಿಗ್ಗೆ ಸೈದಾಪುರದಿಂದ ಯಾದಗಿರಿ ಮಾರ್ಗವಾಗಿ ಪ್ರಯಾಣಿಸುತ್ತಿದ್ದರು. ಯಾದಗಿರಿ ಕಡೆಯಿಂದ ಅತಿ ವೇಗದಲ್ಲಿ ಎದುರಿಗೆ ಬಂದ ಲಾರಿಚಾಲಕನ ನಿಯಂತ್ರಣ ತಪ್ಪಿ, ಬುಲೇರೋ ವಾಹನಕ್ಕೆ ಡಿಕ್ಕಿ ಹೊಡೆದ ಪರಿಣಾಮವಾಗಿ ಆಂಧ್ರಮೂಲದ ಪುರುಷೋತ್ತಮ ವೆಂಕಟದುರ್ಗಾ ಪ್ರಸಾದ(41) ಮತ್ತು ಕುಂಭ ನಾಗರಾಜ(32) ಎಂಬವವರು ಗಂಭೀರವಾಗಿ ಗಾಯಗೊಂಡು ಸ್ಥಳದಲ್ಲಿಯೇ ಮೃತಪಟ್ಟಿದ್ದಾರೆ. ಗಾಯಗೊಂಡ ತೆಲಂಗಾಣ ಮೂಲದ ಕುಸುಮ ರಜಿನಿಕಾಂತ(30) ಎನ್ನುವ ಉದ್ಯೋಗಿಯನ್ನು ಹೆಚ್ಚಿನ ಚಿಕಿತ್ಸೆಗಾಗಿ ರಾಯಚೂರು ಬಾಲಂಕ ಖಾಸಗಿ ಆಸ್ಪತ್ರೆಗೆ ದಾಖಲಿಸಲಾಗಿದೆ. ಈ ಕುರಿತು ಸೈದಾಪುರ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

# ಶಿಕ್ಷಕರ ಸಮಸ್ಯೆ ಬಗ್ಗೆ ಅಧಿವೇಶನದಲ್ಲಿ ಶಾಸಕ ಪ್ರಭು ಚವ್ಹಾಣ ಪ್ರಶ್ನೆ

ಮಲ್ಲಮ್ಮ ನುಡಿ ವಾರ್ತೆ

ಔರಾದ:ಮಾ.15:ಔರಾದ(ಬಿ) ವಿಧಾನಸಭಾ ಕ್ಷೇತ್ರದ ಶಾಲೆಗಳಲ್ಲಿ ಕನ್ನಡ ಶಿಕ್ಷಕರ ಕೊರತೆಯ ಬಗ್ಗೆ ವಿಧಾನಸಭಾ ಅಧಿವೇಶನದಲ್ಲಿ ಮಾಜಿ ಸಚಿವರು ಹಾಗೂ ಶಾಸಕರಾದ ಪ್ರಭು ಬಿ.ಚವ್ಹಾಣ ಧ್ವನಿ ಎತ್ತಿದ್ದಾರೆ.

ಶಾಲಾ ಶಿಕ್ಷಣ ಇಲಾಖೆ ಮತ್ತು ಸಾಕ್ಷರತಾ ಸಚಿವರಾದ ಎಸ್. ಮಧು ಬಂಗಾರಪ್ಪ ಅವರನ್ನು ಚುಕ್ಕೆ ಗುರುತ್ತಿಲ್ಲದ ಪ್ರಶ್ನೆ ಕೇಳಿದ್ದಾರೆ. ಇದಕ್ಕೆ ಸಚಿವರು ಲಿಖಿತವಾಗಿ ಉತ್ತರಿಸಿದ್ದು, ಔರಾದ(ಬಿ) ವಿಧಾನಸಭಾ ಕ್ಷೇತ್ರದಲ್ಲಿ 18 ಪ್ರಾಥಮಿಕ ಮತ್ತು 22 ಪ್ರೌಢ ಶಾಲೆಗಳಲ್ಲಿ ಶಿಕ್ಷಕರ ಕೊರತೆಯಿದೆ ಎಂದು ತಿಳಿಸಿದ್ದಾರೆ. ಖಾಲಿಯಿರುವ ಹುದ್ದೆಗಳಿಗೆ ಎದುರಾಗಿ ಅತಿಥಿ ಶಿಕ್ಷಕರನ್ನು ನೇಮಕ ಮಾಡಿಕೊಳ್ಳಲಾಗಿದೆ. ಮುಂದುವರೆದು ಕಲ್ಯಾಣ ಕರ್ನಾಟಕ ಪ್ರದೇಶದ 7 ಜಿಲ್ಲೆಗಳಲ್ಲಿ ಖಾಲಿಯಿರುವ ಪ್ರಾಥಮಿಕ ಶಾಲೆಗಳ 4882 ಮತ್ತು ಪ್ರೌಢ ಶಾಲೆಗಳ 385 ಹುದ್ದೆಗಳನ್ನು ಭರ್ತಿ ಮಾಡಲು ಸರ್ಕಾರದಿಂದ ಅನುಮತಿ ನೀಡಲಾಗಿದೆ.

2024ರ ಅಕ್ಟೋಬರ್ 28ರಂದು ನಡೆದ ಸಚಿವ ಸಂಪುಟ ಸಭೆಯಲ್ಲಿ ತೆಗೆದುಕೊಂಡ ನಿರ್ಣಯದಂತೆ ರಾಜ್ಯ ಸಿವಿಲ್ ಸೇವೆಗಳಲ್ಲಿನ




ಮೀಸಲಾತಿ ಅನ್ವಯವಾಗುವ ವೃಂದಗಳಲ್ಲಿನ ಹುದ್ದಗಳಿಗೆ ನೇರ ನೇಮಕಾತಿ ಮಾಡಲು ಹೊಸದಾಗಿ ಯಾವುದೇ ಅಧಿಸೂಚನೆಯನ್ನು ಹೊರಡಿಸಬಾರದೆಂದು ಸೂಚಿಸಲಾಗಿದೆ. ಈ ಹಿನ್ನೆಲೆಯಲ್ಲಿ ನೇಮಕಾತಿ ಅಧಿಸೂಚನೆ ಹೊರಡಿಸಿರುವುದಿಲ್ಲ ಎಂದು ಸಚಿವರು ಉತ್ತರದಲ್ಲಿ ತಿಳಿಸಿದ್ದಾರೆ.

ರಾಜ್ಯದ ಗಡಿ ಭಾಗದಲ್ಲಿರುವ ಔರಾದ(ಬಿ) ಕ್ಷೇತ್ರದಲ್ಲಿ ಮರಾಠಿ ಮತ್ತು ತೆಲುಗು ಭಾಷೆಗಳ ಪ್ರಭಾವ ಹೆಚ್ಚಾಗಿದೆ. ನಾನು ಶಾಸಕನಾದ ನಂತರ ಶಿಕ್ಷಣ ಕ್ಷೇತ್ರದ ಅಭಿವೃದ್ಧಿಗೆ ಮೊದಲ ಆದ್ಯತೆ ನೀಡಿದ್ದೇನೆ. ಕನ್ನಡದ ಹಿತರಕ್ಷಣೆಯ ದಿಶೆಯಲ್ಲಿ ನಿರಂತರ ಶ್ರಮಿಸುತ್ತಿದ್ದೇನೆ. ಎಲ್ಲ ಶಾಲೆಗಳಲ್ಲಿ ಕನ್ನಡ ಪಾಠಗಳು ನಡೆಯುವಂತೆ ಮಾಡಿದ್ದೇನೆ. ಗ್ರಾಮ ಸಂಚಾರ ನಡೆಸಿ ಶಾಲೆಗಳಲ್ಲಿನ ಕೊರತೆಗಳನ್ನು ತಿಳಿದುಕೊಂಡು ಸರಿಪಡಿಸುವ ವ್ಯವಸ್ಥೆ ಮಾಡುತ್ತಿದ್ದೇನೆ. ಅಗತ್ಯ ಮೂಲಭೂತ ಸೌಕರ್ಯಗಳನ್ನು ಒದಗಿಸಲು ಆದ್ಯತೆ ನೀಡಿದ್ದೇನೆ. ಎಲ್ಲ ಪ್ರಯತ್ನಗಳಿಂದಾಗಿ ಶಿಕ್ಷಣ ಕ್ಷೇತ್ರ ಸಾಕಷ್ಟು ಸುಧಾರಿಸುತ್ತಿದೆ ಎಂದಿದ್ದಾರೆ.

ಕ್ಷೇತ್ರದ ಸಾಕಷ್ಟು ಶಾಲೆಗಳಲ್ಲಿ ಶಿಕ್ಷಕರ ಸಮಸ್ಯೆಯಿದೆ. ಮಕ್ಕಳ ಸಂಖ್ಯೆಗೆ ಅನುಗುಣವಾಗಿ ಶಿಕ್ಷಕರಿಲ್ಲ. ವಿದ್ಯಾರ್ಥಿಗಳಿಲ್ಲದ ಕಡೆ ಹೆಚ್ಚಿನ ಶಿಕ್ಷಕರಿದ್ದು, ವಿದ್ಯಾರ್ಥಿಗಳು ಹೆಚ್ಚಿರುವ ಕಡೆ ಶಿಕ್ಷಕರ ಕೊರತೆಯಿದೆ. ಅಧಿಕಾರಿಗಳು ಸುಳ್ಳು ಮಾಹಿತಿ ನೀಡಿ ಸಚಿವರನ್ನು ದಾರಿ ತಪ್ಪಿಸುತ್ತಿದ್ದಾರೆ. ಶಿಕ್ಷಕರ ಕೊರತೆಯಿಂದಾಗಿ ಗಡಿ ಭಾಗದಲ್ಲಿ ಶಿಕ್ಷಣಕ್ಕೆ ದೊಡ್ಡ ಸಮಸ್ಯೆಯಾಗಿ ಪರಿಣಮಿಸಿದೆ.

ವಿದ್ಯಾರ್ಥಿಗಳ ಸಂಖ್ಯೆಗೆ ಅನುಗುಣ ಶಿಕ್ಷಕರನ್ನು ಒದಗಿಸಬೇಕು. ಮಕ್ಕಳಿಗೆ ಗುಣಮಟ್ಟದ ಶಿಕ್ಷಣ ಲಭಿಸಬೇಕು. ನಮ್ಮ ಮಕ್ಕಳು ಕೂಡ ಇಂದಿನ ಸ್ಪರ್ಧಾತ್ಮಕತೆಗೆ ಒಗ್ಗಿಕೊಳ್ಳಬೇಕು. ಈ ದಿಶೆಯಲ್ಲಿ ಸಚಿವರು ಪ್ರಮಾಣಿಕವಾಗಿ ಕೆಲಸ ಮಾಡಬೇಕು. ಗಡಿ ಭಾಗದಲ್ಲಿರುವ ಶಾಲೆಗಳಲ್ಲಿ ಸಮಸ್ಯೆ ಹೆಚ್ಚಿನ ಪ್ರಮಾಣದಲ್ಲಿದ್ದು, ಈ ಭಾಗದತ್ತ ಹೆಚ್ಚಿನ ಕಾಳಜಿ ವಹಿಸಬೇಕು. ಶಿಕ್ಷಕರ ಸಮಸ್ಯೆ ಸೇರಿದಂತೆ ಸರ್ಕಾರಿ ಶಾಲೆಗಳಲ್ಲಿನ ಎಲ್ಲ ಸಮಸ್ಯೆಗಳನ್ನು ಶೀಘ್ರ ಪರಿಹರಿಸಿ ಗಡಿ ಭಾಗದಲ್ಲಿ ಶಿಕ್ಷಣ ಸುಧಾರಣೆಗೆ ಪ್ರಯತ್ನಿಸಬೇಕೆಂದು ಶಾಸಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಬೋಂತಿ ತಾಂಡಾದಲ್ಲಿ ಹೋಳಿ ಹಬ್ಬದ ಸಂಭ್ರಮ ಕುಣಿದು ಕುಪ್ಪಳಿಸಿದ ಶಾಸಕ ಪ್ರಭು ಚವ್ಹಾಣ



ಮಲ್ಲಮ್ಮ ನುಡಿ ವಾರ್ತೆ

ಔರಾದ:ಮಾ.15:ಮಾಜಿ ಸಚಿವರು ಹಾಗೂ ಔರಾದ(ಬಿ) ಶಾಸಕರಾದ ಪ್ರಭು ಬಿ.ಚವ್ಹಾಣ ಅವರು ಮಾ.14ರಂದು ಸ್ವ-ಗ್ರಾಮ ಬೋಂತಿ ತಾಂಡಾದಲ್ಲಿ ಹೋಳಿ ಹಬ್ಬವನ್ನು ಸಂಭ್ರಮದಿಂದ ಆಚರಿಸಿದರು.

ಕುಟುಂಬ ಸಮೇತ ಹಬ್ಬದಲ್ಲಿ ಪಾಲ್ಗೊಂಡ ಶಾಸಕರು, ಬಂಜಾರಾ ಕಲಾವಿದರೊಂದಿಗೆ ಕೋಲಾಟವಾಡಿದರು. ಮಹಿಳಾ ಕಲಾವಿದರೊಂದಿಗೆ ಹೆಜ್ಜೆ ಹಾಕಿದರು. ಯುವಕರೊಂದಿಗೆ ಧ್ವನಿವರ್ಧಕದ ಹಾಡುಗಳಿಗೆ ಕುಣಿದು ಕುಪ್ಪಳಿಸಿದರು. ಈ ವೇಳೆ ಯುವಕ, ಯುವತಿಯರು, ಮಕ್ಕಳು, ಮಹಿಳೆಯರು, ವೃದ್ಧರು ಕುಣಿದು ಸಂತೋಷಪಟ್ಟರು.

ಮಹಿಳೆಯರು ಸಾಂಪ್ರದಾಯಿಕ ಬಣ್ಣ-ಬಣ್ಣದ ಉಡುಗೆಗಳನ್ನು ಧರಿಸಿದ್ದರೆ, ಪುರುಷರು ಪೇಟಾ ಧರಿಸಿ ಗಮನ ಸೆಳೆದರು. ಶಾಸಕರು ಎಲ್ಲರ ಬಳಿಗೆ ತೆರಳಿ ಬಣ್ಣ ಹಾಕಿ ಹೋಳಿ ಹಬ್ಬದ ಶುಭಾಶಯಗಳನ್ನು ಕೋರಿದರು. ಈ ವೇಳೆ ವಿವಿಧ ಗ್ರಾಮಗಳಿಂದ ಆಗಮಿಸಿದ ಪುರುಷ ಮತ್ತು ಮಹಿಳಾ ಕಲಾ ತಂಡಗಳಿಂದ ಸಾಂಪ್ರದಾಯಿಕ ಹಾಡು, ನೃತ್ಯಪ್ರದರ್ಶನ ಹಾಗೂ ಕೋಲಾಟಗಳು ನಡೆದವು.

ಈ ವೇಳೆ ಮಾತನಾಡಿದ ಶಾಸಕರು, ಹೋಳಿ ಹಬ್ಬಕ್ಕೆ ದೇಶದ ಪರಂಪರೆಯಲ್ಲಿ ಅತ್ಯಂತ ಮಹತ್ವದ ಸ್ಥಾನಮಾನವಿದೆ. ವಿಶೇಷವಾಗಿ ಬಂಜಾರಾ ಸಮಾಜದಲ್ಲಿ ಹೋಳಿ ಹಬ್ಬವನ್ನು ಅತ್ಯಂತ ವಿಜೃಂಭಣೆಯಿಂದ ಆಚರಿಸಲಾಗುತ್ತದೆ. ಕ್ಷೇತ್ರದ 165 ತಾಂಡಾಗಳಲ್ಲಿಯೂ ಈ ಹಬ್ಬವನ್ನು ಆಚರಿಸಲಾಗುತ್ತದೆ ಎಂದರು.

ನಮ್ಮ ದೇಶದ ಸಂಸ್ಕೃತಿ ಮತ್ತು ಪರಂಪರೆಯನ್ನು ಉಳಿಸಿ ಬೆಳೆಸಬೇಕೆಂಬ ಉದ್ದೇಶದಿಂದ ಎಲ್ಲ ಹಬ್ಬಗಳನ್ನು ವಿಶಿಷ್ಟವಾಗಿ ಆಚರಿಸುವ ನಾನು, ಅಧಿವೇಶನಗಳು ನಡೆಯುತ್ತಿದ್ದರೂ ಕೂಡ ಹಬ್ಬದಲ್ಲಿ ಭಾಗವಹಿಸಿದ್ದೇನೆ. ಔರಾದ(ಬಿ) ಕ್ಷೇತ್ರ ಸಮೃದ್ಧಿಯಾಗಬೇಕು. ರೈತರು ಮತ್ತು ಎಲ್ಲ ನಾಗರಿಕರಿಗೂ ಒಳಿತಾಗಬೇಕೆಂದು ದೇವರಲ್ಲಿ ಬೇಡಿಕೊಂಡಿದ್ದೇನೆ ಎಂದು ಹೇಳಿದರು.

ಸಾಕಷ್ಟು ಸಂಖ್ಯೆಯಲ್ಲಿ ಜನ ವೇಶ ಭೂಷಣಗಳೊಂದಿಗೆ ಆಗಮಿಸಿ ಹಬ್ಬದ ಸಂಭ್ರಮದಲ್ಲಿ ಪಾಲ್ಗೊಂಡಿರುವುದಕ್ಕೆ ಸಂತೋಷವಾಗುತ್ತಿದೆ. ನಮ್ಮ ಸಂಸ್ಕೃತಿ, ಪರಂಪರೆಯನ್ನು ಉಳಿಸಬೇಕು. ಈ ದಿಶೆಯಲ್ಲಿ ಎಲ್ಲರೂ ಶ್ರಮಿಸಬೇಕಿದೆ ಎಂದರು.

ಈ ಸಂದರ್ಭದಲ್ಲಿ ಮುಖಂಡರಾದ ರಾಮಶೆಟ್ಟಿ ಪನ್ನಾಳೆ, ಮಾರುತಿ ಚವ್ಹಾಣ, ಧೊಂಡಿಬಾ ನರೋಟೆ, ಶಿವರಾಜ ಅಲ್ಮಾಜೆ, ಪ್ರತೀಕ್ ಚವ್ಹಾಣ, ಪ್ರದೀಪ ಪವಾರ್, ಬಾಲಾಜಿ ಠಾಕೂರ, ಮಂಜು ಸ್ವಾಮಿ, ಸಚಿನ ರಾಠೋಡ, ಜೈಪಾಲ ರಾಠೋಡ, ಗುರುನಾಥ ರಾಜಗೀರಾ, ಬಾಲಾಜಿ ವಾಗ್ಮಾರೆ ಸೇರಿದಂತೆ ಇತರರು ಉಪಸ್ಥಿತರಿದ್ದರು.

# ಕಲಬುರಗಿ ಜಿಲ್ಲೆಯಿಂದ ತಿರಂಗಾ ಯಾತ್ರೆ

# 23ಕ್ಕೆ ರಾಮೇಶ್ವರದಲ್ಲಿ ಅಮರ ಬಲಿದಾನ ದಿನಾಚರಣೆ

ಮಲ್ಲಮ್ಮ ನುಡಿ ವಾರ್ತೆ

ಬೀದರ. ಮಾ. 15 : ಜೈ ಭಾರತ ಮಾತಾ ಸೇವಾ ಸಮಿತಿಯು ಮಾ. 23 ರಂದು ತಮಿಳುನಾಡಿನ ರಾಮೇಶ್ವರದಲ್ಲಿ ಅಮರ ಬಲಿದಾನ ದಿನ ಆಚರಿಸಲು ನಿರ್ಧರಿಸಿದೆ.

ಸಮಿತಿಯಿಂದ ಈಗಾಗಲೇ ಬೆಂಗಳೂರು, ಮುಂಬೈ, ನವದೆಹಲಿ, ಪಂಜಾ???ನಲ್ಲಿ ಅಮರ ಬಲಿದಾನ ದಿನ ಆಚರಿಸಲಾಗಿದೆ. ಸಮಿತಿಯ ರಾಷ್ಟ್ರೀಯ ಸಂಸ್ಥಾಪಕ ಅಧ್ಯಕ್ಷ ಹವಾ ಮಲ್ಲಿನಾಥ ಮಹಾರಾಜರ ನೇತೃತ್ವದಲ್ಲಿ ಈ ಬಾರಿ ರಾಮೇಶ್ವರದ ತುಳಸಿ ಬಾಬಾ ಮಾದಮ ರಸ್ತೆಯಲ್ಲಿರುವ ಗೋಸ್ವಾಮಿ ಮಾದಮ ಸತ್ಸಂಗ ಹಾಲ್‌ನಲ್ಲಿ ಕಾರ್ಯಕ್ರಮ ಹಮ್ಮಿಕೊಳ್ಳಲು ತೀರ್ಮಾನಿಸಲಾಗಿದೆ ಎಂದು ಸಮಿತಿಯ ಭಾಲ್ಕಿ ತಾಲ್ಲೂಕು ಘಟಕದ ಅಧ್ಯಕ್ಷ ಪಪ್ಪು ಪಾಟೀಲ ಖಾನಾಪುರ ತಿಳಿಸಿದ್ದಾರೆ.

ಬಲಿದಾನ ದಿನದ ಅಂಗವಾಗಿ ತಿರಂಗಾ ಯಾತ್ರೆ ನಡೆಯಲಿದೆ. ಯಾತ್ರೆ ಕಲಬುರಗಿ ಜಿಲ್ಲೆಯ ಆಳಂದ ತಾಲ್ಲೂಕಿನ ಭಾರತ ಮಾತಾ ಮಂದಿರದಿಂದ ಮಾ. 20 ರಂದು ಆರಂಭಗೊಳ್ಳಲಿದೆ ಎಂದು ಹೇಳಿದ್ದಾರೆ.

ಯಾತ್ರೆಯು ಕಲಬುರಗಿ, ಜೇವರ್ಗಿ, ಶಹಾಪುರ, ಸುರಪುರ, ಲಿಂಗಸೂರ,




ಮಸ್ಕಿ, ಸಿಂಧನೂರು, ಶಿರಗುಪ್ಪ ಮಾರ್ಗವಾಗಿ ಸಾಗಿ ಬಳ್ಳಾರಿಯ ಬೈರಾಪುರದ ಮಲ್ಲಿನಾಥ ಆಶ್ರಮ ತಲುಪಲಿದೆ. ಮಾ. 21 ರಂದು ಅಲ್ಲಿಂದ ಚಲಿಕೇರಾ, ಹಿರೂರು, ಶಿರಾ, ತುಮಕೂರ, ನೆಲಮಂಗಲ, ನೈಸ್ ರಸ್ತೆ, ಹೊಸೂರು ರಸ್ತೆ, ಚಂದಾಪುರ ಮೂಲಕ ಅತ್ತಿಬೆಲೆಯ ಎಸ್.ಬಿ. ಕಲ್ಯಾಣ ಮಂಟಪಕ್ಕೆ ತಲುಪಲಿದೆ. ಮಂಟಪದಲ್ಲಿ ಅಮರ ಬಲಿದಾನ ದಿನಾಚರಣೆ ಜರುಗಲಿದೆ ಎಂದು ತಿಳಿಸಿದ್ದಾರೆ.

ಅಲ್ಲಿಂದ ಹೊರಟು ಮಾ. 23ಕ್ಕೆ ರಾಮೇಶ್ವರ ತಲುಪಲಿದೆ ಎಂದು ಹೇಳಿದ್ದಾರೆ.

ಭಗತಸಿಂಗ್, ಸುಖದೇವ್, ರಾಜಗುರು, ಸುಭಾಸಚಂದ್ರ ಬೋಸ್, ಚಂದ್ರಶೇಖರ ಆಜಾದ್, ಅಶ್ಫಾಕ್‌ಉಲ್ಲಾ ಖಾನ್, ರಾಮಪ್ರಸಾದ್ ಬಿಸಮಿಲ್, ವೀರ ಸಾವರಕರ್, ಉದಮಸಿಂಗ್, ಝಾನ್ಸಿರಾಣಿ ಲಕ್ಷ್ಮಿಬಾಯಿ, ಕಿತ್ತೂರು ರಾಣಿ ಚನ್ನಮ್ಮ, ಸಂಗೊಳ್ಳಿ ರಾಯಣ್ಣ, ವಾಸುದೇವ ಬಲವಂತರಾವ್ ಸೇರಿದಂತೆ ಸಾವಿರಾರು ಜನ ದೇಶದ ಸ್ವಾತಂತ್ರ್ಯಕ್ಕಾಗಿ ತ್ಯಾಗ, ಬಲಿದಾನ ನೀಡಿದ್ದಾರೆ. ಅವರನ್ನು ಸ್ಮರಿಸುವುದು ಹಾಗೂ ಗೌರವಿಸುವುದು ದೇಶದ ಪ್ರತಿಯೊಬ್ಬರ ಆದ್ಯ ಕರ್ತವ್ಯವಾಗಿದೆ. ಅಮರ ಬಲಿದಾನ ದಿನಾಚರಣೆ ಕಾರ್ಯಕ್ರಮ ಹಾಗೂ ತಿರಂಗಾ ಯಾತ್ರೆಯಲ್ಲಿ ದೇಶ ಭಕ್ತರು ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಳ್ಳಬೇಕು ಎಂದು ಮನವಿ ಮಾಡಿದ್ದಾರೆ.

ಭಿತ್ತಿಪತ್ರ ಬಿಡುಗಡೆ: ಜೈ ಭಾರತ ಮಾತಾ ಸೇವಾ ಸಮಿತಿ ರಾಮೇಶ್ವರದಲ್ಲಿ ಹಮ್ಮಿಕೊಂಡಿರುವ ಅಮರ ಬಲಿದಾನ ದಿನಾಚರಣೆಯ ಭಿತ್ತಿಪತ್ರವನ್ನು ಜಿಲ್ಲಾಧಿಕಾರಿ ಶಿಲ್ಪಾ ಶರ್ಮಾ ಬೀದರನಲ್ಲಿ ಶನಿವಾರ ಬಿಡುಗಡೆ ಮಾಡಿದರು. ಸಮಿತಿಯ ಭಾಲ್ಕಿ ತಾಲ್ಲೂಕು ಘಟಕದ ಅಧ್ಯಕ್ಷ ಪಪ್ಪು ಪಾಟೀಲ ಖಾನಾಪುರ ಹಾಗೂ ಸಮಿತಿಯ ಪದಾಧಿಕಾರಿಗಳು ಹಾಜರಿದ್ದರು.

## ಕೇಕ್ ಕತ್ತರಿಸಿ ಕಾನ್ಶಿರಾಂ ಜನ್ಮದಿನ ಆಚರಣೆ



ಮಲ್ಲಮ್ಮ ನುಡಿ ವಾರ್ತೆ

ಬೀದರ. ಮಾ. 15 : ಅಖಿಲ ಭಾರತ ಬಹುಜನ ಸಮಾಜ ಪಕ್ಷದ ಜಿಲ್ಲಾ ಘಟಕದ ವತಿಯಿಂದ ಇಲ್ಲಿಯ ಅಂಬೇಡ್ಕರ್ ವೃತ್ತ ಸಮೀಪದ ಹೋಟೆಲ್ ಮಯೂರಾ ಬರೀದಶಾಹಿಯಲ್ಲಿ ಶುಕ್ರವಾರ ಕೇಕ್ ಕತ್ತರಿಸಿ ಪಕ್ಷದ ಸಂಸ್ಥಾಪಕ ಕಾನ್ಶಿರಾಂ ಅವರ 91ನೇ ಜನ್ಮದಿನ ಆಚರಿಸಲಾಯಿತು.

ಕಾನ್ಶಿರಾಂ ಅವರ ಬಹುಜನ ಚಳವಳಿ ದೇಶದ ಮನೆ ಮನೆಗೂ ತಲುಪಬೇಕು ಎಂದು ಪಕ್ಷದ ರಾಜ್ಯ ಘಟಕದ ಉಪಾಧ್ಯಕ್ಷ ದತ್ತು ಸೂರ್ಯವಂಶಿ ಹೇಳಿದರು.

ಕಾನ್ಶಿರಾಂ ಅವರು ಬಹುಸಂಖ್ಯಾತರಲ್ಲಿ ರಾಜಕೀಯ ಪ್ರಜ್ಞೆ ಮೂಡಿಸಿದ್ದರು. ಅವರಿಗೆ ರಾಜಕೀಯ ಅಧಿಕಾರ ನೀಡಿದ್ದರು ಎಂದು ಪಕ್ಷದ ಜಿಲ್ಲಾ ಘಟಕದ ಅಧ್ಯಕ್ಷ ಯೋಹಾನ್ ಡಿಸೋಜಾ ಚಿಲ್ಲರ್ಗಿ ಸ್ಮರಿಸಿದರು.

ಪಕ್ಷದ ರಾಜ್ಯ ಘಟಕದ ಪ್ರಧಾನ ಕಾರ್ಯದರ್ಶಿಗಳಾದ ಸಂಜುಕುಮಾರ ಮೇದ, ಸತ್ಯದೀಪ ಹಾವನೋರ್, ಕಾರ್ಯದರ್ಶಿ ಜಿ. ಆಸ್ಕರ್, ಜಿಲ್ಲಾ ಘಟಕದ ಸಂಯೋಜಕ ಮಾಸ್ಟರ್ ಶಾದ್ರಕ್, ಉಪಾಧ್ಯಕ್ಷ ಗುಣವಂತ ಸಿಂಧೆ, ಬೀದರ್ ದಕ್ಷಿಣ ಘಟಕದ ಅಧ್ಯಕ್ಷ ಉಮೇಶ್ ಗುತೆ-ದಾರ್, ಪ್ರಧಾನ ಕಾರ್ಯದರ್ಶಿ ಮಾರ್ಟಿನ್ ಮನ್ನಳ್ಳಿ, ಬೀದರ್ ಉತ್ತರ ಘಟಕದ ಅಧ್ಯಕ್ಷ ರಾಜಕುಮಾರ ಡೊಂಗ್ರೆ, ಉಪಾಧ್ಯಕ್ಷ ಸಾಲೋಮನ್, ಬೀದರ್ ನಗರ ಘಟಕದ ಅಧ್ಯಕ್ಷ ಡ್ಯಾನಿಯಲ್ ಮತ್ತಿತರರು ಇದ್ದರು.

## ಮಾ.18 ರಂದು ಲೋಕಾಯುಕ್ತ ಅಹವಾಲು ಸಭೆ

ಮಲ್ಲಮ್ಮ ನುಡಿ ವಾರ್ತೆ

ಬೀದರ: ಮಾ.15: ಕರ್ನಾಟಕ ಲೋಕಾಯುಕ್ತ ಬೀದರ ಪೊಲೀಸ್ ಠಾಣೆ ವತಿಯಿಂದ ಬೀದರ ತಾಲ್ಲೂಕು ಮಟ್ಟದ ಅಧಿಕಾರಿಗಳ ಉಪಸ್ಥಿತಿಯಲ್ಲಿ ಮಾರ್ಚ.18 ರಂದು ಬೆಳಿಗ್ಗೆ 11.30 ಗಂಟೆಗೆ ಕಮಲನಗರ ಗ್ರಾಮ ಪಂಚಾಯತ ಕಚೇರಿ ಸಭಾಂಗಣದಲ್ಲಿ ಸಾರ್ವಜನಿಕ ಕುಂದು ಕೊರತೆ/ಅಹವಾಲು ಸ್ವೀಕಾರ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದೆ ಎಂದು ಕರ್ನಾಟಲ ಲೋಕಾಯುಕ್ತ ಪೊಲೀಸ್ ಠಾಣೆ ಬೀದರ ಪೆಲೀಸ್ ಉಪಾಧೀಕ್ಷಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಸಾರ್ವಜನಿಕರಿಗೆ ಸರ್ಕಾರಿ ಅಧಿಕಾರಿಗಳಿಂದ ತಮಗೆ ಆಗಬೇಕಾದ ಕೆಲಸಗಳಲ್ಲಿ ವಿಳಂಬವಾಗಿದ್ದರೆ ಅಥವಾ ಅಧಿಕಾರಿಗಳು ನ್ಯಾಯ ಸಮ್ಮತವಾಗಿ ಮಾಡಿಕೊಡಬೇಕಾದ ಕೆಲಸಗಳಲ್ಲಿ ವೃಥಾ ತೊಂದರೆ ಕೊಡುತ್ತಿದ್ದರೆ ಅಥವಾ ಭ್ರಷ್ಟಾಚಾರಕ್ಕೆ ಸಂಬಂಧಿಸಿದ ದೂರುಗಳಿದ್ದಲ್ಲಿ ತಮ್ಮ ಕುಂದುಕೊರತೆಗಳನ್ನು ನೇರವಾಗಿ ಬಂದು ಸಲ್ಲಿಸಲು ಹಾಗೂ ಸ್ಥಳದಲ್ಲಿಯೇ ಇದ್ದ ಅಧಿಕಾರಿಗಳೊಂದಿಗೆ ಕೆಲಸ ನೆರವೇರಿಸಿಕೊಳ್ಳಲು ಅಥವಾ ಸ್ಥಳದಲ್ಲಿಯೇ ದೂರು ಅರ್ಜಿಯ ಫಾರಂ ನಂ: 1 ಮತ್ತು 2 ತೆಗೆದುಕೊಂಡು ದೂರು ನೀಡಲು ಅನುಕೂಲ ಕಲ್ಪಿಸಲಾಗಿದ್ದು, ಸಾರ್ವಜನಿಕರು ಇದರ ಸದುಪಯೋಗ ಪಡೆದುಕೊಳ್ಳಬೇಕು. ಹೆಚ್ಚಿನ ಮಾಹಿತಿಗಾಗಿ ಎಸ್‌ಪಿ ರವರ ಮೊ.ಸಂ-9364062519, ಡಿಎಸ್‌ಪಿ ಅವರ ಮೊಬೈಲ ಸಂ-9364062571, ಪಿಐ-1 ಅವರ ಮೊಬೈಲ ಸಂ-9364062672, ಪಿಐ-2 ಅವರ ಮೊ.ಸಂ-9364062673, ಪಿಐ-3 ಅವರ ಮೊ.ಸಂ-9364062674, ಮತ್ತು ಪಿಐ-4 ಅವರ ಮೊ.ಸಂ-9364062675, ಗಳನ್ನು ಸಂಪರ್ಕಿಸಬಹುದಾಗಿದೆ ಎಂದು ಅವರು ತಿಳಿಸಿದ್ದಾರೆ.

## ಬಸವಾದಿ ಶರಣರ ಪ್ರಸಾದ ತತ್ವ ವಿಶ್ವಕ್ಕೆ ಮಾದರಿ



ಮಲ್ಲಮ್ಮ ನುಡಿ ವಾರ್ತೆ

ಭಾಲ್ಕಿ:ಮಾ.15: ಬಸವಾದಿ ಶರಣರು ಅರುಹಿದ ಪ್ರಸಾದ ತತ್ವ ವಿಶ್ವಕ್ಕೆ ಮಾದರಿಯಾಗಿದೆ ಎಂದು ಬಸವಕಲ್ಯಾಣ ಅನುಭವ ಮಂಟಪ ಟ್ರಸ್ಟ್ ಅಧ್ಯಕ್ಷ ನಾಡೋಜ ಡಾ.ಬಸವಲಿಂಗ ಪಟ್ಟದ್ದೇವರು ಹೇಳಿದರು. ಪಟ್ಟಣದ ಹಿರೇಮಠ ಸಂಸ್ಥಾನದಲ್ಲಿ ಶುಕ್ರವಾರ ಆಯೋಜಿಸಿದ್ದ 486ನೆಯ ಶಿವಾನುಭವಗೋಷ್ಠಿ, ಬಿಬ್ಬಿ ಮಾಚಯ್ಯನವರ ಸ್ಮರಣೆ ಮತ್ತು ಸಾಮೂಹಿಕ ಇಷ್ಟಲಿಂಗ ಗ್ರಂಥ ಲೋಕಾರ್ಪಣೆ ಕಾರ್ಯಕ್ರಮದ ದಿವ್ಯ ಸಾನ್ನಿಧ್ಯ ವಹಿಸಿ ಅವರು ಮಾತನಾಡಿದರು. ವಸ್ತು, ಒಡವೆ, ಸಂಪತ್ತು ಇಲ್ಲದಿದ್ದರೂ ಜೀವಿಗಳು ಬದುಕಬಲ್ಲವು. ಆದರೆ ಅನ್ನ, ಆಹಾರ ಇಲ್ಲದಿದ್ದರೆ ಬದುಕಲಾಗದು. ಆದ್ದರಿಂದ ಮನುಷ್ಯನ ಬದುಕಿಗೆ ಮೂಲಾಧಾರವಾದ ಅನ್ನವೇ ಪ್ರಸಾದ ಅದುವೇ ಪರಬ್ರಹ್ಮ ಅಂಥ ಪ್ರಸಾದದ ಒಂದಗುಳ ಕೆಡಿಸಲಾಗದು ಎಂದು ತಿಳಿಸಿದರು.

ಪೀಠಾಧಿಪತಿ ಗುರುಬಸವ ಪಟ್ಟದ್ದೇವರು ಸದಾಶಯ ನುಡಿಗಳು ನುಡಿದರು. ಪ್ರಭುಲಿಂಗಸ್ವಾಮೀಜಿ, ಸದಾಶಿವ ಸ್ವಾಮೀಜಿ, ಬಸವಮುರುಘ ರಾಜೇಂದ್ರಸ್ವಾಮೀಜಿ ಸಮ್ಮುಖ ವಹಿಸಿದರು.

ಹುಮನಾಬಾದ ಬಸವ ಸೇವಾ ಪ್ರತಿಷ್ಠಾನ ಅಧ್ಯಕ್ಷ ಚನ್ನಬಸಪ್ಪ ವಡ್ಡನಕೇರೆ ಬಿಬ್ಬಿ ಬಾಚಯ್ಯ ಶರಣರ ಜೀವನ ಮತ್ತು ಸಂದೇಶ ಕುರಿತು ಅನುಭಾವ ನೀಡಿದರು.

ಸುನೀತಾ ವಿಜಯಕುಮಾರ ಧೂಳೆ ದಾಡಗಿ ಅವರ ದಾಸೋಹದಲ್ಲಿ ಪ್ರಕಟವಾದ ಸಾಮೂಹಿಕ ಪ್ರಾರ್ಥನೆ ಗ್ರಂಥ ಡಾ.ಸೋಮನಾಥ ಯಾಳವಾರ ಲೋಕಾರ್ಪಣೆ ಮಾಡಿದರು.

ಬಸ್ ಡಿಪೋ ಘಟಕದ ವ್ಯವಸ್ಥಾಪಕ ಭದ್ರಪ್ಪ ಹುಡಗೆ ಅಧ್ಯಕ್ಷತೆ ವಹಿಸಿದರು.

ಕು.ಮಾಹಿಕಾ ಕಲ್ಯಾಣಿ ಇವರ ನಾಲ್ಕನೇ ಹುಟ್ಟುಹಬ್ಬ ನಿಮಿತ್ತ ಡಾ.ರಾಜರಾಜೇಶ್ವರಿ ಡಾ.ವೀರಭದ್ರ ಕಲ್ಯಾಣಿ ಕಲಬುರಗಿ ಅವರಿಂದ ಸಮಾರಂಭದ ಭಕ್ತಿದಾಸೋಹ ನೆರವೇರಿತು. ಈ ಸಂದರ್ಭದಲ್ಲಿ ಹಾವಗೆಪ್ಪ ಧೂಳೆ, ಶಿವಕುಮಾರ ತಮಾಸಂಗೆ, ಶಿವಕುಮಾರ ಧೂಳೆ, ರಾಜಕುಮಾರ ಕೋಟೆ, ಮಲ್ಲಪ್ಪ ಧೂಳೆ, ದಶರಥರಾವ ವಳಸಂಗೆ, ಮಲ್ಲಿಕಾರ್ಜುನ ಸಂಗಮಕರ, ದೀಪಕ ಕೊಡಗೆ, ರುದ್ರವಾಡಿ ಮಾಣಿಕಪ್ಪ ಕೋಟೆ ಮುಂತಾದವರು ಭಾಗವಹಿಸಿದ್ದರು. ದಾಡಗಿ ಬಸವೇಶ್ವರ ಭಜನಾ ಮಂಡಳಿ ಅವರಿಂದ ವಚನ ಭಜನೆ ನಡೆಯಿತು. ಹುಮನಾಬಾದ ಬಸವಸೇವಾ ಪ್ರತಿಷ್ಠಾನದ ಪದಾಧಿಕಾರಿಗಳು ಉಪಸ್ಥಿತರಿದ್ದರು. ಧನರಾಜ ವಾಲೆ ದಾಡಗಿ ಧರ್ಮಗ್ರಂಥ ಪಠಣ ಮಾಡಿದರು. ನಾಗಶೆಟ್ಟಿ ಚೋಳಾ ದಾಡಗಿ ಸ್ವಾಗತಿಸಿದರು. ವೀರಣ್ಣ ಕುಂಬಾರ ನಿರೂಪಿಸಿದರು. ದೀಪಕ ಠಮಕೆ ವಂದಿಸಿದರು.

## ಜಾನಸನ ಫೋಡೆ ರವರಿಗೆ ವಿಧಾನ ಪರಿಷತ್ ಸದಸ್ಯ ಮಾಡಲು ಗುರುದಾಸ ಆಗ್ರಹ

ಮಲ್ಲಮ್ಮ ನುಡಿ ವಾರ್ತೆ

ಬೀದರ. ಮಾ. 15 : ಬೀದರ ಜಿಲ್ಲೆಯ ಮಾದಿಗ ಸಮಾಜದ ಮುಖಂಡರು ಹಾಗೂ ಕೆಪಿಸಿಸಿ ಕಾರ್ಯದರ್ಶಿಗಳಾದ ಜಾನಸನ ಫೋಡೆ ರವರು ಸರಿ ಸುಮಾರು ವರ್ಷಗಳಿಂದ ಕಾಂಗ್ರೆಸ್ ಪಕ್ಷದ ಹಗಲು ರಾತ್ರಿ ಎನ್ನದೆ ಪಕ್ಷಕಾಗಿ ಹಗಲಿರುಳು ದುಡಿದಿದ್ದಾರೆ ಎಂದು ಗುರುದಾಸ



ಅಮದಲಪಾಡ ಪತ್ರಿಕೆ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಕಾಂಗ್ರೆಸ್ ಪಕ್ಷದ ಮಾದಿಗ ಸಮಾಜದ ಮುಖಂಡರಿಗೆ ಯಾವುದೆ ರೀತಿಯಲ್ಲಿ ಉನ್ನತ ಹುದ್ದೆ ನೀಡಿಲ್ಲ ಆದಕಾರಣ ಮಾನ್ಯ ಕೆಪಿಸಿಸಿ ರಾಜ್ಯಾಧ್ಯಕ್ಷರಾದ ಡಿ ಕೆ ಶಿವಕುಮಾರ್ ಅವರು ಜಾನಸನ ಫೋಡೆ ರವರಿಗೆ ವಿಧಾನ ಪರಿಷತ್ ಸದಸ್ಯರಾಗಿ ನಾಮ ನಿರ್ದೇಶನ ಮಾಡಲು ಆಗ್ರಹಿಸಿದ್ದಾರೆ.

## ಐದು ವರ್ಷಗಳ ಮೇಲ್ಪಟ್ಟು ಸಂಘ-ಸಂಸ್ಥೆಗಳ ನವೀಕರಣ(ಫೈಲಿಂಗ್) ಮಾಡಲು ಡಿ.31ರವರೆಗೆ ಅವಕಾಶ

ಮಲ್ಲಮ್ಮ ನುಡಿ ವಾರ್ತೆ

ಬೀದರ: ಮಾ.15: ಬೀದರ ಜಿಲ್ಲೆಯಲ್ಲಿ ಕರ್ನಾಟಕ ಸಂಘಗಳ ನೊಂದಣಿ ಕಾಯ್ದೆ 1960 ರಡಿಯಲ್ಲಿ ನೊಂದಣಿಯಾಗಿರುವ ಸೂಸೈಟಿಗಳು/ಸಂಘ-ಸಂಸ್ಥೆಗಳು 05 ವರ್ಷಗಳಿಗೆ ಮೇಲ್ಪಟ್ಟು ಫೈಲಿಂಗ್ ಮಾಡಿಕೊಳ್ಳದೇ ಬಾಕಿ ಇರುವ ಸಂಘ-ಸಂಸ್ಥೆಗಳು ಪ್ರತಿ ವರ್ಷಕ್ಕೆ ರೂ.3000 ಹೆಚ್ಚುವರಿ ದಂಡ ಪಾವತಿಸಿ ಫೈಲಿಂಗ್ ಮಾಡಿಕೊಳ್ಳತಕ್ಕದ್ದು. ಈ ಅವಕಾಶವು ದಿನಾಂಕಃ 31-12-2025 ರ ಅಂತ್ಯದವರೆಗೆ ಜಾರಿಯಲ್ಲಿರುತ್ತದೆ ಬೀದರ ಸಹಕಾರ ಸಂಘಗಳ ಉಪ ನಿಬಂಧಕರು ಹಾಗೂ ಜಿಲ್ಲಾ ನೊಂದಣಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಕರ್ನಾಟಕ ಸಂಘಗಳ ನೊಂದಣಿ ಕಾಯ್ದೆ 1960 ರಡಿ ನೊಂದಣಿಯಾದ ಪ್ರತಿಯೊಂದು ಸಂಘವು ಪ್ರತಿ ವರ್ಷ ನವೀಕರಣಗೊಳ್ಳಬೇಕಾಗಿರುತ್ತದೆ. 05 ವರ್ಷಗಳಿಗೂ ಮೇಲ್ಪಟ್ಟು ನವೀಕರಿಸದೇ/ಫೈಲಿಂಗ್ ಮಾಡದೇ ಬಾಕಿ ಇರುವ ಸಂಘ-ಸಂಸ್ಥೆಗಳ ನೊಂದಣಿಯನ್ನು ಕಲಂ 13 ರಂತೆ ರದ್ದುಗೊಳಿಸಲು ಕಾಯ್ದೆಯಲ್ಲಿ ಅವಕಾಶ ಇರುತ್ತದೆ. ಸಂಘ-ಸಂಸ್ಥೆಗಳ ಸದಸ್ಯರ ಹಿತದೃಷ್ಟಿಯಿಂದ ಮತ್ತೊಂದು ಬಾರಿ ದಂಡ ವಿಧಿಸಿ ದಿ: 31-12-2025 ರವರೆಗೆ ನವೀಕರಿಸಲು/ಫೈಲಿಂಗ್ ಮಾಡಲು ಅನುಮತಿಯನ್ನು ನೀಡಲಾಗಿದೆ ಎಂದು ಅವರು ತಿಳಿಸಿದ್ದಾರೆ.

ಐದು ವರ್ಷಗಳಿಗೆ ಮೇಲ್ಪಟ್ಟು ನವೀಕರಣಕ್ಕಾಗಿ ಬಂದ ಸಂಘ-ಸಂಸ್ಥೆಗಳ ಅರ್ಜಿಗಳನ್ನು ಪರಿಗಣಿಸಲಾಗುವುದಿಲ್ಲ. ಎಲ್ಲಾ ದಾಖಲಾತಿಗಳನ್ನು ಮುದ್ದಾಂ ಸಹಕಾರ ಸಂಘಗಳ ಉಪ ನಿಬಂಧಕರು ಹಾಗೂ ಸಂಘ-ಸಂಸ್ಥೆಗಳ ಜಿಲ್ಲಾ ನೊಂದಣಾಧಿಕಾರಿಗಳು, ಬೀದರ ಈ ಕಚೇರಿಗೆ ಸಲ್ಲಿಸತಕ್ಕದ್ದು. ಇಲ್ಲದಿದ್ದರೆ ದಿನಾಂಕಃ31-12-2025 ರ ನಂತರ ಫೈಲಿಂಗ್ ಮಾಡಿಕೊಳ್ಳದೆ ಬಾಕಿ ಇರುವ 05 ವರ್ಷ ಮೇಲ್ಪಟ್ಟ ಸಂಘ-ಸಂಸ್ಥೆಗಳ ರದ್ದತಿ ಮಾಡಲಾಗುವುದು. ಹೆಚ್ಚಿನ ಮಾಹಿತಿಗಾಗಿ ಸಹಕಾರ ಸಂಘಗಳ ಉಪ ನಿಬಂಧಕರು ಹಾಗೂ ಸಂಘ-ಸಂಸ್ಥೆಗಳ ಜಿಲ್ಲಾ ನೊಂದಣಾಧಿಕಾರಿಗಳು, ಬೀದರ ಇವರಿಗೆ ಸಂಪರ್ಕಿಸಬಹುದಾಗಿದೆ ಎಂದು ತಿಳಿಸಿದ್ದಾರೆ.

## ಕುರಿ ಮೇಕೆ ಸಾಕಾಣಿಕೆ ತರಬೇತಿ: ಹೆಸರು ನೋಂದಾಯಿಸಿಕೊಳ್ಳಲು ಮನವಿ

ಮಲ್ಲಮ್ಮ ನುಡಿ ವಾರ್ತೆ

ಬೀದರ :ಮಾ.15: ಪಶುಪಾಲನಾ ಮತ್ತು ಪಶುವೈದ್ಯಕೀಯ ತರಬೇತಿ ಕೇಂದ್ರ ಬೀದರ ಕೇಂದ್ರ ಪಶುಪಾಲನಾ ಮತ್ತು ಪಶುವೈದ್ಯ ಸೇವಾ ಇಲಾಖೆ, ಉಪನಿರ್ದೇಶಕರ ಕಛೇರಿ ಆವರಣ, ಜಿಲ್ಲಾ ಕೇಂದ್ರ ಗ್ರಂಥಾಲಯ ಹಿಂಭಾಗ ಬೀದರದಲ್ಲಿ ಮಾರ್ಚ.18 ರಿಂದ 19 ರವರೆಗೆ ಕುರಿ ಮತ್ತು ಮೇಕೆ ಸಾಕಾಣಿಕೆ ತರಬೇತಿಯನ್ನು ಹಮ್ಮಿಕೊಳ್ಳಲಾಗಿದೆ ಎಂದು ಬೀದರ ಪಶು ಪಾಲನಾ ಮತ್ತು ಪಶು ವೈದ್ಯಕೀಯ ತರಬೇತಿ ಕೇಂದ್ರದ ಮುಖ್ಯ ಪಶು ವೈದ್ಯಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಆಸಕ್ತ ರೈತರು ದೂರವಾಣಿ ಸಂಖ್ಯೆ: 9902561957 ಗೆ ಕರೆ ಮಾಡಿ ಮುಂಚಿತವಾಗಿ ಹೆಸರು ನೋಂದಾಯಿಸಿಕೊಂಡು ಇದರ ಸದುಪಯೋಗವನ್ನು ಜಾನುವಾರು ಮಾಲೀಕರು ಪಡೆದುಕೊಳ್ಳಬೇಕು.. 30 ಜನ ರೈತರಿಗೆ ಮಾತ್ರ ತರಬೇತಿಗೆ ಅವಕಾಶವಿರುತ್ತದೆ ಎಂದು ಅವರು ತಿಳಿಸಿದ್ದಾರೆ.

# ಭಾರತ ಸಂವಿಧಾನವು ಜಗತ್ತಿನಲ್ಲಿಯೇ ಅತೀ ಶ್ರೇಷ್ಟವಾದ ಸಂವಿಧಾನವಾಗಿದ್ದು, ಪ್ರತಿಯೊಬ್ಬ ವಿದ್ಯಾರ್ಥಿಗಳು ಸಂವಿಧಾನವನ್ನು ತಿಳಿಯುವ ಕಾರ್ಯವಾಗಬೇಕು

ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ : ಮಾರ್ಚ್ 15– ಸಂವಿಧಾನದ 21 ಎ ವಿಧಿಯು 6 ರಿಂದ 14 ವರ್ಷದ ಮಕ್ಕಳಿಗೆ ಉಚಿತ ಹಾಗೂ ಕಡ್ಡಾಯ ಶಿಕ್ಷಣದ ಹಕ್ಕನ್ನು ಪ್ರತಿಯೊಬ್ಬ ವಿದ್ಯಾರ್ಥಿಯು ಬಳಸಿಕೊಳ್ಳಬೇಕು ಎಂದು ಗೌರವಾನ್ವಿತ ಸಿವಿಲ್ ನ್ಯಾಯಾಧೀಶರಾದ ಶ್ರೀ ಬಾಳಾ ಸಾಹೇಬ್ ವಡ್‌ವಡೆ ಅವರು ಹೇಳಿದರು.



ಯಾದಗಿರಿ ನಗರದ ಡಾ.ಬಿ.ಆರ್ ಅಂಬೇಡ್ಕರ್ ಭವನದಲ್ಲಿ ಇತ್ತೀಚಿನ ನಡೆದ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಕಾರ್ಮಿಕ ಇಲಾಖೆ, ಸಮಾಜ ಕಲ್ಯಾಣ ಇಲಾಖೆ, ಸಾರ್ವಜನಿಕ ಶಿಕ್ಷಣ ಇಲಾಖೆ, ಜಿಲ್ಲಾ ಬಾಲಕಾರ್ಮಿಕ ಯೋಜನಾ ಸೊಸೈಟಿ, ಹಾಗೂ ವಿವಿಧ ಇಲಾಖೆ ಮತ್ತು ಸ್ಥಳೀಯ ಸಂಘ ಸಂಸ್ಥೆಗಳ ಸಂಯುಕ್ತಾಶ್ರಯದಲ್ಲಿ 2024–25ನೇ ಸಾಲಿನ ಪರಿಶಿಷ್ಟ ಜಾತಿ ಉಪಯೋಜನೆ (ಎಸ್.ಸಿ.ಎಸ್.ಪಿ) ಹಾಗೂ ಗಿರಿಜನ ಉಪಯೋಜನೆ (ಟಿ.ಎಸ್.ಪಿ)ಯಡಿ "ಬಾಲ್ಯಾವಸ್ಥೆ ಹಾಗೂ ಕಿಶೋರಾವಸ್ಥೆ ಕಾರ್ಮಿಕ (ನಿಷೇಧ ಮತ್ತು ನಿಯಂತ್ರಣ) ಕಾಯ್ದೆ 1986, ತಿದ್ದುಪಡಿ ಕಾಯ್ದೆ 2016ರ" ಕಾನೂನು ಅರಿವು ನೆರವು ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಭಾರತ ಸಂವಿಧಾನವು ಜಗತ್ತಿನಲ್ಲಿಯೇ ಅತೀ ಶ್ರೇಷ್ಟವಾದ ಸಂವಿಧಾನವಾಗಿದ್ದು, ಪ್ರತಿಯೊಬ್ಬ ವಿದ್ಯಾರ್ಥಿಗಳು ಸಂವಿಧಾನವನ್ನು ತಿಳಿಯುವ ಕಾರ್ಯವಾಗಬೇಕು ಎಂದರು. ಹಾಗೂ ಸಂವಿಧಾನದ 21 ಎ ವಿಧಿಯು 6 ರಿಂದ 14 ವರ್ಷದ ಮಕ್ಕಳಿಗೆ ಉಚಿತ ಹಾಗೂ ಕಡ್ಡಾಯ ಶಿಕ್ಷಣದ ಹಕ್ಕನ್ನು ಪ್ರತಿಯೊಬ್ಬ ವಿದ್ಯಾರ್ಥಿಯು ಬಳಸಿಕೊಳ್ಳಬೇಕೆಂದು ತಿಳಿಸಿದರು. ನಂತರ ಮಾತನಾಡಿದ ಜಿಲ್ಲಾ ಕಾರ್ಮಿಕ ಅಧಿಕಾರಿಗಳಾದ ಶ್ರೀಹರಿ ಆರ್ ದೇಶಪಾಂಡೆ ರವರು ಬಾಲಕಾರ್ಮಿಕ ಹಾಗೂ ಕಿಶೋರಕಾರ್ಮಿಕ (ನಿಷೇಧ ಮತ್ತು ನಿಯಂತ್ರಣ) ಕಾಯ್ದೆ 1986 ಹಾಗೂ ತಿದ್ದುಪಡಿ 2016ರ ಕುರಿತು ಪ್ರತಿಯೊಬ್ಬರು ಕೂಡ ತಮ್ಮ ಪಾಲಕರಿಗೆ ತಿಳಿಸಬೇಕು ಹಾಗೂ ಪ್ರತಿಯೊಂದು ಮಗುವು ತನ್ನ ಹಕ್ಕುಗಳಿಂದ ವಂಚಿತನಾಗದಂತೆ ನೋಡಿಕೊಳ್ಳುವುದು ಪ್ರತಿಯೊಬ್ಬ ಪಾಲಕ, ಪೋಷಕರ ಜವಾಬ್ದಾರಿಯಾಗಿದೆ ಎಂದು ತಿಳಿಸಿದರು.

ಪರಿಶಿಷ್ಠ ಜಾತಿ ಮತ್ತು ಪರಿಶಿಷ್ಠ ಪಂಗಡ ದೌರ್ಜನ್ಯ ತಡೆ ಸಲಹಾ ಸಮಿತಿ ಸದಸ್ಯರಾದ ಶ್ರೀ ಮರೆಪ್ಪ ಚಟ್ಟೇರ್‌ಕರ್ ಅವರು ಮಾತನಾಡಿ, ಡಾ.ಬಿ.ಆರ್.ಅಂಬೇಡ್ಕರ್ ಅವರ ಬರೆದಂತಹ ಭಾರತ ಸಂವಿಧಾನವು ಜಗತ್ತಿನಲ್ಲಿಯೇ ಅತೀ ಶ್ರೇಷ್ಠವಾದ ಗ್ರಂಥವಾಗಿದ್ದು, ಸಂವಿಧಾನ ನಿರ್ಮಾತೃ ಡಾ.ಬಿ.ಆರ್. ಅಂಬೇಡ್ಕರ್ ಮತ್ತು ಸಾವಿತ್ರಿ ಬಾಯಿ ಪುಲೆರವರು ಎಲ್ಲಾ ವಿದ್ಯಾರ್ಥಿಗಳಿಗೆ ಮಾದರಿಯಾಗಬೇಕೆಂದು ತಿಳಿಸಿದರು.

ಜಿಲ್ಲಾ ಬಾಲಕಾರ್ಮಿಕ ಯೋಜನಾ ನಿರ್ದೇಶಕರಾದ ಶ್ರೀ ರಿಯಾಜ್ ಪಟೇಲ್ ವರ್ಕನಳ್ಳಿ ಅವರು ಮಾತನಾಡಿ, ಓದುವ ಮಕ್ಕಳನ್ನು ಶಾಲೆ ಬಿಡಿಸಿ ಕೆಲಸಕ್ಕೆ ಕಳುಹಿಸುವುದು ಮತ್ತು ಅಂತಹ ಮಕ್ಕಳನ್ನು ಕೆಲಸಕ್ಕೆ ನೇಮಿಸಿಕೊಳ್ಳುವುದು ಕಾನೂನು ಬಾಹಿರ ಕ್ರಮವಾಗಿದ್ದು, ಇದನ್ನು ಮೀರಿಯೂ ಸಹ ಮಕ್ಕಳನ್ನು ಕೆಲಸಕ್ಕೆ ಸೇರಿಸಿಕೊಂಡಲ್ಲಿ ಅಂತಹ ಅಂಗಡಿ ಮಾಲೀಕರ ವಿರುದ್ಧ 20,000 ರಿಂದ 50,000 ರೂ.ಗಳ ವರೆಗೆ ದಂಡ ವಿಧಿಸಲಾಗುವುದು ಮತ್ತು 6 ತಿಂಗಳಿಂದ 2 ವರ್ಷದವರೆಗೆ ಜೈಲು ಶಿಕ್ಷೆ ಗಳನ್ನು ಸಹ ವಿಧಿಸಲಾಗುವುದೆಂದು ಹಾಗೂ ಶಾಲೆಗೆ ಹೋಗುವ ಮಕ್ಕಳನ್ನು ಶಾಲೆ ಬಿಡಿಸಿ ಆಟೋ, ಟಂಟಂಗಳಲ್ಲಿ ಕೃಷಿ ಹಾಗೂ ಇನ್ನಿತರ ಕೃಷಿ ಚಟುವಟಿಕೆ ಕೆಲಸಕ್ಕೆ ಕರೆದುಕೊಂಡು ಹೋಗುವುದು ಕಂಡುಬಂದಲ್ಲಿ ಮಕ್ಕಳ ಸಹಾಯವಾಣಿ 1098 ಕ್ಕೆ ಪೋನ್ ಮಾಡಿ ತಿಳಿಸಿದರೆ ಅಂತಹ ಮಕ್ಕಳನ್ನು ರಕ್ಷಿಸಿ, ಸೂಕ್ತ ಕ್ರಮ ತೆಗೆದುಕೊಳ್ಳಲಾಗುವುದು ಎಂದು ತಿಳಿಸಿದರು.

ಉಪನ್ಯಾಸಕರು ಹಾಗೂ ಹಿರಿಯ ಸಾಹಿತಿಗಳಾದ ಶ್ರೀ ಗುರುಪ್ರಸಾದ ವೈದ್ಯ ಅವರು ಮಾತನಾಡಿ, "ಬಾಲ್ಯಾವಸ್ಥೆ ಹಾಗೂ ಕಿಶೋರಾವಸ್ಥೆ ಕಾರ್ಮಿಕ (ನಿಷೇಧ ಮತ್ತು ನಿಯಂತ್ರಣ) ಕಾಯ್ದೆ 1986, ತಿದ್ದುಪಡಿ ಕಾಯ್ದೆ 2016ರ" ಕುರಿತು ಉಪನ್ಯಾಸ ನೀಡಿದರು.

ಬಾಲ, ಕಿಶೋರ ಕಾರ್ಮಿಕ ಪದ್ಧತಿ ನಿಷೇಧದ ಕುರಿತು ಆಯೋಜಿಸಿದ್ದ ಚಿತ್ರಕಲೆ, ಪ್ರಭಂಧ, ಭಾಷಾಣ ಸ್ಪರ್ದೆಯಲ್ಲಿ ಪ್ರಥಮ, ದ್ವಿತಿಯ ಹಾಗೂ ತೃತೀಯ ಸ್ಥಾನ ಪಡೆದ ವಿದ್ಯಾರ್ಥಿ, ವಿದ್ಯಾರ್ಥಿನಿಯರಿಗೆ ಬಹುಮಾನಗಳನ್ನು ಸಹ ವಿತರಿಸಲಾಯಿತು.

ಈ ಸಂದರ್ಭದಲ್ಲಿ ಯಾದಗಿರಿ ಕಾರ್ಮಿಕ ನಿರೀಕ್ಷಕರಾದ ಸಂಗೀತಾ ಹೊನ್ನೂರು, ಸಿ.ಆರ್.ಪಿ ರವಿಚಂದ್ರ ನಾಯ್ಕಲ್, ಬಿ.ಆರ್.ಪಿ ವೆಂಕಟರೆಡ್ಡಿ, ಸರಕಾರಿ ಹಿರಿಯ ಪ್ರಾಥಮಿಕ ಶಾಲೆ ಡಾ.ಬಿ.ಆರ್ ಅಂಬೇಡ್ಕರ್ ನಗರದ ಎಸ್.ಡಿ.ಎಮ್.ಸಿ ಅಧ್ಯಕ್ಷರು ಶ್ರೀ ಅಂಬ್ರೇಶ್ ಚಟ್ಟೇರ್‌ಕರ್, ಸರಕಾರಿ ಹಿರಿಯ ಪ್ರಾಥಮಿಕ ಶಾಲೆ ಡಾ.ಬಿ.ಆರ್ ಅಂಬೇಡ್ಕರ್ ನಗರದ ಮುಖ್ಯ ಗುರುಗಳಾದ ಶ್ರೀಮತಿ ಸುಮತಿ ಪಾಪು, ಶಾಲೆಯ ಸಹ ಶಿಕ್ಷಕಿಯರಾದ ಶ್ರೀಮತಿ ವಿಜಯಲಕ್ಷ್ಮೀ, ಶ್ರೀಮತಿ ಶಶಿಕಲಾ, ಶ್ರೀಮತಿ ರೂಪಾ ಕೆ.ಎನ್, ಶ್ರೀಮತಿ ಮಂಜುಳಾ, ಶ್ರೀಮತಿ ಶೋಭಾದೇವಿ, ಅತಿಥಿ ಶಿಕ್ಷಕರಾದ ಮಹಿಪಾಲರೆಡ್ಡಿ, ಭೀಮರೆಡ್ಡಿ, ಭಾರತಿ, ಮಾರ್ಗದರ್ಶಿ ಸಂಸ್ಥೆಯ ಶ್ರೀಮತಿ ಆಶಾ ಬೇಗಂ, ಚನ್ನಮ್ಮ ಕಾರ್ಮಿಕ ಇಲಾಖೆಯ ಸಿಬ್ಬಂದಿಗಳಾದ ದೀಪಕ್ ಸಿಂಗ್, ಅಂಬ್ರೇಶ ಶೆಹರ್‌ವಾಲೆ, ವೆಂಕಟೇಶ ಶಿವಾಂಗೆ, ಬಾಲು ನಾಯಕ, ಅಮೃತ್ ರಾವ್ ಕೋತ್ವಾಲ್ ಉಪಸ್ಥಿತರಿದ್ದರು.

# ಸಂಘ, ಸಂಸ್ಥೆ ಫೈಲಿಂಗ ಕಡ್ಡಾಯವಾಗಿ ಸಲ್ಲಿಸಲು ಸೂಚನೆ

ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ : ಮಾರ್ಚ್ 15– ಯಾದಗಿರ ಜಿಲ್ಲೆಯಲ್ಲಿ ಕರ್ನಾಟಕ ಸಂಘಗಳ ನೊಂದಣೆ ಅಧಿನಿಯಮ 1960ರಡಿ ನೊಂದಣಿಯಾದ ಸಂಘಗಳು, ಕಲಂ13ರ ಪ್ರಕಾರ ಪ್ರತಿ ವರ್ಷ ಕಡ್ಡಾಯವಾಗಿ ಸಂಘದ ಆಡಳಿತ ಮಂಡಳಿಯ ಸದಸ್ಯರ ಹೆಸರು, ವಿಳಾಸ, ಲೆಕ್ಕ ಪರಿಶೋಧಿತ ಆದಾಯ ಮತ್ತು ವೆಚ್ಚದ ಹಾಗೂ ಆಯವ್ಯಯ ಪಟ್ಟಿಯನ್ನು ಪ್ರತಿ ವರ್ಷ ಸರ್ವ ಸಾಧಾರಣಾ ಸಭೆ ಜರುಗಿದ 14 ದಿನಗಳ ಒಳಗೆ ಜಿಲ್ಲಾ ಸಂಘಗಳ ನೊಂದಣಾಧಿಕಾರಿಗಳು ಹಾಗೂ ಸಹಕಾರ ಸಂಘಗಳ ಉಪನಿಬಂಧಕರು ಯಾದಗಿರ ಜಿಲ್ಲೆ ಯಾದಗಿರ ಇವರಲ್ಲಿ ದಾಖಲಾತಿಗಳನ್ನು ಫೈಲು ಮಾಡುವದು ಕಡ್ಡಾಯವಾಗಿರುತ್ತದೆ ಎಂದು ಯಾದಗಿರಿ ಸಹಕಾರ ಸಂಘಗಳ ಉಪನಿಬಂಧಕರು ಪವನಕುಮಾರ ಅವರು ತಿಳಿಸಿದ್ದಾರೆ. ಯಾದಗಿರಿ ಜಿಲ್ಲೆಯ ಕರ್ನಾಟಕ ಸಂಘಗಳ ನೊಂದಣಿ ಅಧಿನಿಯಮ ಅನ್ವಯ ಸಹಕಾರ ಸಂಘಗಳ ನಿಬಂಧಕರು ಕರ್ನಾಟಕ ರಾಜ್ಯ ಬೆಂಗಳೂರು ಅವರು ಸುತ್ತೋಲೆ ಸಂಖ್ಯೆ/ಆರ್.ಸಿ.ಎಸ್/ಸಂ.ಸಂ–1/63/2024–25 ದಿನಾಂಕ 14–03–2025ರ ಪ್ರಕಾರ ಕಳೆದ 05 ವರ್ಷಗಳ ಮೇಲ್ಪಟ್ಟು ಸಂಘ, ಸಂಸ್ಥೆಗಳು ದಾಖಲಾತಿಗಳೊಂದಿಗೆ ಫೈಲಿಂಗ ಮಾಡಲು 31 ಡಿಸೆಂಬರ 2025ರ ವರೆಗೆ ಕಾಲವಕಾಶ ನೀಡಿರುತ್ತಾರೆ. ಪ್ರಯುಕ್ತ ಕಳೆದ 05 ವರ್ಷಗಳ ಮೇಲ್ಪಟ್ಟು ನವೀಕರಣಗೊಳ್ಳದೆ, ಇರುವ ಸಂಘ, ಸಂಸ್ಥೆಗಳ ದಾಖಲಾತಿಗಳನ್ನು 31 ಡಿಸೆಂಬರ 2025ರ ಡಿಸೆಂಬರ್ 31ರ ಒಳಗೆ ಸಲ್ಲಿಸಬೇಕು, ತಪ್ಪಿದಲ್ಲಿ 5 ವರ್ಷಗಳ ಮೇಲ್ಪಟ್ಟ ಸಂಘ, ಸಂಸ್ಥೆಗಳ ನವೀಕರಣಕ್ಕೆ ಸಲ್ಲಿಸದೆ ಇರುವ ಸಂಘ, ಸಂಸ್ಥೆಗಳ ಸಂಖ್ಯೆಯನ್ನು ರದ್ದು ಮಾಡಲಾಗುವುದು ಎಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಕುಡಿಯುವ ನೀರಿನ ಸಮಸ್ಯೆ ಕುರಿತು ದಾಖಲಾಗುವ ದೂರುಗಳಿಗೆ ಕ್ರಮ ವಹಿಸಲು ಕಂಟ್ರೋಲ್ ರೂಮ್ ಪ್ರಾರಂಭ

ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ : ಮಾರ್ಚ್ 15– ಕುಡಿಯುವ ನೀರಿನ ಸಮಸ್ಯೆ ಕುರಿತು ದಾಖಲಾಗುವ ದೂರುಗಳಿಗೆ ಕ್ರಮ ವಹಿಸಲು ಕಂಟ್ರೋಲ್ ರೂಮ್ ಪ್ರಾರಂಭಿಸಿ, ಅದರ ನಿರ್ವಹಣೆಗೆ ನೋಡಲ್ ಅಧಿಕಾರಿ ಹಾಗೂ ಸಿಬ್ಬಂದಿಗಳನ್ನು ನಿಯೋಜಿಸಲಾಗಿದೆ ಎಂದು ಯಾದಗಿರಿ ಜಿಲ್ಲಾ ಪಂಚಾಯತ್ ಮುಖ್ಯಕಾರ್ಯನಿರ್ವಹಣಾಧಿಕಾರಿ ಶ್ರೀ ಲವೀಶ್ ಒರಡಿಯಾ ಅವರು ತಿಳಿಸಿದ್ದಾರೆ.

ಬೇಸಿಗೆ ಕಾಲ ಹಿನ್ನೆಲೆ ಗ್ರಾಮೀಣ ಪ್ರದೇಶಗಳಲ್ಲಿ ಕುಡಿಯುವ ನೀರಿನ ಸಮಸ್ಯೆಯಾಗದಂತೆ ಮತ್ತು ಸಮಸ್ಯಾತ್ಮಕ ಗ್ರಾಮಗಳಲ್ಲಿ ಕುಡಿಯುವ ನೀರಿನ ಸಮಸ್ಯೆಗಳನ್ನು ಪರಿಹರಿಸುವ ನಿಟ್ಟಿನಲ್ಲಿ ಮುಂದಿನ 3 ತಿಂಗಳುಗಳ ಕಾಲ ಸಹಾಯವಾಣಿ ಪ್ರಾರಂಭಿಸಿದೆ. ಅವಶ್ಯವಿರುವುದು ಕಂಡು ಬಂದಿರುವುದರಿಂದ ತಾಲೂಕುವಾರು ನೋಡಲ್ ಅಧಿಕಾರಿಗಳನ್ನು ಮತ್ತು ಸಿಬ್ಬಂದಿಗಳನ್ನು ನೇಮಿಸಲಾಗಿದೆ.

ಅನುಬಂಧ–1 ತಾಲೂಕುವಾರು ನೋಡಲ್ ಅಧಿಕಾರಿಗಳು ವಿವರ : ಯಾದಗಿರಿ ತಾಲೂಕ ಸಹಾಯಕ ನಿರ್ದೇಶಕರು (ಪಂ.ರಾಜ್) ಶ್ರೀ ಮೌಲಾಲಿ ಮೊ.ನಂ. 9535797806. ಗುರುಮಠಕಲ್ ತಾಲೂಕ ಪಂಚಾಯತ ಸಹಾಯಕ ನಿರ್ದೇಶಕರು (ಪಂ.ರಾಜ್) ಶ್ರೀ ಶರಣಪ್ಪ ಮೈಲಾರಿ ಮೊ.ನಂ.6360438486. ವಡಗೇರಾ ತಾಲೂಕ ಯೋಜನಾಧಿಕಾರಿಗಳು ಶ್ರೀ ರಾಘವೇಂದ್ರ ಮೊ.ನಂ. 9902424938. ಶಹಾಪೂರ ತಾಲೂಕ ಯೋಜನಾಧಿಕಾರಿಗಳು ಶ್ರೀ ಸುಬ್ಬರಾಯ ಚೌದ್ರಿ ಮೊ.ನಂ. 7676667910. ಸುರಪುರ ತಾಲೂಕ ಪಂಚಾಯತ ಸಹಾಯಕ ನಿರ್ದೇಶಕರು (ಪಂ.ರಾಜ್) ಮೊ.ನಂ. 9880028701. ಹುಣಸಗಿ ತಾಲೂಕ ಪಂಚಾಯತ ಸಹಾಯಕ ನಿರ್ದೇಶಕರು (ಪಂ.ರಾಜ್) ಶ್ರೀ ಮಲ್ಲಿಕಾರ್ಜುನ ಕೋರಿ ಮೊ.ನಂ.7899540765 ಸಂಪರ್ಕಿಸಬಹುದು.

ಅನುಬಂಧ–2 ತಾಲೂಕುವಾರು ಸಹಾಯವಾಣಿ ಸಬ್ಬಂದಿಗಳ ವಿವರ : ಯಾದಗಿರಿ ತಾಲೂಕ ಪಂಚಾಯತ ವಿಷಯ ನಿರ್ವಾಹಕರು ಹಾಗೂ ಕಾರ್ಯದರ್ಶಿ ಶ್ರೀ ಸಾಯಿಕುಮಾರ ಗ್ರೇಡ್–2 ಮೊ.ನಂ.7353135431. ಗುರುಮಠಕಲ್ ತಾಲೂಕ ಪಂಚಾಯತ ವಿಷಯ ನಿರ್ವಾಹಕರು ಹಾಗೂ ಕಾರ್ಯದರ್ಶಿ ಶ್ರೀ ಶಿವಶರಣಪ್ಪ ಗ್ರೇಡ್–2 ಮೊ.ನಂ.9916528358. ವಡಗೇರಾ ತಾಲೂಕ ಪಂಚಾಯತ ವಿಷಯ ನಿರ್ವಾಹಕರು ಹಾಗೂ ಕಾರ್ಯದರ್ಶಿ ಗ್ರೇಡ್–2 ಕುಮಾರಿ ಜ್ಞಾನದೇವಿ ಮೊ.ನಂ.8971326059, ಶಹಾಪೂರ ತಾಲೂಕ ಪಂಚಾಯತ್ ವಿಷಯ ನಿರ್ವಾಹಕರು ಹಾಗೂ ಪಿಡಿಓ ಶ್ರೀ ಈಶರಪ್ಪ ಮೊ.ನಂ.9731041470, ಸುರಪುರ ತಾಲೂಕ ಪಂಚಾಯತ ದ್ವಿತೀಯ ದರ್ಜೆ ಸಹಾಯಕ ಶ್ರೀ ವಿಜಯಕುಮಾರ ಜೋಶಿ ಮೊ.ನಂ.9663924936, ಹುಣಸಗಿ ತಾಲೂಕ ಪಂಚಾಯತ್ ವಿಷಯ ನಿರ್ವಾಹಕರು ಹಾಗೂ ಕಾರ್ಯದರ್ಶಿ ಗ್ರೇಡ್–2 ಶ್ರೀ ಪರಮಣ್ಣ ಎಸ್.ಹೂಗಾರ ಮೊ.ನಂ.9731093107ಗೆ ಸದರಿ ನಿಯುಕ್ತಿಗೊಳಿಸಲಾದ ಅಧಿಕಾರಿಗಳು ಮತ್ತು ಸಿಬ್ಬಂದಿಗಳು ತಮ್ಮ ದೂರವಾಣಿ ಸಂಖ್ಯೆಗಳನ್ನು ಚಾಲ್ತಿಯಲ್ಲಿರುವಂತೆ ನೋಡಿಕೊಳ್ಳಬೇಕು.

ಸಾರ್ವಜನಿಕರಿಂದ ಸ್ವೀಕೃತವಾಗುವ ಕರೆಗಳಿಗೆ ಸ್ಪಂದಿಸಿ ಸೂಕ್ತವಾದ ವರದಿ ನೀಡಬೇಕು, ಹಾಗೂ ದಾಖಲಾದ ದೂರುಗಳ ಮಾಹಿತಿಯನ್ನು ರೆಜಿಸ್ಟರ್‌ದಲ್ಲಿ ನಮೂದಿಸಿ ಸಂಬಂಧಪಟ್ಟವರಿಗೆ ದೂರವಾಣಿ ಮೂಲಕ ಕರೆ ಮಾಡಿ ಸಮಸ್ಯೆ ಸರಿಪಡಿಸುವಂತೆ ಸೂಚಿಸಿ, ಕೈಗೊಂಡ ಕ್ರಮದ ಬಗ್ಗೆ ಅನುಪಾಲನಾ ವರದಿಯನ್ನು ಈ ಕಾರ್ಯಾಲಯಕ್ಕೆ ಸಲ್ಲಿಸಬೇಕು, ತಪ್ಪಿದ್ದಲ್ಲಿ ಸೂಕ್ತ ಕ್ರಮ ಜರುಗಿಸಲಾಗುವುದು. ಯಾದಗಿರಿ ಜಿಲ್ಲಾ ಪಂಚಾಯತ್ ಸಹಾಯಕ ಕಾರ್ಯದರ್ಶಿ ಶ್ರೀ ಜಹೀರ್ ಉಲ್ ಹಸನ್ ಸಮ್ದಾನಿ ಮೊ.ನಂ.9916564444ಗೆ ಜಿಲ್ಲಾ ಮಟ್ಟದ ನೋಡಲ್ ಅಧಿಕಾರಿಯನ್ನಾಗಿ ನೇಮಿಸಿದ್ದು, ತಾಲೂಕುವಾರು ದಾಖಲಾಗುವ ದೂರುಗಳ ಪಟ್ಟಿ ಮತ್ತು ತೆಗೆದುಕೊಂಡ ಕ್ರಮಗಳ ಕುರಿತು ಕಾಲ ಕಾಲಕ್ಕೆ ವರದಿ ಸಲ್ಲಿಸಬೇಕು ಎಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಕುಣಿದು ಕೊಪ್ಪಳಿಸಿದ ಯುವಕ– ಯುವತಿಯರು ವಿವಿಧಡೆ ಗಮನ ಸೆಳೆದ ಅಣುಕು

# ಶವ ಯಾತ್ರೆ ತಾಳಿಕೋಟೆಯಲ್ಲಿ ಬಣ್ಣದೋಕುಳಿ ಸಂಭ್ರಮ



ಮಲ್ಲಮ್ಮ ನುಡಿ ವಾರ್ತೆ

ತಾಳಿಕೋಟೆ: ಪಟ್ಟಣದಲ್ಲಿ ಎಲ್ಲಿ ನೋಡಿದರೂ ಬಣ್ಣ ಹಚ್ಚಿಕೊಂಡು ಹೋಳಿ ಹುಣ್ಣಿಮೆ ಸಂಭ್ರಮ ಆಚರಣೆಯಲ್ಲಿ ತೊಡಗಿರುವ ಜನ, ಯುವಕ ಯುವತಿಯರ ದಂಡು ಬಣ್ಣ ಹಚ್ಚಿಕೊಂಡು ಸಂಭ್ರಮಾಚರಣೆ ಮಾಡುವ ದೃಶ್ಯ ಒಂದು ಕಡೆಯಾದರೆ ಯುವಕರ ತಂಡ ನಾನಾ ವೇಷಗಳನ್ನು ಧರಿಸಿ ಬಣ್ಣ ಎರಚ್ಚುತ್ತಾ ಹಲಗೆ ಬಾರಿಸುತ್ತ ಕುಣಿದು ಕುಪ್ಪಳಿಸಿದರು. ಕಳೆದ ವರ್ಷಕ್ಕಿಂತಲೂ ಈ ಬಾರಿ ಪಟ್ಟಣ ಹಾಗೂ ತಾಲೂಕಿನಾಧ್ಯಂತ ಸಂಭ್ರಮದಿಂದ ಹೋಳಿ ಹಬ್ಬ ಆಚರಿಸುತ್ತಿರುವುದು ಕಂಡು ಬಂತು, ಪ್ರತಿಯೊಬ್ಬರ ಕೈಯಲ್ಲೂ ನೋಡುಗರ ಕಣ್ಣು ತಂಪಾಗಿಸುವಷ್ಟು ಸುಂದರ ಬಣ್ಣಗಳು, ಯುವಕ–ಯುವತಿಯರ ಹಾಡು ಕುಣಿತ ನೋಡುಗರ ಕಣ್ಣು ಸಾಲದು, ಇದು ತಾಳಿಕೋಟಿ ಪಟ್ಟಣದ ಗಲ್ಲಿ ಗಲ್ಲಿಗಳಲ್ಲಿ ಕಂಡುಬಂದ ದೃಶ್ಯ. ಅಣ–ಕು ಶವಯಾತ್ರೆ: ಯುವಕರು ಹೋಳಿ ಹಬ್ಬವನ್ನು ಅತ್ಯಂತ ವಿಶೇಷವಾಗಿ ಸಂಭ್ರಮಿಸಲೆಂದೇ ಪಕ್ಕಾ ಯೋಜನೆ ರೂಪಿಸಿದಂತೆ ಕಾಣುತ್ತಿತ್ತು, ಯುವಕನಿಗೆ ಮುದುಕನ ವೇಷ ಹಾಕಿ ಕೊಡುಗೆ ಸಾರಾಯಿ ಖಾಲಿ ಪ್ಯಾಕೆಟ್ಗಳು, ಕಣ್ಣಿಗೆ ಕೂಲಿಂಗ್ ಗ್ಲಾಸ್ ಹಾಕಿಕೊಂಡು ನಾಲ್ಕು ಜನ ಹೆಗಲ ಮೇಲೆ ಚಟ್ಟನ್ನು ಹೊತ್ತಿ ಮುಂದೆ ಹೆಣ್ಣು ವಿಷಯ ಹಾಕಿಕೊಂಡು ಅಳುತ್ತ ಕುಣಿದಾಡುತ್ತ ಓಣಿಗಳಲ್ಲಿ ಮೆರವಣಿಗೆ ಮೂಲಕ ಅಣಕು ಶವಯಾತ್ರೆ ನಡೆಸಿ ಕುಣಿದು ಕೊಪ್ಪಳಿಸಿದರು ಯುವಕರ ಅಳು ನೋಡುಗರನ್ನು ನಗೆಗಡಲಲ್ಲಿ ತೇಲಾಡಿಸಿತು. ಬಣ್ಣದ ಸಂಭ್ರಮ: ಪಟ್ಟಣದ ವಿವಿಧ ಬಡಾವಣೆಗಳಲ್ಲಿ ಹೋಳಿ ಹಬ್ಬದ ಬಣ್ಣದ ಸಡಗರ ಮನೆ ಮಾಡಿತ್ತು, ಯುವಕ ಯುವತಿಯರು ದೊಡ್ಡ ಸಂಖ್ಯೆಯಲ್ಲಿ ಅತ್ಯಂತ ಶಾಂತಿಯುತವಾಗಿ ಬಣ್ಣ ಆಡುತ್ತಿರುವುದು ಕಂಡು ಬಂತು. ಬಣ್ಣಕ್ಕೆ ಯಾವುದೇ ಭೇದ ಇಲ್ಲ ಎನ್ನುವುದು ಸಂಭ್ರಮವೇ ಸಾರಿ ಹೇಳಿತ್ತು. ಟ್ರ್ಯಾಕ್ಟರ್ ಬಣ್ಣ: ಪಟ್ಟಣದಲ್ಲಿ ಕೆಲವು ತಂಡಗಳು ಟ್ರ್ಯಾಕ್ಟರ್ ಮೂಲಕ ಆಡಿದ ಬಣ್ಣದಾಟ ಎಲ್ಲರನ್ನು ಕಣ್ತುಂಬುವಂತೆ ಮಾಡಿತ್ತು, ಯುವಕರು ಟ್ರ್ಯಾಕ್ಟರ್ ಗಳಲ್ಲಿ ಹತ್ತಾರು ಬಣ್ಣದ ನೀರಿನ ಬ್ಯಾರಲ್ ಗಳನ್ನು ಇಟ್ಟುಕೊಂಡು ಪರಸ್ಪರ ಎದುರುಬದುರಾಗಿ ಬಣ್ಣ ಎರಚುವ ದೃಶ್ಯಗಳು ಎಲ್ಲರ ಮನ ತಣಿಸುವಂತಿತ್ತು, ಬಣ್ಣ ಹಾಕುವಾಗ ಯಾರಿಗೂ ನೋವಾಗದಂತೆ ಸ್ವಸಂತೋಷದಿಂದ ಬಣ್ಣ ಹಾಕುವುದು ಎಲ್ಲರ ಪ್ರೀತಿಗೂ ಪಾತ್ರವಾಯಿತು, ಸುಮಾರು ನಾಲ್ಕು ಗಂಟೆಗಳ ಸಮಯ ರಂಗಿನಾಟಕ್ಕೆ ಸರ್ವ ಜನರು ಸಾಕ್ಷಿಯಾಗಿ ಖುಷಿ ವಿನಿಮಯ ಮಾಡಿಕೊಂಡರು. ಪೊಲೀಸರು ಅಲ್ಲಲ್ಲಿ ಬೀಡು ಬಿಟ್ಟು ಪರಿಸ್ಥಿತಿ ಕೈಮಿರದಂತೆ ನೋಡಿಕೊಂಡರು. ಒಟ್ಟಾರೆ ಎರಡು ದಿನಗಳ ಈ ಬಣ್ಣ ಆಟದಲ್ಲಿ ಮೊದಲು ದಿನ ಅಷ್ಟೊಂದು ಕಳೆ ಇಲ್ಲದಿದ್ದರೂ ಎರಡನೇ ದಿನವಾದ ಶನಿವಾರ ಎಲ್ಲೆಡೆ ಸಂಭ್ರಮದ ವಾತಾವರಣ ಕಂಡುಬಂದಿತು.

# ನೇರ ಸಂದರ್ಶನಕ್ಕೆ ಆಹ್ವಾನ

ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ : ಮಾರ್ಚ್ 15–ಯಾದಗಿರಿ ಜಿಲ್ಲಾ ಉದ್ಯೋಗ ವಿನಿಮಯ ಕಛೇರಿವತಿಯಿಂದ 2025ರ ಮಾರ್ಚ್ 18ರ ಮಂಗಳವಾರ ರಂದು ಬೆಳಿಗ್ಗೆ 10.30 ರಿಂದ ಮಧ್ಯಾಹ್ನ 2 ಗಂಟೆಯ ವರೆಗೆ ನೇರ ಸಂದರ್ಶನ ಆಯೋಜಸಲಾಗಿದೆ ಎಂದು ಉದ್ಯೋಗಾಧಿಕಾರಿ ಬಸವರಾಜ ಅವರು ತಿಳಿಸಿದ್ದಾರೆ. ಜಿ4ಎಸ್ ಸೆಕ್ಯೂರಿಟಿ ಸೋಲುಷನ್ಸ್ ಪ್ರೈ.ಲಿ (ಅ) ಸೆಕ್ಯೂರಿಟಿ ಗಾರ್ಡ್ 15 ಹುದ್ದೆಗಳು ಖಾಲಿ ಇದ್ದು, ಅರ್ಹತೆ 10ನೇ ಪಾಸ್.ಜೆ.ಪವರ ಇಂಡಿಯಾ ಲಿ.ಶಹಾಬಾದ್, ಓರಿಯಂಟ್ ಸಿಮೆಂಟ್ ಲಿ.ಚಿತ್ತಾಪೂರು ಉದ್ಯೋಗ ಸ್ಥಳವಾಗಿದೆ, ಪುರುಷ ಅಭ್ಯರ್ಥಿಗಳು ಮಾತ್ರ ಭಾಗಹಿಸಬಹುದಾಗಿದೆ. 22 ರಿಂದ 35 ವರ್ಷ (ಅನುಭವ ಇರುವವರಿಗೆ 45 ವರ್ಷ) ಒಳಗಿರಬೇಕು. (ಆ) ಸೆಕ್ಯೂರಿಟಿ ಸೂಪರ್‌ವೈಜರ್ 02 ಹುದ್ದೆಗಳು ಖಾಲಿ ಇದ್ದು, ಅರ್ಹತೆ 12ನೇ ಪಾಸ್, ಶಹಾಬಾದ್, ಚಿತ್ತಾಪೂರು ಉದ್ಯೋಗ ಸ್ಥಳವಾಗಿದೆ. 30 ರಿಂದ 45 ವರ್ಷ ಒಳಗಿರಬೇಕು, (5 ವರ್ಷ ಅನುಭವ ಕಡ್ಡಾಯ) ಪುರುಷ ಅಭ್ಯರ್ಥಿಗಳು ಮಾತ್ರ ಭಾಗಹಿಸಬೇಕು. ಶಹಾಬಾದ, ಚಿತ್ತಾಪೂರು ಕಂಪನಿಯಿಂದ 50 ಕಿ.ಮೀ. ಅಂತರವಿರುವ ಅಭ್ಯರ್ಥಿಗಳನ್ನು ಉದ್ಯೋಗ–ಕ್ಕೆ ಆಯ್ಕೆ ಮಾಡಲಾಗುತ್ತದೆ. ಇ.ಎಸ್.ಐ.ಪಿ.ಎಫ್.ಬೋನಸ್, ಗ್ರಾಚ್ಯಟಿ, ಇನ್ಸುರೆನ್ಸ್, ಸೌಲಭ್ಯವಿರುತ್ತದೆ. ಸೇವ್ ಮೈಕ್ರೋಫೈನಾನ್ಸ್ ಪ್ರೈ.ಲಿ. (ಅ) ಫೀಲ್ಡ್ ಆಫಿಸರ್ 30 ಹುದ್ದೆಗಳು ಖಾಲಿ ಇದ್ದು, ಅರ್ಹತೆ 10ನೇ, ಪಿಯುಸಿ, ಐಟಿಐ, ಡಿಪ್ಲೋಮ, ಯಾವುದೇ ಪದವಿ ವಿದ್ಯಾರ್ಹತೆ ಹೊಂದಿರಬೇಕು. ಶಹಾಪೂರು, ಸುರಪುರ, ಸೇಡಂ, ಲಿಂಗಸೂಗುರು, ಕಲಬುರಗಿ ಉದ್ಯೋಗ ಸ್ಥಳವಾಗಿದೆ. 18 ರಿಂದ 32 ವರ್ಷ ಒಳಗಿರಬೇಕು. ಪುರುಷ ಅಭ್ಯರ್ಥಿಗಳು ಭಾಗವಹಿಸಬಹುದಾಗಿದೆ.

ಬ್ರಾಂಚ್ ಮ್ಯಾನೇಜರ್ 03 ಹುದ್ದೆಗಳು ಖಾಲಿ ಇದ್ದು ಹುದ್ದೆಗೆ ಅರ್ಹತೆ ಪಿಯುಸಿ, ಯಾವುದೇ ಪದವಿ, ಸುರಪುರ, ಸಿರಗುಪ್ಪ, ರಾಯಚೂರು ಉದ್ಯೋಗ ಸ್ಥಳವಾಗಿದೆ. 21 ರಿಂದ 35 ವರ್ಷ ಒಳಗಿರಬೇಕು, (ಬ್ರಾಂಚ್ ಮ್ಯಾನೇಜರ್ 1 ವರ್ಷ ಅನುಭವ ಕಡ್ಡಾಯ) ಪುರುಷ ಅಭ್ಯರ್ಥಿಗಳು ಮಾತ್ರ ಭಾಗವಹಿಸಬೇಕು, ಬೈಕ್ ಮತ್ತು ಡಿ.ಎಲ್.ಕಡ್ಡಾಯವಾಗಿದೆ, ನಿರುದ್ಯೋಗಿ ಅಭ್ಯರ್ಥಿಗಳು ನೇರ ಸಂದರ್ಶನಕ್ಕೆ ಹಾಜರಾಗಲು ತಿಳಿಸಲಾಗಿದೆ. ಈ ನೇರ ಸಂದರ್ಶನಕ್ಕೆ ಬರುವ ಅಭ್ಯರ್ಥಿಗಳು ತಮ್ಮ ದಾಖಲಾತಿಗಳೊಂದಿಗೆ ವ್ಯಕ್ತಿ ಪರಿಚಯ ರಿಸ್ಯೂಮ್, ಬಯೋಡಾಟಾದೊಂದಿಗೆ ನೇರ ಸಂದರ್ಶನಕ್ಕೆ ಹಾಜರಾಗಲು ತಿಳಿಸಲಾಗಿದೆ. ಹಾಗೂ ನೇರ ಸಂದರ್ಶನಕ್ಕೆ ಹಾಜರಾದ ಅಭ್ಯರ್ಥಿಗಳಿಗೆ ಯಾವುದೇ ತರಹದ ಭತ್ಯೆ ನೀಡಲಾಗುವುದಿಲ್ಲ. ನೇರ ಸಂದರ್ಶನ ನಡೆಯುವ ಸ್ಥಳ ಹೆಚ್ಚಿನ ಮಾಹಿತಿಗಾಗಿ ಚಿತ್ತಾಪೂರು ರೋಡ್ (ಮಿನಿ ವಿಧಾನ ಸೌಧ) ಜಿಲ್ಲಾಡಳಿತ ಭವನ, ಜಿಲ್ಲಾ ಉದ್ಯೋಗ ವಿನಿಮಯ ಕೇಂದ್ರ ಬಿ–ಬ್ಲಾಕ್ ರೂ.ನಂ.ಬಿ1, ಬಿ2 2ನೇ ಮಹಡಿ ಯಾದಗಿರಿ ದೂ.ಸಂ.08473253718 ಮೊ.ನಂ.9448566765ಗೆ ಕಛೇರಿಯ ಸಮಯದಲ್ಲಿ ಸಂಪರ್ಕಿಸಬಹುದು ಎಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಮಣ್ಣಿನ ಸ್ನಾನ (ಮಡ್ ಬಾತ್) ದಿವ್ಯ ಔಷಧ: ಚಿಟಮೆ



ಮಲ್ಲಮ್ಮ ನುಡಿ ವಾರ್ತೆ

ಔರಾದ್ : ಚರ್ಮ ಮತ್ತು ದೇಹ ನಿರ್ವಿಷಗೊಳಿಸುವಿಕೆ, ಕೀಲು ನೋವು ನಿವಾರಣೆ ಸೇರಿದಂತೆ ಅನೇಕ ರೋಗಗಳಿಗೆ ಮಣ್ಣಿನ ಸ್ನಾನ (ಮಡ್ ಬಾತ್) ದಿವ್ಯ ಔಷಧವಾಗಿದೆ ಎಂದು ಹಿರಿಯ ಸಾಹಿತಿ ನಾಗನಾಥ ಚಿಟಮೆ ಹೇಳಿದರು.

ತಾಲೂಕಿನ ಯನಗುಂದಾ ಗ್ರಾಮದ ನಾಟಿವೈದ್ಯ ಬಸವರಾಜ ಘುಳೆ ಅವರ ಜಮೀನಿನಲ್ಲಿ ಹೋಳಿ ನಿಮಿತ್ತ ಆಯೋಜಿಸಿದ ಮಡ್ ಬಾತ್ ಮಹತ್ವ ಕುರಿತು ಮಾತನಾಡಿದರು. ನಮ್ಮ ಪೂರ್ವಜರು ಇಂತಹ ಅನೇಕ ನೈಸರ್ಗಿಕ ವಿಧಾನಗಳಿಂದಲೇ ಹಬ್ಬಗಳು ಆಚರಿಸುತ್ತಿದ್ದರು. ಇಂದು ಅನೇಕರು ಮಡ್ ಬಾತ್‌ನಂತಹ ನೈಸರ್ಗಿಕ ಚಿಕಿತ್ಸೆ ಪಡೆಯುತ್ತಿರುವುದು ಸಾಮಾನ್ಯವಾಗಿದೆ. ರಾಸಾಯನಿಕ ವಸ್ತುಗಳು ಬಳಸದೇ ಇಂತಹುದಕ್ಕೆ ನಾವು ಮೊತೆ ಹೋಗಬೇಕು ಎಂದರು. ಶರಣ ಸಾಹಿತ್ಯ ಪರಿಷತ್ ಅಧ್ಯಕ್ಷ ಚಂದ್ರಕಾಂತ ನಿರ್ಮಳೆ ಮಾತನಾಡಿ, ಪ್ರತಿ ಹಬ್ಬಗಳಿಗೂ ನಿರ್ದಿಷ್ಟ ಉದ್ದೇಶವಿದ್ದು, ಹೋಳಿಯು ಸಹ ನಮ್ಮಲ್ಲಿನ ಕೆಟ್ಟಗುಣಗಳಿಗೆ ಸುಡುವುದಾಗಿದೆ ಎಂದರು. ತಾಪಂ ಸಹಾಯಕ ನಿರ್ದೇಶಕ ಶಿವಕುಮಾರ್ ಘಾಟೆ ಮಡ್ ಬಾತ್ ಆಯೋಜನೆ ಕುರಿತು ಮೆಚ್ಚುಗೆ ವ್ಯಕ್ತಪಡಿಸಿದರು.

ಯನಗುಂದಾ ಪ್ರೌಢಶಾಲಾ ದೈಹಿಕ ಶಿಕ್ಷಣ ಶಿಕ್ಷಕ ಮಲ್ಲಿಕಾರ್ಜುನ ಟಂಕಸಾಲೆ ಮಡ್ ಬಾತ್ ಸಂಯೋಜಿಸಿದರು. ಹಿರಿಯರಾದ ಶಿವರಾಜ ಶಟಕಾರ್, ಕಸಾಪ ಅಧ್ಯಕ್ಷ ಬಿಎಂ ಅಮರವಾಡಿ ಶರಣಪ್ಪ ನಾಗಲಗಿದ್ದಿ, ಶಾಲಿವಾನ ಉದಗಿರೆ, ಗುರುರಾಜ ಯಾದವ್, ಗಜಾನನ ಮಳ್ಳಾ, ವಿರೇಶ ಅಲಮಾಜೆ, ಬಾಲರಾಜ ಎಂಡೆ, ಅಂಬಾದಾಸ ನಳಗೆ, ಭೀಮಾಶಂಕರ ಜಿರ್ಗೆ, ಅನೀಲ ಮೇತ್ರೆ, ಶಿವಕುಮಾರ ಮಜಗೆ, ನಿಲೇಶ, ಸೇರಿದಂತೆ ಇನ್ನಿತರರಿದ್ದರು.

# ಯಾದಗಿರಿ:19 ರಂದು ಆಂಜನೇಯದೇವರ ಜಾತ್ರೆ

ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ,ಮಾ.15:ಗುರುಮಠಕಲ್ ತಾಲೂಕಿನ ಯಲ್ಹೇರಿ ಗ್ರಾಮದ ಆಶಾಪುರ ನಗರದಲ್ಲಿ ಮಾ. 16 ರಂದು ಆಂಜನೇಯ ದೇವಸ್ಥಾನದಲ್ಲಿ ಬೆಳ್ಳಿಯ ಮೂರ್ತಿ ಪ್ರತಿಷ್ಠಾಪನೆ,19ರಂದು ಆಂಜನೇಯ ಜಾತ್ರಾಮಹೋತ್ಸವವು ನೆರವೇರುವದು.

# ಈಜು ಸ್ಪರ್ಧೆಗೆ ಆಯ್ಕೆ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಮಾ.15–ಇದೇಮಾ.17 ರಿಂದ 23 ರ ವರೆಗೆ ಸ್ಪೇನ್ ದೇಶದ ಬಾರ್ಸಿಲೋನಾದಲ್ಲಿ ನಡೆಯುವ ಪ್ಯಾರಾ ಈಜು ವರ್ಲ್ಡ್ ಸೀರಿಸ್ ಈಜು ಸ್ಪರ್ಧೆಗೆ ಬಳ್ಳಾರಿಯ ಗೋಪಿಚಂದ್ ಮತ್ತು ಸಾಯಿನಿಖಿಲ್ ಅವರು ಆಯ್ಕೆಯಾಗಿದ್ದಾರೆ.

ಗೋಪಿಚಂದ್ ಅವರು ಈಗಾಗಲೇ 2022 ರಲ್ಲಿ ಏಷಿಯನ್ ಪ್ಯಾರಾ ಸ್ವಿಮ್ಮಿಂಗ್‌ನಲ್ಲಿ 6 ಮತ್ತು 7 ಸ್ಥಾನ ಪಡೆದಿದ್ದರು. 2017 ರಿಂದ 2024 ರ ವರೆಗೆ ರಾಜ್ಯ, ರಾಷ್ಟ್ರೀಯ ಮತ್ತು ಅಂತರಾಷ್ಟ್ರೀಯ ಈಜು ಸ್ಪರ್ಧೆಗಳಲ್ಲಿ ಭಾಗವಹಿಸಿ ಒಟ್ಟು 36 ಚಿನ್ನ, 12 ಬೆಳ್ಳಿ ಪದಕ ಪಡೆದಿದ್ದಾರೆ.

ಸಾಯಿನಿಖಿಲ್ ಅವರು ಸಹ 2015 ರಿಂದ 2024 ರ ವರೆಗೆ ರಾಜ್ಯ, ರಾಷ್ಟ್ರೀಯ ಮತ್ತು ಅಂತರಾಷ್ಟ್ರೀಯ ಈಜು ಸ್ಪರ್ಧೆಗಳಲ್ಲಿ ಭಾಗವಹಿಸಿ ಒಟ್ಟು 16 ಚಿನ್ನ, 18 ಬೆಳ್ಳಿ ಮತ್ತು 2 ಕಂಚು ಪದಕ ಗಳಿಸಿದ್ದಾರೆ.

ಪ್ಯಾರಾ ಕಮಿಟಿ ಇಂಡಿಂ–ಯಾ ಅವರು ಈ ಇಬ್ಬರು ಸ್ಪರ್ಧಾಳುಗಳನ್ನು ಆಯ್ಕೆ ಮಾಡಿದ್ದಾರೆ ಎಂದು ತರಬೇತುದಾರರಾದ ರಜನಿಲಕ್ಕ ಮತ್ತು ಶರತ್ ಗಾಯಕ್‌ವಾಡ್ ಅವರು ತಿಳಿಸಿದ್ದಾರೆ.

ಬಳ್ಳಾರಿ ನಗರ ಶಾಸಕ ನಾರಾ ಭರತ್ ರೆಡ್ಡಿ, ಜಿಲ್ಲಾಧಿಕಾರಿ ಪ್ರಶಾಂತ್ ಕುಮಾರ್ ಮಿಶ್ರಾ, ಎಸ್‌ಪಿ ಡಾ.ಶೋಭಾರಾಣಿ ವಿ.ಜೆ., ಜಿಪಂ ಸಿಇಒ ಮಹಮ್ಮದ್ ಹ್ಯಾರೀಸ್ ಸುಮೈರ್, ಎಡಿಸಿ ಮಹಮ್ಮದ್ ಝುಬೇರ್, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಸಹಾಯಕ ನಿರ್ದೇಶಕರಾದ ಕೆ.ಗ್ರೇಸಿ ಸೇರಿದಂತೆ ಇತರರು ಅಭಿನಂದಿಸಿದ್ದಾರೆ.

# ಹೆಣ್ಣು ಮಗುವಿಗೆ ಶಿಕ್ಷಣ ಒದಗಿಸಬೇಕು: ವಿಜಯ್ ಕುಮಾರ್



ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಮಾ.15–ಸಮಾಜದಲ್ಲಿ ಹೆಣ್ಣಿನ ಪಾತ್ರ ಬಹಳ ಮುಖ್ಯವಾಗಿದ್ದು, ಪ್ರತಿ ಹೆಣ್ಣು ಮಗುವಿಗೆ ಶಿಕ್ಷಣ ಒದಗಿಸಬೇಕು ಎಂದು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪನಿರ್ದೇಶಕ ಕೆ.ಹೆಚ್.ವಿಜಯ್ ಕುಮಾರ್ ಅವರು ಹೇಳಿದರು.

ಬೇಟಿ ಬಚಾವೋ ಬೇಟಿ ಪಡಾವೋ ಯೋಜನೆಯು 10 ವರ್ಷ ಪೂರೈಸಿದ ಹಿನ್ನಲೆಯಲ್ಲಿ ಸಮಾರೋಪ ಸಮಾರಂಭ ಹಾಗೂ ಅಂತರಾಷ್ಟ್ರೀಯ ಮಹಿಳಾ ದಿನಾಚರಣೆ ಅಂಗವಾಗಿ ಮಹಿಳೆಯರ ಮತ್ತು ಮಕ್ಕಳ ಸುರಕ್ಷತೆ, ಭದ್ರತೆ ಮತ್ತು ಸಬಲೀಕರಣಕ್ಕಾಗಿ ಜಾಗೃತಿ ಮೂಡಿಸಲು ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಇವರ ಸಂಯುಕ್ತಾಶ್ರಯದಲ್ಲಿ ನೂತನ ಜಿಲ್ಲಾಡಳಿತ ಭವನದ ಆವರಣದಲ್ಲಿ ಶನಿವಾರ ಹಮ್ಮಿಕೊಂಡಿದ್ದ ಬೈಕ್ ರ್‍ಯಾಲಿಗೆ ಚಾಲನೆ ನೀಡಿ ಅವರು ಮಾತನಾಡಿದರು.

ಪ್ರಧಾನ ಮಂತ್ರಿಯುವರ ಮಹತ್ವಾಕಾಂಕ್ಷೆಯ 'ಬೇಟಿ ಬಚಾವೋ–ಬೇಟಿ ಪಡಾವೋ' ಯೋಜನೆಯು 10 ವರ್ಷ ಪೂರೈಸಿದ್ದು, ಹೆಣ್ಣುಮಕ್ಕಳ ಮೇಲಿನ ತಾರತಮ್ಯ ತೊಡೆದುಹಾಕುವುದು. ಅದರ ಬಗ್ಗೆ ಜನರಲ್ಲಿರುವ ನಕಾರಾತ್ಮಕ ಮನೋಭಾವ ಬದಲಾಯಿಸುವುದು. ಹೆಚ್ಚಾಗಿ ನಡೆಯುತ್ತಿರುವ ಬಾಲ್ಯ ವಿವಾಹವನ್ನು ತಡೆಗಟ್ಟಿ ಹೆಣ್ಣು ಮಕ್ಕಳನ್ನು ರಕ್ಷಿಸುವುದು ಈ ಯೋಜನೆಯ ಉದ್ದೇಶವಾಗಿದೆ ಎಂದು ತಿಳಿಸಿದರು.

ಹೆಣ್ಣು ಭ್ರೂಣ ಹತ್ಯೆಯು ಕಾನೂನು ಅಪರಾಧವಾಗಿದೆ. ಹೆಣ್ಣು ಸಮಾಜದ ಕಣ್ಣಾಗಿದ್ದಾಳೆ. ಹೆಣ್ಣು ಮಕ್ಕಳ ಶಿಕ್ಷಣವನ್ನು ಪ್ರೋತ್ಸಾಹಿಸಲು ಹಲವಾರು ಯೋಜನೆಗಳನ್ನು ಜಾರಿಗೊಳಿಸಿದ್ದು, ಅವರಿಗೆ ಸೌಲಭ್ಯ ಒದಗಿಸಬೇಕು ಎಂದು ತಿಳಿಸಿದರು.

ಹೆಣ್ಣುಮಕ್ಕಳಿಗೆ ಸಮಾಜದಲ್ಲಿ ಯಾವುದೇ ತಾರತಮ್ಯವಿಲ್ಲದೆ ಬದುಕುವ ಮತ್ತು ಶಿಕ್ಷಣ ಪಡೆಯುವ ಹಕ್ಕಿದೆ. ಪ್ರತಿಯೊಬ್ಬ ಹೆಣ್ಣುಮಗುವು ಶಾಲೆಯಿಂದ ಹೊರಗುಳಿಯದೇ ಶಿಕ್ಷಣ ಪಡೆಯಬೇಕು. ಕ್ಷೀಣಿಸುತ್ತಿರುವ ಹೆಣ್ಣುಮಕ್ಕಳ ಲಿಂಗಾನುಪಾತವನ್ನು ಸುಧಾರಿಸಲು ಜನರಲ್ಲಿ ಜಾಗೃತಿ ಮೂಡಿಸುವ ಕಾರ್ಯವಾಗಬೇಕು ಎಂದು ಅವರು ಹೇಳಿದರು.

ಈ ಸಂದರ್ಭದಲ್ಲಿ ಜಿಲ್ಲಾ

# ಕನ್ನಡ ನಾಮಫಲಕ ಅಳವಡಿಸಲು ಅರವಿಂದ ಜೋಗಿರೆ ಆಗ್ರಹ

ಮಲ್ಲಮ್ಮ ನುಡಿ ವಾರ್ತೆ

ಹುಮನಾಬಾದ:ಮಾ.15–ಎಲ್ಲ ಮಳಿಗೆಗಳ ಮೇಲೆ ಕಡ್ಡಾಯವಾಗಿ ಕನ್ನಡ ನಾಮಫಲಕ ಅಳವಡಿಸುವಂತೆ ಸೂಚನೆ ನೀಡಬೇಕೆಂದು ಕಲ್ಯಾಣ ಕರ್ನಾಟಕ ವಿದ್ಯಾರ್ಥಿ ವೇದಿಕೆ ತಾಲ್ಲೂಕಾಧ್ಯಕ್ಷ ಅರವಿಂದ ಜೋಗಿರೆ ಮೋಳಕೇರಾ ರವರು ಆಗ್ರಹಿಸಿದ್ದಾರೆ. ಪ್ರಸ್ತುತ ದಿನಗಳಲ್ಲಿ ಜಿಲ್ಲಾ ಕೇಂದ್ರ, ತಾಲ್ಲೂಕು, ಹೋಬಳಿ ಸೇರಿದಂತೆ ಗ್ರಾಮೀಣ ಪ್ರದೇಶದಲ್ಲಿಯೂ ಕೂಡ ಕನ್ನಡದ ನಾಮಫಲಕಗಳು ಕಾಣುವುದಿಲ್ಲ. ಎಲ್ಲಡೆ ಆಂಗ್ಲ



ಭಾಷೆಯ ನಾಮಫಲಕಗಳ ಹಾವಳಿಯೇ ತೀವ್ರವಾಗಿ ಕಂಡು ಬರುತ್ತಿದೆ. ಇದು ಕನ್ನಡದ ಬೆಳವಣಿಗೆಗೆ ಮಾರಕವಾಗುತ್ತಿದೆ ಎಂದು ಅಸಮಾಧಾನ ವ್ಯಕ್ತಪಡಿಸಿದ್ದಾರೆ. ದಿನದಿಂದ ದಿನಕ್ಕೆ ಕನ್ನಡ ಭಾಷೆಯ ನಾಮಫಲಕಗಳು ಕಾಣೆಯಾಗುತ್ತಿವ. ಇದು ಆತಂಕಕಾರಿ ಬೆಳವಣಿಗೆ. ಜಿಲ್ಲೆಯಲ್ಲಿ ಇದೇ ಪರಿಸ್ಥಿತಿ ಮುಂಬರುವ ದಿನಗಳಲ್ಲಿ ಗಂಭೀರ ಪರಿಣಾಮ ಎದುರಿಸಬೇಕಾಗುತ್ತದೆ ಎಂದು ಎಚ್ಚರಿಕೆ ನೀಡಿದ್ದಾರೆ. ಖಾಸಗಿ ಶಿಕ್ಷಣ ಸಂಸ್ಥೆಗಳು ಕೂಡ ಕನ್ನಡವನ್ನು ಸಂಪೂರ್ಣವಾಗಿ ಕಡೆಗಣಿಸುತ್ತಿವೆ. ಇವುಗಳ ಮೇಲೆ ಸಹ ಜಿಲ್ಲಾಡಳಿತ ನಿಯಂತ್ರಣ ಮಾಡಲು ಮುಂದಾಗಬೇಕು. ಎಲ್ಲರೂ ವ್ಯಾಪಾರಸ್ಥರು ಕನ್ನಡದ ನಾಮಫಲಕ ಅಳವಡಿಸುವಂತೆ ಸೂಚಿಸಬೇಕೆಂದು ಒತ್ತಾಯಿಸಿದ್ದಾರೆ.

# ಅಗ್ನಿಪಥ ನೇಮಕಾತಿ: ಆನ್‌ಲೈನ್ ನೋಂದಣಿ ಆರಂಭ

ಮಲ್ಲಮ್ಮ ನುಡಿ ವಾರ್ತೆ

ರಾಯಚೂರು ಮಾ.15–ಆರ್ಮಿ ರಿಕ್ರೂಟಿಂಗ್ ಆಫೀಸ್ ಬೆಳಗಾವಿ ಹಾಗೂ ಬೆಂಗಳೂರು ಹೆಡ್‌ಕ್ವಾಟರ್ಸ್ ರಿಕ್ರೂಟಿಂಗ್ ಜೋನ್ ಬೆಂಗಳೂರು ಇವರ ಸಹಯೋಗದಲ್ಲಿ ಅಗ್ನಿಪಥ ನೇಮಕಾತಿಗಾಗಿ ಇದೇ ಮಾರ್ಚ್ 12 ರಿಂದ ಏಪ್ರಿಲ್ 10ರ ವರೆಗೆ ಆನ್‌ಲೈನ್ ಮೂಲಕ ನೋಂದಣಿ ಪ್ರಕ್ರಿಯೆ ನಡೆಯಲಿದೆ ಎಂದು ಬೆಳಗಾವಿ ಆರ್ಮಿ ರಿಕ್ರೂಟಿಂಗ್ ಕಚೇರಿಯ ಡೈರೆಕ್ಟರ್ ರಿಕ್ರೂಟಿಂಗ್ ಕರ್ನಲ್ ಎ.ಕೆ ಉಪಾಧ್ಯಾಯ ಅವರು ತಿಳಿಸಿದ್ದಾರೆ.

ಬೆಳಗಾವಿ, ಬೀದರ, ಕಲಬುರಗಿ, ಕೊಪ್ಪಳ, ರಾಯಚೂರು ಹಾಗೂ ಯಾದಗಿರಿ ಜಿಲ್ಲೆಗಳ ಜಿಲ್ಲೆಗಳ ಪುರುಷ ಅಭ್ಯರ್ಥಿಗಳು ಜಾಯಿನ್ ಇಂಡಿಯನ್ ಆರ್ಮಿ ತಿತಿತಿ.ರಿಟುಟಿಟಿಜುಚಿಟಿಚಿಡಿಟಥಿ.ಟುಥಿ.ಟಿ ವೆಬ್ಸೈಟ್‌ನಲ್ಲಿ ನೋಂದಣಿ ಮಾಡಿಕೊಳ್ಳಬೇಕು.

ಅಗ್ನಿವೀರ್ ಜನರಲ್ ಡ್ಯೂಟಿ, ಅಗ್ನಿವೀರ್ ಟೆಕ್ನಿಕಲ್, ಅಗ್ನಿವೀರ್ ಟ್ರೇಡ್ಸ್‌ಮೆನ್ ಹುದ್ದೆಗಳಿಗೆ 10ನೇ ತರಗತಿ ಉತ್ತೀರ್ಣರಾಗಿರಬೇಕು. ಅಗ್ನಿವೀರ್ ಟ್ರೇಡ್ಸ್‌ಮೆನ್ ಹುದ್ದೆಗೆ 8ನೇ ತರಗತಿ ಪಾಸ್ ಆಗಿರಬೇಕು. ಅಗ್ನಿವೀರ್ ಕ್ಲರ್ಕ್/ಸ್ಟೋರ್‌ಕೀಪರ್ ಟೆಕ್ನಿಕಲ್ ವಿಭಾಗಗಳಿಗೆ ನೇಮಕಾತಿ ನಡೆಯಲಿದೆ. ವಯೋಮಿತಿ, ಶೈಕ್ಷಣಿಕ ಅರ್ಹತೆ ಮತ್ತು ಇನ್ನಿತರ ಹೆಚ್ಚಿನ ಮಾಹಿತಿಗಾಗಿ 2025ರ ಮಾರ್ಚ್ 12 ರಂದು ಬೆಳಗಾವಿ ಆರ್ಮಿ ರಿಕ್ರೂಟಿಂಗ್ ಆಫೀಸ್‌ದಿಂದ ಹೊರಡಿಸಿದ ಅಧಿಸೂಚನೆ ವೀಕ್ಷಿಸಬಹುದಾಗಿದೆ ಎಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ರಾಷ್ಟ್ರೀಯ ಆರೋಗ್ಯ ಕಾರ್ಯಕ್ರಮಗಳ ಕುರಿತು ಮಾಧ್ಯಮ ಕಾರ್ಯಾಗಾರ

# ಆರೋಗ್ಯ ವ್ಯವಸ್ಥೆ ಉನ್ನತೀಕರಿಸಲು ಕೈಜೋಡಿಸಿ: ಡಿಹೆಚ್‌ಒ ಡಾ.ಯಲ್ಲಾ ರಮೇಶ್ ಬಾಬು

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಮಾ.15–ರೋಗ್ಯ ಇಲಾಖೆ ಮತ್ತು ಮಾಧ್ಯಮಗಳು ಸಮಾಜದಲ್ಲಿ ಸಂಪರ್ಕ ಸೇತುವೆಯಂತೆ ಕಾರ್ಯನಿರ್ವಹಿಸುತ್ತಿದ್ದು, ಆರೋಗ್ಯ ವ್ಯವಸ್ಥೆಯನ್ನು ಇನ್ನಷ್ಟು ಉನ್ನತೀಕರಿಸಲು ಮಾಧ್ಯಮ ಪ್ರತಿನಿಧಿಗಳು ಕೈಜೋಡಿಸಬೇಕು ಎಂದು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ.ಯಲ್ಲಾ ರಮೇಶ್ ಬಾಬು ಅವರು ಹೇಳಿದರು.

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಮತ್ತು ಮಾಹಿತಿ ಶಿಕ್ಷಣ ಸಂವಹನ ವಿಭಾಗ ಇವರ ಸಂಯುಕ್ತಾಶ್ರಯದಲ್ಲಿ ರಾಷ್ಟ್ರೀಯ ಆರೋಗ್ಯ ಅಭಿಯಾನದಡಿ ನಗರದ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿಗಳ ಸಭಾಂಗಣದಲ್ಲಿ ಮಾಧ್ಯಮ ಪ್ರತಿನಿಧಿಗಳಿಗೆ ಶನಿವಾರ ಏರ್ಪಡಿಸಿದ್ದ ರಾಷ್ಟ್ರೀಯ ಆರೋಗ್ಯ ಕಾರ್ಯಕ್ರಮಗಳ ಕುರಿತು ಪರಿಚಯ ಮತ್ತು ಜಾಗೃತಿ ಕಾರ್ಯಾಗಾರವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಜಿಲ್ಲೆಯಲ್ಲಿ ಆರೋಗ್ಯ ಇಲಾಖೆ ವತಿಯಿಂದ ಕೈಗೊಳ್ಳಲಾಗುತ್ತಿರುವ ಎಲ್ಲಾ ರಾಷ್ಟ್ರೀಯ ಆರೋಗ್ಯ ಕಾರ್ಯಕ್ರಮಗಳನ್ನು ದಿನಂಪ್ರತಿ ಪತ್ರಿಕೆಗಳಲ್ಲಿ ಪ್ರಕಟಗೊಳ್ಳುತ್ತಿರುವ ಕುರಿತು ಬಳ್ಳಾರಿ ಜಿಲ್ಲೆಗೆ ರಾಜ್ಯಮಟ್ಟದಲ್ಲಿ ಪ್ರಶಂಸೆ ವ್ಯಕ್ತವಾಗುತ್ತಿದೆ ಎಂದು ಹರ್ಷ



ವ್ಯಕ್ತಪಡಿಸಿದರು.

ಕಳೆದ ನವೆಂಬರ್ ತಿಂಗಳಲ್ಲಿ ನಡೆದ ಬಾಣಂತಿಯರ ಸಾವು ಪ್ರಕರಣ ಘಟನೆಯು ಸಾಕಷ್ಟು ಪರಿಣಾಮ ಬೀರಿತು. ಇದರಿಂದ ಸಾರ್ವಜನಿಕರು ಚಿಕಿತ್ಸೆಗಾಗಿ ಜಿಲ್ಲಾ ಆಸ್ಪತೆಗೆ ಬರುವುದು ಸಹ ಕುಗ್ಗಿತ್ತು. ಆದರೆ ಮಾಧ್ಯಮದವರು ಜನರಲ್ಲಿ ಜಾಗೃತಿ ಮೂಡಿಸುವ ವರದಿಗಳನ್ನು ಪ್ರಕಟಿಸಿದ ಕಾರಣದಿಂದಾಗಿ ಬರುತ್ತಾ ಕ್ರಮೇಣವಾಗಿ ಸುಧಾರಣೆ ಹೊಂದುತ್ತಿದೆ ಎಂದು ತಿಳಿಸಿದರು.

ಸಾರ್ವಜನಿಕರ ಆರೋಗ್ಯ ಕಾಪಾಡುವ ನಿಟ್ಟಿನಲ್ಲಿ ಹಾಗೂ ತುರ್ತು ಸಂದರ್ಭಗಳಲ್ಲಿಯೂ ಜಿಲ್ಲಾ ಆರೋಗ್ಯ ಇಲಾಖೆಯು ಉತ್ತಮ ಸೇವೆ ನೀಡುತ್ತಿದೆ. ಲಸಿಕಾ ಕಾರ್ಯಕ್ರಮ ಹಮ್ಮಿಕೊಳ್ಳಲಾಗುತ್ತಿದೆ. ಇದರ ಜೊತೆಗೆ ಮಾರಕ ರೋಗಗಳನ್ನೂ ಸಹ ತಡೆಗಟ್ಟಲು ಕ್ರಮ ವಹಿಸಲಾಗುತ್ತಿದೆ ಎಂದು ಹೇಳಿದರು.

ವರ್ಷಕ್ಕೊಮ್ಮೆ ಆರೋಗ್ಯ ತಪಾಸಣೆಗೆ ರೂಪುರೇಷೆ:

ಮಾಧ್ಯಮ ಪ್ರತಿನಿಧಿಗಳ ಆರೋಗ್ಯವು ಮುಖ್ಯವಾಗಿದ್ದು, ಅವರ ಸುರಕ್ಷತೆಗಾಗಿ ವರ್ಷದಲ್ಲಿ ಒಂದು ಬಾರಿಯಾದರೂ ಅವರ ಸಾಮಾನ್ಯ ಆರೋಗ್ಯ ತಪಾಸಣೆ ಕೈಗೊಳ್ಳಲು ರೂಪುರೇಷೆ ಕೈಗೊಳ್ಳಲಾಗುವುದು. ಈ ಕುರಿತು ಚರ್ಚಿಸಿ ಪ್ರತಿನಿಧಿಗಳ ಮಾಹಿತಿ ಪಡೆದುಕೊಂಡು ನೋಂದಾಯಿಸಲು ಕ್ರಮ ಕೈಗೊಳ್ಳಲಾಗುವುದು ಎಂದರು.

ತಿಂಗಳಿಗೊಮ್ಮೆ ಆರೋಗ್ಯ ಕಾರ್ಯಕ್ರಮಗಳ ಕುರಿತು ವಿಶೇಷ ವರದಿ ಸಿದ್ಧಪಡಿಸಿ ಬಿಡುಗಡೆಗೊಳಿಸಿ ಹೆಚ್ಚಿನ ರೀತಿಯಲ್ಲಿ ಕಾರ್ಯಕ್ರಮಗಳ ಕುರಿತು ಪರಿಣಾಮಕಾರಿಯಾಗಿ ಅನುಷ್ಠಾನ ಮಾಡಲಾಗುವುದು ಎಂದರು.

ಜಿಲ್ಲಾ ಶಸ್ತ್ರಚಿಕಿತ್ಸಕ ಡಾ.ಎನ್.ಬಸರೆಡ್ಡಿ ಮಾತನಾಡಿ, ಜಿಲ್ಲೆಯಲ್ಲಿ ಜಿಲ್ಲಾಸ್ಪತ್ರೆಯು ಅಚ್ಚುಕಟ್ಟಾಗಿ ಕಾರ್ಯನಿರ್ವಹಿಸುತ್ತಿದೆ. ಆಸ್ಪತ್ರೆಯಲ್ಲಿ ಅತ್ಯಾಧುನಿಕ ತಂತ್ರಜ್ಞಾನದ ಆರೋಗ್ಯ ಸೇವೆಗಳು ಲಭ್ಯವಿದ್ದು, ಸಾರ್ವಜನಿಕರು ಇದರ ಸದುಪಯೋಗ ಪಡಿಸಿಕೊಳ್ಳಬೇಕು. ಮಾಧ್ಯಮ ಪ್ರತಿನಿಧಿಗಳು ಹೆಚ್ಚಿನ ರೀತಿಯಲ್ಲಿ ಪ್ರಚಾರ ನೀಡಬೇಕು ಎಂದು ಕೋರಿದರು.

ಜಿಲ್ಲೆಯಲ್ಲಿ ಹೆರಿಗೆ ಪ್ರಕರಣಗಳು ಜಿಲ್ಲಾ ಆಸ್ಪತ್ರೆ ಮತ್ತು ವಿಮ್ಸ್ ಆಸ್ಪತ್ರೆಯಲ್ಲಿ ಹೆಚ್ಚು ಆಗುತ್ತಿರುವುದರಿಂದ, ಶಿಶು ಮತ್ತು ತಾಯಿ ಮರಣ ತಡೆಗೆ ಎಲ್ಲಾ ರೀತಿಯ ಮುಂಜಾಗ್ರತಾ ಕ್ರಮ ವಹಿಸಲಾಗಿದೆ ಎಂದು ತಿಳಿಸಿದರು.

ಜಿಲ್ಲೆಯಲ್ಲಿ ಯಾವುದೇ ಆರೋಗ್ಯ ಸೇವೆಗಳು, ಸೌಲಭ್ಯಗಳು ಹಾಗೂ ಇತರೆ ಕುಂದು ಕೊರತೆಗಳು ಕಂಡು ಬಂದಲ್ಲಿ ಸಂಬಂಧಿಸಿದ ವಿಭಾಗದ ಅಧಿಕಾರಿಗಳ ಗಮನಕ್ಕೆ ತರಬಹುದು ಎಂದು ಮಾಧ್ಯಮ ಪ್ರತಿನಿಧಿಗಳಿಗೆ ಸಲಹೆ ನೀಡಿದರು.

ಜಿಲ್ಲಾ ಆರ್‌ಸಿಹೆಚ್ ಅಧಿಕಾರಿ ಡಾ.ಹನುಮಂತಪ್ಪ ಅವರು ಪ್ರಾಸ್ತಾವಿಕವಾಗಿ ಮಾತನಾಡಿ, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯಿಂದ ಅನುಷ್ಠಾನಗೊಳ್ಳುವ ಆರೋಗ್ಯ ಕಾರ್ಯಕ್ರಮಗಳು, ಸೌಲಭ್ಯಗಳು ಮತ್ತು ಆರೋಗ್ಯ ಜಾಗೃತಿ ಸಂದೇಶಗಳ ಕುರಿತು ಸಕಾಲದಲ್ಲಿ ಸಾರ್ವಜನಿಕರಿಗೆ ತಲುಪಿಸಲು ಮಾಧ್ಯಮಗಳ ಸಹಕಾರ ಅಗತ್ಯವಾಗಿದೆ ಎಂದು ಹೇಳಿದರು.

ಇದೇ ವೇಳೆ, ಆರೋಗ್ಯ ಇಲಾಖೆಯಿಂದ ರಾಷ್ಟ್ರೀಯ ಆರೋಗ್ಯ ಕಾರ್ಯಕ್ರಮಗಳನ್ನೊಳಗೊಂಡಂತಹ ಸಂಕ್ಷಿಪ್ತ ಮಾಹಿತಿಯುಳ್ಳ ಕಿರುಹೊತ್ತಿಗೆಯನ್ನು ಗಣ್ಯರು ಅನಾವರಣಗೊಳಿಸಿದರು.

ಕಾರ್ಯಾಗಾರದಲ್ಲಿ ಮಾನಸಿಕ ಆರೋಗ್ಯ ಕಾರ್ಯಕ್ರಮ, ಕುಷ್ಠರೋಗ ನಿರ್ಮೂಲನೆ, ಮೆದುಳಿನ ಆರೋಗ್ಯ ಉಪಕ್ರಮ, ತಂಬಾಕು ನಿಯಂತ್ರಣ, ಪುರುಷ ಸಂತಾನನಿರೋಧ ಶಸ್ತ್ರಚಿಕಿತ್ಸೆ, ರೇಬಿಸ್ ನಿಯಂತ್ರಣ ಸೇರಿದಂತೆ ಇತರೆ ಆರೋಗ್ಯ ಕಾರ್ಯಕ್ರಮಗಳ ಕುರಿತು ಸಂಬಂಧಿಸಿದ ವೈದ್ಯಾಧಿಕಾರಿಗಳು ಮಾಹಿತಿ ನೀಡಿದರು.

ಈ ಸಂದರ್ಭದಲ್ಲಿ ಜಿಲ್ಲಾ ಸರ್ವೇಕ್ಷಣಾಧಿಕಾರಿ ಡಾ.ಮರಿಯಂಬಿ ವಿ.ಕೆ., ಜಿಲ್ಲಾ ಕುಟುಂಬ ಕಲ್ಯಾಣ ಕಾರ್ಯಕ್ರಮ ಅನುಷ್ಠಾನಾಧಿಕಾರಿ ಡಾ.ಪೂರ್ಣಿಮಾ ಕಟ್ಟಿಮನಿ, ಜಿಲ್ಲಾ ಕುಷ್ಠರೋಗ ನಿಯಂತ್ರಣಾಧಿಕಾರಿ ಡಾ.ವೀರೇಂದ್ರಕುಮಾರ್, ಜಿಲ್ಲಾ ಮಲೇರಿಯಾ ನಿಯಂತ್ರಣಾಧಿಕಾರಿ ಡಾ.ಆರ್.ಅಬ್ದುಲ್ಲಾ, ಮನೋರೋಗ ತಜ್ಞ ಡಾ.ರೋಹನ್ ವನಗುಂದಿ, ಜಿಲ್ಲಾ ಆರೋಗ್ಯ ಶಿಕ್ಷಣಾಧಿಕಾರಿ ಈಶ್ವರ್ ದಾಸಪ್ಪನವರ್, ತಾಲ್ಲೂಕು ಆರೋಗ್ಯ ಶಿಕ್ಷಣಾಧಿಕಾರಿ ಶಾಂತಮ್ಮ ಸೇರಿದಂತೆ ಮಾಧ್ಯಮ ಪ್ರತಿನಿಧಿಗಳು, ಜಿಲ್ಲಾ ಆಸ್ಪತ್ರೆಯ ವೈದ್ಯರು, ಸಿಬ್ಬಂದಿಗಳು ಹಾಗೂ ಇನ್ನಿತರರು ಉಪಸ್ಥಿತರಿದ್ದರು.

# ಹೆಚ್ಚುವರಿ ಜಿಲ್ಲಾ ನ್ಯಾಯಾಲಯದಲ್ಲಿ ವಿವಿಧ ಹುದ್ದೆ ಪೂರೈಸಲು ಅರ್ಹ ಮಾನವಸೇವಾ ಅಥವಾ ಮಾನವ ಸಂಪನ್ಮೂಲ ಏಜೆನ್ಸಿಗಳಿಂದ ಟೆಂಡರ್ ಆಹ್ವಾನ

ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ:ಮಾರ್ಚ್ 15–ಯಾದಗಿರಿ ಜಿಲ್ಲಾ ನ್ಯಾಯಾಂಗ ಇಲಾಖೆಯಲ್ಲಿ ಖಾಲಿ ಇರುವ ಬೆರಳಚ್ಚುಗಾರ, ಅಟೆಂಡರ್ ಮತ್ತು ಜವಾನ ಹುದ್ದೆಗಳನ್ನು ಹೊರಗುತ್ತಿಗೆ ಮೂಲಕ ಭರ್ತಿ ಮಾಡುವ ಸಲುವಾಗಿ ಅರ್ಹ ಏಜೆನ್ಸಿದಾರರಿಂದ ಟೆಂಡರ್ ಆಹ್ವಾನಿಸಲಾಗಿದೆ ಎಂದು ಯಾದಗಿರಿ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರಾದ ಬಿ.ಎಸ್.ರೇಖಾ ಅವರು ತಿಳಿಸಿದ್ದಾರೆ.

ಕರ್ನಾಟಕ ಸರಕಾರದ ಪಾರದರ್ಶಕತೆ ಕಾನೂನು 1999 ಹಾಗೂ ತಿದ್ದುಪಡಿ ನಿಯಮಗಳಿಗನುಸಾರವಾಗಿ ಯಾದಗಿರಿ ನ್ಯಾಯಾಂಗ ಇಲಾಖೆಯಲ್ಲಿ ಖಾಲಿ ಇರುವ ಬೆರಳಚ್ಚುಗಾರ, ಅಟೆಂಡರ್ ಮತ್ತು ಜವಾನ ಹುದ್ದೆಗಳನ್ನು ಹೊರಗುತ್ತಿಗೆ ಮೂಲಕ ಭರ್ತಿ ಮಾಡಲು ನೊಂದಾಯಿಸಿದ ಅರ್ಹ ಏಜೆನ್ಸಿದಾರರಿಂದ ಟೆಂಡರ್‌ಗಳನ್ನು ಆಹ್ವಾನಿಸಿದೆ. ಹುದ್ದೆಗಳ ವಿವರ ಮತ್ತು ವಿದ್ಯಾರ್ಹತೆ : ನ್ಯಾಯಾಲಯಗಳ ಹೆಸರು 1ನೇ ಹೆಚ್ಚುವರಿ ಜಿಲ್ಲಾ ಮತ್ತು ಸತ್ರ ನ್ಯಾಯಾಲಯ ಯಾದಗಿರಿದಲ್ಲಿ ಬೆರಳಚ್ಚುಗಾರ–1 ಹುದ್ದೆ ಇದ್ದು, ಅಟೆಂಡರ್–1 ಹುದ್ದೆ ಇದ್ದು, ಜವಾನ–1 ಹುದ್ದೆ ಇದೆ. 2ನೇ ಹೆಚ್ಚುವರಿ ಜಿಲ್ಲಾ ಮತ್ತು ಸತ್ರ ನ್ಯಾಯಾಲಯ ಯಾದಗಿರಿ (ಸುರಪುರ ಪೀಠ) ಬೆರಳಚ್ಚುಗಾರ–1 ಹುದ್ದೆ ಇದ್ದು, ಅಟೆಂಡರ್–1 ಹುದ್ದೆ ಇದ್ದು, ಜವಾನ–2 ಹುದ್ದೆ ಇದೆ. 3ನೇ ಹೆಚ್ಚುವರಿ ಜಿಲ್ಲಾ ಮತ್ತು ಸತ್ರ ನ್ಯಾಯಾಲಯ ಯಾದಗಿರಿದಲ್ಲಿ ಬೆರಳಚ್ಚುಗಾರ–1 ಹುದ್ದೆ ಇದ್ದು, ಅಟೆಂಡರ್–1 ಹುದ್ದೆ ಇದ್ದು, ಜವಾನ–2 ಹುದ್ದೆ ಇದೆ. ಹೆಚ್ಚುವರಿ ಜಿಲ್ಲಾ ಮತ್ತು ಸತ್ರ ನ್ಯಾಯಾಲಯ (ಎಫ್.ಟಿ.ಎಸ್.ಸಿ–1) ಯಾದಗಿರಿದಲ್ಲಿ ಬೆರಳಚ್ಚುಗಾರ–2 ಹುದ್ದೆ ಇದ್ದು, ಅಟೆಂಡರ್–1 ಹುದ್ದೆ ಇದ್ದು, ಜವಾನ–1 ಹುದ್ದೆ ಇದೆ.

ಅರ್ಹತೆ ಬೆರಳಚ್ಚುಗಾರ ಹುದ್ದೆಗೆ ಪಿ.ಯು.ಸಿ ಮತ್ತು ತತ್ಸಮಾನ ವಿದ್ಯಾರ್ಹತೆ ಹೊಂದಿರಬೇಕು. ಕನ್ನಡ ಮತ್ತು ಇಂಗ್ಲೀಷ್ ಹಿರಿಯ ಶ್ರೇಣಿ ಬೆರಳಚ್ಚುಗಾರರಲ್ಲಿ ಪಾಸ್ ಆಗಿರಬೇಕು. ಅಥವಾ ತತ್ಸಮಾನ ವಿದ್ಯಾರ್ಹತೆ ಹೊಂದಿರಬೇಕು ಅಟೆಂಡರ್ ಮತ್ತು ಜವಾನ ಹುದ್ದೆಗಳಿಗೆ ಎಸ್.ಎಸ್.ಎಲ್.ಸಿ ಅಥವಾ ತತ್ಸಮಾನ ವಿದ್ಯಾರ್ಹತೆ ಹೊಂದಿರಬೇಕು ಮತ್ತು ಕನ್ನಡ ಓದಲು, ಬರೆಯಲು ಬರಬೇಕು. ಅರ್ಜಿ, ನಿಬಂಧನೆ, ಮಾಹಿತಿಯನ್ನು ವೆಬ್‌ಸೈಟ್ https://yadgir.dcourts.gov.in/notice-category/tenders/ನಲ್ಲಿ ಸಂಪರ್ಕಿಸಬಹುದು ಎಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಹಿಂದೂ–ಮುಸ್ಲಿಂ ಭಾವೈಕ್ಯತೆಯ ಹೋಳಿ



ಮಲ್ಲಮ್ಮ ನುಡಿ ವಾರ್ತೆ

ಔರದ್:ಜಾತಿ,ಧರ್ಮ,ಮೇಲು–ಕೀಳು ಎನ್ನುವ ಭೇದ ಭಾವವಿಲ್ಲದೆ ಮಾನವೀಯತೆಯ ಭಾವನೆಯಿಂದ ಈ ಹೋಳಿ ಹಬ್ಬವನ್ನು ವಡಗಾಂವ(ದೇ) ಗ್ರಾಮದಲ್ಲಿ ಸುಮಾರು ಎಂಟು ವರ್ಷಗಳಿಂದ ಆಚರಿಸಲಾಗುತ್ತಿದೆ ಎಂದು ಕೆಎಎಸ್ ಅಧಿಕಾರಿಯಾದ ಖಾಜಾ ಖಲೀಲುಲ್ಲ ಹೇಳಿದರು.

ವಡಗಾಂವ(ದೇ) ಗ್ರಾಮದಲ್ಲಿ ಶುಕ್ರವಾರ ಹಿಂದೂ–ಮುಸ್ಲಿಂ ಎನ್ನದೆ ಹೋಳಿ ಹಬ್ಬವನ್ನು ಯುವಕರು ಸಂಭ್ರಮದಿಂದ ಆಚರಿಸಿದರು.

ಏಕತೆ ಪ್ರತಿಬಿಂಬಿಸುವ ಬಾಂಧವ್ಯದ ವಿವಿಧ ಬಣ್ಣಗಳ ಓಕುಳಿಯಲ್ಲಿ ಮಿಂದು ಹಿಂದೂ–ಮುಸ್ಲಿಂ ನಾವೆಲ್ಲರೂ ಒಂದೇ ಎಂಬ ಭಾವನೆ ಸಾರುವ ಈ ಹಬ್ಬದ ವಿಶೇಷತೆಯಾಗಿದೆ ಎಂದರು.

ವೈದ್ಯಾಧಿಕಾರಿ ಸಿದ್ದಾರೆಡ್ಡಿ ಬಿರಾದಾರ್ ಮಾತನಾಡಿ ಭಾರತ ಸಂಪ್ರದಾಯ ಮತ್ತು ಧರ್ಮವನ್ನು ಗೌರವಿಸುವ ದೇಶ. ಇದು ಭಾರತ ನೆಲದ ಸಂಸ್ಕಾರ ವಾಗಿದೆ ಎಂದರು.

ಪಿಡಿಒ ಚಂದ್ರಕಾಂತ ಫುಲೆ, ಪ್ರಾಂಶುಪಾಲ ನವೀಲಕುಮಾರ ಉತ್ಕಾರ್, ತಾಲೂಕಾ ಯೋಜನಾಧಿಕಾರಿ ರತಿಕಾಂತ ನೇಳಗೆ, ಅಶೋಕ ಅಡಿಕೆ, ಶಫಿಯುಲ್ಲಾ ಚಾಬುಕಸವಾರ, ಫಿರೋಜ್ ಖಾನ್, ಸಲು ಚಾಬುಕಸವಾರ, ಜಾಫರ್ ಖಾನ್, ಸಮೀರ್ ಚಾಬುಕಸವಾರ, ಶಶಿಕಾಂತ ಹೌಶೆಟ್ಟೆ, ಸಾಯಿಕೋಡಿಗೆ, ಕಾಶಪ್ಪ ದ್ಯಾಡರ್, ಓಂಕಾರ ಮೇತ್ರೆ, ಸಾಗರ ಸಿಂಪಿ, ಭಜನಲಾಲ್ ಸಿಂಗ್, ಮಹೇಂದ್ರ ಸಿಂಗ್, ಹಾವಪ್ಪ ನೇಳಗೆ, ನಾಗೇಶ ವೀರಬಶೆಟ್ಟೆ, ಆಕಾಶ ಸಿದ್ದೇಶ್ವರ, ಬಸವರಾಜ ಇದ್ದರು.

ಇದೇ ಸಂದರ್ಭದಲ್ಲಿ ಮುಸ್ಲಿಂ ಬಾಂಧವರು ಹಿಂದೂ ಬಾಂಧವರಿಗೆ ಸಿಹಿ ನೀಡಿ ಶುಭಾಶಯಗಳು ಕೋರಿದರು. ಹಾಗೂ ಹಿಂದೂ ಬಾಂಧವರು ಮುಸ್ಲಿಂ ಬಾಂಧವರಿಗೆ ಔತನ ಕೂಟ ಏರ್ಪಡಿಸುವ ಸಂಪ್ರದಾಯ ರೂಡಿಸಿ ಕೋಡಿದ್ದಾರೆ.

# ಮಹಿಳಾ ದಿನಾಚರಣೆ ಕಾರ್ಯಕ್ರಮ



ಮಲ್ಲಮ್ಮ ನುಡಿ ವಾರ್ತೆ

ಔರಾದ್ : ಪಟ್ಟಣದ ವಚನ ಸಮೂಹ ಸಂಸ್ಥೆ ಕಛೇರಿಯಲ್ಲಿ ಪೂಜ್ಯ ಮಾತೆ ಮಹಾದೇವಿ ಜಯಂತ್ಯುತ್ಸವ ಹಾಗೂ ಮಹಿಳಾ ದಿನಾಚರಣೆ ಕಾರ್ಯಕ್ರಮ ನೆರವೇರಿತು.

ಈ ಸಂದರ್ಭದಲ್ಲಿ ಮಾತನಾಡಿದ ನಿವೃತ್ತ ಶಿಕ್ಷಕಿ ಶಕುಂತಲಾ ನಿಡೋದೆ ಮಾತನಾಡಿ, ಒಬ್ಬ ಮಹಿಳೆಯಾಗಿ ಆಧ್ಯಾತ್ಮಿಕ, ಧಾರ್ಮಿಕ ಕ್ಷೇತ್ರದಲ್ಲಿ ಮಾತಾಜೀ ಮಾಡಿರುವ ಸಾಧನೆ ಅವಿಸ್ಮರಣೀಯ. ಕೂಡಲಸಂಗಮ ಹಾಗೂ ಬಸವಕಲ್ಯಾಣ ಕ್ಷೇತ್ರಗಳ ಪ್ರಸಿದ್ಧತೆಗೆ ಮಾತಾಜಿ ಕಾಣಿಕೆ ಅನುಪಮವಾಗಿದೆ ಎಂದರು.

ಕನ್ನಡ ಸಾಹಿತ್ಯ ಪರಿಷತ್ ಮಹಿಳಾ ಘಟಕದ ಅಧ್ಯಕ್ಷೆ ಮಹಾನಂದಾ ಎಂಡೆ ಮಾತನಾಡಿ, ಮಹಿಳೆಯರು ಇಂದು ಪ್ರತಿ ಕ್ಷೇತ್ರದಲ್ಲಿ ಮುನ್ನಡೆ ಸಾಧಿಸುತ್ತಿದ್ದು, ರಾಷ್ಟ್ರಪತಿ ದ್ರೌಪದಿ ಮುರ್ಮು, ಸುಧಾಮೂರ್ತಿ ಅವರಂತಹ ವ್ಯಕ್ತಿತ್ವ ನಮ್ಮೆಲ್ಲರಿಗೂ ಆದರ್ಶವಾಗಿದೆ ಎಂದರು.

ಶರಣಪ್ಪ ನಾಗಲಗಿದ್ದೆ ಮಾತನಾಡಿ, ಲಿಂಗಾಯತ ಧರ್ಮಕ್ಕೆ ಮಾನ್ಯತೆ ವಿಚಾರದಲ್ಲಿ ಪೂಜ್ಯ ಮಾತಾಜಿಯವರ ಕೊಡುಗೆ ಅತ್ಯಮೂಲ್ಯವಾಗಿದ್ದು, ಪೂಜ್ಯ ಲಿಂಗಾನಂದ ಅಪ್ಪನವರಂತೆ ಬಸವ ತತ್ವ ಪ್ರಸಾರಕ್ಕೆ ಹಲವು ಯೋಜನೆಗಳು ರೂಪಿಸಿರುವ ಮಾತಾಜಿ ಕಾರ್ಯ ಅನುಕರಣೀಯವಾಗಿದೆ ಎಂದರು. ಈ ಸಂದರ್ಭದಲ್ಲಿ ಡಾ. ವೈಜಿನಾಥ ಬುಟ್ಟೆ, ಡಾ. ನಾಗೇಶ ಕೌಟಗೆ, ಮಲ್ಲಿಕಾರ್ಜುನ ಟಂಕಸಾಲೆ, ಸಾವಿತ್ರಿಬಾಯಿ ಫುಲೆ ಸಂಘದ ಅಧ್ಯಕ್ಷೆ ಮಾರ್ತಾಬಾಯಿ, ಗಂಗಾ ನಾಗಲಗಿದ್ದೆ, ಸುಜಾತಾ ಟಂಕಸಾಲೆ, ಪ್ರೇಮಾ ಕೋಟೆ, ಜ್ಯೋತಿ ಗುಡುರೆ, ಪ್ರಭಾವತಿ ಭಾಲೇಕರ್, ಜಯಶ್ರೀ ಡೊಂಬಾಳೆ, ಕಾವೇರಿ ಸ್ವಾಮಿ, ತೇಜಸ್ವಿ ಚಾಂದಕವಠೆ, ಸೌಭಾಗ್ಯವತಿ ಸೇರಿದಂತೆ ಇನ್ನಿತರರಿದ್ದರು.

## ಮಾ.21 ರಿಂದ ಏ.4 ರವರೆಗೆ ಎಸ್.ಎಸ್.ಎಲ್.ಸಿ ಪರೀಕ್ಷೆ ಪಾರದರ್ಶಕ ಪರೀಕ್ಷೆಗೆ ಸೂಕ್ತ ಕ್ರಮ : ಡಿಸಿ ಜಾನಕಿ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಮಾ.15-ಜಿಲ್ಲೆಯಲ್ಲಿ ಮಾರ್ಚ 21 ರಿಂದ ಏಪ್ರಿಲ್ 4 ರವರೆಗೆ 2025 ನೇ ಸಾಲಿನ ಎಸ್‌ಎಸ್‌ಎಲ್‌ಸಿ ವಾರ್ಷಿಕ ಪರೀಕ್ಷೆ ಜರುಗಲಿದ್ದು, ಪರೀಕ್ಷಾ ಸಮಯದಲ್ಲಿ ಯಾವುದೇ ಪ್ರಶ್ನೆ ಪತ್ರಿಕೆ ಸೋರಿಕೆಯಾಗದಂತೆ ಅಕ್ರಮಗಳಿಗೆ ಅವಕಾಶ ನೀಡದೇ ಪಾರದರ್ಶಕ ಪರೀಕ್ಷೆ ನಡೆಸಲು ಕ್ರಮಕೈಗೊಳ್ಳಲಾಗಿದೆ ಎಂದು ಜಿಲ್ಲಾಧಿಕಾರಿ ಜಾನಕಿ ಕೆ.ಎಮ್ ಹೇಳಿದರು.

ಜಿಲ್ಲಾಡಳಿತ ಭವನದ ಆಡಿಟೋರಿಯಂ ಹಾಲ್‌ನಲ್ಲಿ ಶನಿವಾರ ಜರುಗಿದ ಎಸ್‌ಎಸ್‌ಎಲ್‌ಸಿ ಪರೀಕ್ಷೆಯ ಪೂರ್ವ ಸಿದ್ದತಾ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಜಿಲ್ಲೆಯ 94 ಪರೀಕ್ಷಾ ಕೇಂದ್ರಗಳಲ್ಲಿ 33209 ಅಭ್ಯರ್ಥಿಗಳು ಪರೀಕ್ಷೆ ಬರೆಯಲಿದ್ದು,ಪರೀಕ್ಷಾ ಕಾರ್ಯಕ್ಕೆ 94 ಮುಖ್ಯ ಅಧೀಕ್ಷಕರು, 47 ಉಪ ಅಧೀಕ್ಷಕರು, 94 ಅಭಿರಕ್ಷಕರು, 31 ಪರೀಕ್ಷಾ ಕೇಂದ್ರದ ವೀಕ್ಷಕರು, 21 ವೆಬ್ ಕಾಸ್ಟಿಂಗ್ ಸಿಬ್ಬಂದಿ ಇರುತ್ತಾರೆ ಎಂದರು.

94 ಮೊಬೈಲ್ ಸ್ವಾಧಿನಾಧಿಕಾರಿ, 94 ಸ್ಥಾನಿಕ ಜಾಗೃತ ದಳದವರು, 36 ಮಾರ್ಗಾಧಿಕಾರಿಗಳು ಮತ್ತು 1400 ಕ್ಕೂ ಅಧಿಕ ಕೊಠಡಿ ಮೇಲ್ವಿಚಾರಕರನ್ನು ನಿಯೋಜಿಸಿ ಪರೀಕ್ಷಾ ಕೇಂದ್ರಗಳಲ್ಲಿ ಯಾವುದೇ ರೀತಿಯ ಕಾನೂನು ಬಾಹಿರ ಚಟುವಟಿಕೆಗಳಾಗಲಿ, ಅವ್ಯವಹಾರಗಳಾಗಲಿ ನಡೆಯದಂತೆ ಎಲ್ಲಾ ಪರೀಕ್ಷಾ ಕೇಂದ್ರದಿಂದ 200 ಮೀಟರ್ ವ್ಯಾಪ್ತಿಯಲ್ಲಿ ಕಲಂ 144 ಜಾರಿಗೊಳಿಸುವದರ ಮೂಲಕ ಶಿಸ್ತುಬದ್ದವಾಗಿ ಪರೀಕ್ಷೆಗಳನ್ನು ಜರುಗಿಸಲಾಗುವುದು ಎಂದು ಡಿಸಿ ಹೇಳಿದರು.

ಎಲ್ಲಾ 94 ಪರೀಕ್ಷಾ ಕೇಂದ್ರಗಳ ಮುಖ್ಯಸ್ಥರು ಅಲ್ಲಿನ ಕಟ್ಟಡದ ಸ್ವಚ್ಛತೆ, ಕುಡಿಯುವ ನೀರು, ಶೌಚಾಲಯ ಸೇರಿ ಇನ್ನಿತರ ಮೂಲಭೂತ ಸೌಲಭ್ಯಗಳ ವ್ಯವಸ್ಥೆ, ಮಕ್ಕಳ ಸುರಕ್ಷತೆ, ಆಸನದ ವ್ಯವಸ್ಥೆ ಮಾಡಿದ ಬಗ್ಗೆ ಖಾತರಿಪಡಿಸಿಕೊಂಡು ಎಲ್ಲಾ ಮಕ್ಕಳು ಗಾಳಿ ಬೆಳಕಿರುವ ಕೊಠಡಿಗಳಲ್ಲಿ ಕುಳಿತು ಪರೀಕ್ಷೆ ಬರೆಯುವ ವ್ಯವಸ್ಥೆಯನ್ನು ಮಾಡಬೇಕು, ಮಕ್ಕಳ ಭವಿಷ್ಯದ ಹಿತದೃಷ್ಟಿಯಿಂದ ಹೆಸ್ಕಾಂ ಅಧಿಕಾರಿಗಳು ನಿರಂತರ ವಿದ್ಯುತ್ ಪೂರೈಸುವ ಕಾರ್ಯ ಮಾಡಬೇಕೆಂದು ಜಾನಕಿ ತಿಳಿಸಿದರು.

ಹಾಲಟಿಕೆಟ್ ನೆಪವೊಡ್ಡಿ ವಿದ್ಯಾರ್ಥಿಗಳಿಗೆ ತೊಂದರೆ ಮಾಡದೇ ಸಂಬಂಧಪಟ್ಟವರನ್ನು ವಿಚಾರಿಸಿ ಅಭ್ಯರ್ಥಿಗಳನ್ನು ಪರೀಕ್ಷೆ ಬರೆಯಲು ಬಿಡಬೇಕು, ನಮಗಿಂತ ಇಂದಿನ ವಿದ್ಯಾರ್ಥಿಗಳಿಗೆ ಹೆಚ್ಚಿನ ಸವಾಲು, ಒತ್ತಡ, ನಿರೀಕ್ಷೆಗಳಿವೆ. ವಿದ್ಯಾರ್ಥಿಗಳಿಗೆ ಯಾವುದೇ ರೀತಿಯ ಅನ್ಯಾಯವಾಗಬಾರದು ಎಂದು ಶಿಕ್ಷಕರಿಗೆ ಅವರು ತಿಳಿಸಿದರು.

ಈ ಬಾರಿ ಕರ್ನಾಟಕ ಶಾಲಾ ಪರೀಕ್ಷೆ ಮತ್ತು ಮೌಲ್ಯ ನಿರ್ಣಯ ಮಂಡಳಿಯ ಆದೇಶದಂತೆ ಗೈರು ಹಾಜರಾದ ವಿದ್ಯಾರ್ಥಿಗಳ ಮಾಹಿತಿಯನ್ನು ಆನ್ಲೈನ್ ಮೂಲಕ ತಿಳಿಸಬೇಕು. ಶಾಲಾ ಶಿಕ್ಷಣ ಇಲಾಖೆಯ ಅಧಿಕಾರಿ, ಸಿಬ್ಬಂದಿ ಅಷ್ಟೇ ಅಲ್ಲದೇ ಇತರ ಇಲಾಖಾ ಅಧಿಕಾರಿಗಳ ಜವಾಬ್ದಾರಿ ಕೂಡ ಇದ್ದು ಎಲ್ಲರೂ ತಮ್ಮ ತಮ್ಮ ಜವಾಬ್ದಾರಿಗಳನ್ನು ಅರಿತು ಕಾರ್ಯನಿರ್ವಹಿಸಬೇಕು ಎಂದು ಜಿಲ್ಲಾಧಿಕಾರಿಗಳು ತಿಳಿಸಿದರು.

ಸಭೆಯಲ್ಲಿ ಅಪರ ಜಿಲ್ಲಾಧಿಕಾರಿ ಪರಶುರಾಮ ಶಿನ್ನಾಳಕರ್, ಡಿಡಿಪಿಐ ವಿವೇಕಾನಂದ, ಹುನಗುಂದ ಕ್ಷೇತ್ರ ಶಿಕ್ಷಣಾಧಿಕಾರಿ ಜಾಸ್ಮಿನ್ ಕಿಲ್ಲೆದಾರ್ ಸೇರಿದಂತೆ ಇನ್ನಿತರರು ಇದ್ದರು.

# ಶ್ರೀಶೈಲ ಪಾದಯಾತ್ರಿಗಳಿಗೆ ಜಿಲ್ಲೆಯಾದ್ಯಂತ ಭಕ್ತಿಯ ಸೇವೆ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಮಾ.15-ಶುಕ್ರವಾರದಿಂದ ಪಾದಯಾತ್ರೆ ಹೊರಟಿರುವ ಶ್ರೀಶೈಲ ಯಾತ್ರಿಗಳಿಗೆ ಬಾಗಲಕೋಟೆ ಜಿಲ್ಲೆಯಾದ್ಯಂತ ಭಕ್ತಿಯ ಆದರಾತಿಥ್ಯ ನಡೆದಿದೆ.

ಬೆಳಗಾವಿ-ರಾಯಚೂರ ರಸ್ತೆಯಲ್ಲಿ ಎಲ್ಲೆಡೆ ಸೇವಾ ಟೆಂಟ್‌ಗಳನ್ನು ಹಾಕಲಾಗಿದ್ದು, ಚಹಾ, ಬಿಸ್ಕಿಟ್, ಉಪಹಾರ, ಹಣ್ಣು ಹಂಪಲ, ಶುದ್ಧ ಕುಡಿಯುವ ನೀರು, ಶರಬತ್, ಪಾನಕಾ, ಊಟ, ಮಜ್ಜಿಗೆ, ಕಬ್ಬಿನ ಹಾಲು, ಹಣ್ಣಿನ ಜ್ಯೂಸ್ ಹೀಗೆ ಎಲ್ಲವುಗಳ ಸೇವೆಯನ್ನು ವಿವಿಧ ಸಂಘ ಸಂಸ್ಥೆಗಳು, ಮಹಿಳಾ ಸಂಘಗಳು, ಗೆಳೆಯರ ಬಳಗದವರು ಹಾಗೂ ವೈಯಕ್ತಿಕವಾಗಿಯೂ ಮಾಡಿದ್ದರು.

ಬಾಗಲಕೋಟೆ ನಗರದ ಹೊರವಲಯದ ಶಿರೂರ ಅಗಸಿ ಬಳಿ ಹೈದ್ರಾಬಾದನ ವೆಂಕಟರೆಡ್ಡಿ ಎಂಬವರು ಪ್ರಥಮ ಬಾರಿಗೆ ಪಾದಯಾತ್ರಿಗಳಿಗೆ ಉಪಹಾರ, ಊಟ, ಪೂಜೆಗೆ ಮಲ್ಲಿಕಾರ್ಜುನ ಪ್ರತಿಷ್ಠಾನ, ಹಣ್ಣು ಹಂಪಲ ಸೇವೆ ಮಾಡಿದ್ದರೆ, ಅಥಣಿ ತಾಲೂಕಿನ ಭಕ್ತರೊಬ್ಬರು ಶಿರೂರ ಬಳಿ ತಮ್ಮೂರಿಂದಲೇ ಕಬ್ಬು ತಂದು ಪಾದಯಾತ್ರಿಗಳಿಗೆ ಕಬ್ಬಿನ ಹಾಲು ಮಾಡಿ ಕೊಡುತ್ತಿದ್ದಾರೆ.

ತಾಲೂಕಿನ ಶಿರೂರಿನ ಸದ್ಭಕ್ತರ ಸೇವೆಯಂತೂ ಅನನ್ಯವಾದುದು. ಶುಕ್ರವಾರ ಬೆಳಿಗ್ಗೆಯಿಂದಲೇ ಯಾತ್ರಿಗಳ ಜಳಕಕ್ಕೆ ಬಿಸಿ ನೀರು ಒದಗಿಸುವುದು. ಉಪಹಾರ, ಮಧ್ಯಾಹ್ನ ಆರೋಗ್ಯಕ್ಕೆ ಹಿತವಾದ ಹುರುಳಿ ಸಂಗಟಿ, ರೊಟ್ಟಿ, ಪಲ್ಲೆ, ಮೊಸರು, ಅನ್ನ, ಸಾರಿನ ಊಟದ ಸೇವೆ ಮಾಡಿದ್ದರೆ, ಕಾಲ್ನಡಿಗೆಯಿಂದ ತೊಂದರೆಗೊಳಗಾದ ಯಾತ್ರಿಗಳ ಕಾಲಿಗೆ ಎಣ್ಣೆ ಹಚ್ಚಿ ಮಜ್ಜನ ಮಾಡುವುದು ವಿಶೇಷವಾಗಿದೆ. ಜೊತೆಗೆ ಆರೋಗ್ಯ ತಪಾಸಣೆ, ಅಗತ್ಯ ಮಾತ್ರೆ, ಔಷಧಿ ವಿತರಣೆಯ ಸೇವೆಯನ್ನೂ ಶಿರೂರಿನ ಭಕ್ತರು ಕಳೆದ 21 ವರ್ಷಗಳಿಂದ ಮಾಡುತ್ತ ಬಂದಿದ್ದಾರಂತೆ.

ಬೆಳಗಾವಿ, ಚಿಕ್ಕೋಡಿ, ರಾಯಬಾಗ, ಅಥಣಿ, ಗೋಕಾಕ, ಸವದತ್ತಿ, ಜಮಖಂಡಿ, ರಬಕವಿ ಬನಹಟ್ಟಿ, ಮಹಾಲಿಂಗಪುರ, ಬೀಳಗಿ, ಕಲಾದಗಿ, ಮುಧೋಳ ಹೀಗೆ ಅನೇಕ ಕಡೆಯಿಂದ ಹೊರಟಿರುವ ಪಾದಯಾತ್ರಿಗಳಿಗೆ ಯಾವುದೇ ಕೊರತೆಯಾಗದ ಸೇವೆ ಈ ಮಾರ್ಗದಲ್ಲಿ ದೊರೆಯುತ್ತಿದೆ.

ಇದರ ಜೊತೆಯಲ್ಲಿ ಯಾತ್ರಿಗಳು ವಿಶ್ರಾಂತಿ ಪಡೆಯಲೂ ಸಹ ಅಲ್ಲಲ್ಲಿ ದೊಡ್ಡ ಶಾಮಿಯಾನ ಹಾಕಿ ಮಲಗುವುದಕ್ಕೂ ವ್ಯವಸ್ಥೆ ಮಾಡಲಾಗಿದೆ.

ಶಿರೂರಿನಿಂದ ಕಮತಗಿ ಕ್ರಾಸ್ ವರೆಗೆ ಹೊಲಗಳಲ್ಲಿ ಗಿಡಗಳ ನೆರಳಿನಲ್ಲೂ ವಿಶ್ರಾಂತಿ ಪಡೆದು ಪಾದಯಾತ್ರಿಗಳು ಮಧ್ಯಾಹ್ನ 4 ಗಂಟೆ ಹೊತ್ತಿಗೆ ತಮ್ಮ ಪ್ರಯಾಣ ಬೆಳೆಸುತ್ತಿದ್ದಾರೆ.

## ಯಾವುದೇ ವಿಶ್ವವಿದ್ಯಾಲಯಗಳನ್ನು ಮುಚ್ಚುವುದಿಲ್ಲ : ಸಿಎಂ ಸಿದ್ದರಾಮಯ್ಯ ಸ್ಪಷ್ಟನೆ

ಮಲ್ಲಮ್ಮ ನುಡಿ ವಾರ್ತೆ

ಬೆಂಗಳೂರು,ಮಾ.15-ರಾಜ್ಯದಲ್ಲಿ ಯಾವ ವಿಶ್ವವಿದ್ಯಾಲಯಗಳನ್ನು ಮುಚ್ಚುವುದಿಲ್ಲ.ಹೊಸ ವಿಶ್ವವಿದ್ಯಾಲಯಗಳನ್ನು ಮುಂದುವರೆಸಬೇಕೋ ಬೇಡವೋ ಎಂಬ ಬಗ್ಗೆ ಅಧ್ಯಯನ ನಡೆಸಲು ಸಚಿವ ಸಂಪುಟ ಉಪ ಸಮಿತಿ ರಚಿಸಲಾಗಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಸ್ಪಷ್ಟಪಡಿಸಿದ್ದಾರೆ. ಬಿಜೆಪಿ ಶಾಸಕರು ನೀಡಿದ್ದ ನಿಲುವಳಿ ಸೂಚನೆಯ ಕುರಿತು ವಿಧಾನಸಭೆಯ ಪ್ರಶ್ನೋತ್ತರದ ಕಲಾಪದ ಬಳಿಕ ಪ್ರಸ್ತಾಪಿಸಿದಾಗ, ಇದು ಬಜೆಟ್ ಅಧಿವೇಶನ. ಈ ಹಂತದಲ್ಲಿ ಪ್ರತಿ ದಿನ ಒಂದೊಂದು ನಿಲುವಳಿ ಸೂಚನೆ ಹಿಡಿದು ಬಂದರೆ ಕಲಾಪ ಹೇಗೆ ನಡೆಸುವುದು. ಬಜೆಟ್ ಮೇಲೆ ಚರ್ಚೆ ಮಾಡುವಾಗಲೇ ಎಲ್ಲಾ ವಿಚಾರಗಳನ್ನು ಪ್ರಸ್ತಾಪಿಸಬಹುದಲ್ಲವೇ ಎಂದು ಸಭಾಧ್ಯಕ್ಷರು ಹೇಳಿದರು.

ಇದು ತುರ್ತು ವಿಚಾರ ಅಲ್ಲ. ಆದರೂ ನಿಲುವಳಿ ಸೂಚನೆಯ ಅಡಿ ಚರ್ಚೆಗೆ ಅವಕಾಶ ಇಲ್ಲ. ಬಜೆಟ್ ಮೇಲೆ ಮಾತನಾಡುವಾಗ ಪ್ರಸ್ತಾಪಿಸಲಿ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಹೇಳಿದರು. ಕೆಪಿಎಸ್‌ಸಿ ವಿಚಾರ ಚರ್ಚೆಗೆ ಅವಕಾಶ ನೀಡಿದಂತೆ ವಿಶ್ವವಿದ್ಯಾಲಯಗಳ ವಿಚಾರ ಪ್ರಸ್ತಾಪಕ್ಕೂ ಸಮಯ ಕೊಡಿ ಎಂದು ವಿರೋಧ ಪಕ್ಷದ ನಾಯಕ ಆರ್.ಅಶೋಕ್ ಸಲಹೆ ನೀಡಿದರು. ಸಾರ್ವಜನಿಕ ವಿಚಾರವಾಗಿ ನಿಯಮ 69ರಡಿ ಚರ್ಚೆಗೆ ಅವಕಾಶ ಮಾಡಿಕೊಡಿ ಎಂದು ಮನವಿ ಮಾಡಿಕೊಟ್ಟರು. ಅದಕ್ಕೆ ಸಭಾಧ್ಯಕ್ಷರು ಸಹಮತ ವ್ಯಕ್ತಪಡಿಸಿದರು. ಆದರೂ ಡಾ.ಸಿ.ಎನ್. ಅಶ್ವಥ್ ನಾರಾಯಣ್, ಪ್ರತಿಯೊಬ್ಬರ ಜೀವನದಲ್ಲೂ ಶಿಕ್ಷಣ ಅತ್ಯಂತ ಮಹತ್ವದ್ದು, ವಿಶ್ವವಿದ್ಯಾಲಯಗಳನ್ನು ಮುಚ್ಚುವ ಮೂಲಕ ಆತಂಕ ನಿರ್ಮಾಣ ಮಾಡಲಾಗುತ್ತಿದೆ ಎಂದು ದೂರಿದರು.


ಆಗ ಮುಖ್ಯಮಂತ್ರಿಯವರು ವಿಶ್ವವಿದ್ಯಾಲಯಗಳನ್ನು ಮುಚ್ಚುವುದಿಲ್ಲ ಎಂದು ಸ್ಪಷ್ಟನೀಡಿದರು. ಆರ್ಥಿಕ ಕಾರಣಗಳಿಗಾಗಿ ಸರ್ಕಾರ ನಿರ್ಧಾರ ತೆಗೆದುಕೊಳ್ಳಲು ಮುಂದಾಗಿದೆ ಎಂದು ಅಶ್ವಥನಾರಾಯಣ ಟೀಕಿಸಿದಾಗ, ಉನ್ನತ ಶಿಕ್ಷಣ ಸಚಿವ ಡಾ.ಎಂ.ಸಿ.ಸುಧಾಕರ್ ವಿರೋಧ ವ್ಯಕ್ತಪಡಿಸಿದರು. ನಿಯಮ 69ರಡಿ ಚರ್ಚೆಗೆ ಅವಕಾಶ ಮಾಡಿಕೊಟ್ಟಾಗಿಯೂ ಈಗ ಪ್ರಸ್ತಾಪ ಮಾಡುತ್ತಿರುವುದೇಕೆ ಎಂದು ಸಭಾಧ್ಯಕ್ಷರು ಪ್ರಶ್ನಿಸಿದರು.

ಅಶ್ವಥ ನಾರಾಯಣ, ದಂತ ವೈದ್ಯರು ಅವರಿಗೆ ಹಲ್ಲು ಕೀಳುವುದಷ್ಟೆ ಗೊತ್ತು ಜೋಡಿಸುವುದು ಗೊತ್ತಿಲ್ಲ. ಇಲ್ಲಿ ಚರ್ಚೆಯಾಗುವ ಮುನ್ನವೇ ವಿಶ್ವವಿದ್ಯಾಲಯಗಳನ್ನು ಮುಚ್ಚಿಬಿಟ್ಟರೆ ಎಂಬ ಆತಂಕ ಅವರನ್ನು ಕಾಡುತ್ತಿದೆ ಎಂದರು. ಮಧ್ಯ ಪ್ರವೇಶಿಸಿದ ಮುಖ್ಯಮಂತ್ರಿಯವರು, ವಿಶ್ವವಿದ್ಯಾಲಯಗಳನ್ನು ಮುಂದುವರೆಸಬೇಕೆ, ಬೇಡವೇ ಎಂಬ ಬಗ್ಗೆ ಅಧ್ಯಯನ ನಡೆಸಲು ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ನೇತೃತ್ವದಲ್ಲಿ ಸಚಿವ ಸಂಪುಟ ಉಪಸಮಿತಿ ರಚಿಸಲಾಗಿದೆ. ಅವರು ಇನ್ನೂ ವರದಿ ನೀಡಿಲ್ಲ. ಈ ಹಂತದಲ್ಲಿ ಚರ್ಚೆ ಮಾಡುವುದು ಅವಧಿ ಪೂರ್ವವಾಗುತ್ತದೆ ಎಂದರು.

ಆರ್.ಅಶೋಕ್, ಈ ವಿಷಯವಾಗಿ ಉಪಮುಖ್ಯಮಂತ್ರಿಯವರು, ಉನ್ನತ ಶಿಕ್ಷಣ ಸಚಿವರು ಹಾಗೂ ಮುಖ್ಯಮಂತ್ರಿಯವರು ಬೇರೆ ಬೇರೆ ರೀತಿಯ ಹೇಳಿಕೆಗಳನ್ನು ನೀಡುತ್ತಿದ್ದಾರೆ. ಇದು ನಮಗೆ ಆತಂಕ ಮೂಡಿಸಿದೆ. ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ವಿಶ್ವವಿದ್ಯಾಲಯ ಮುಚ್ಚಲು ತೀರ್ಮಾನಿಸಲಾಗಿದೆ ಎಂದು ಪತ್ರಿಕಾ ಹೇಳಿಕೆ ನೀಡಿದ್ದಾರೆ.

ಬಾಗಿಲು ಹಾಕುತ್ತೆವೆ ಬೀಗ ಹಾಕಲ್ಲ ಎಂಬರ್ಥದಲ್ಲಿ ಮುಖ್ಯಮಂತ್ರಿ ಮಾತನಾಡುತ್ತಿದ್ದಾರೆ ಎಂದು ಟೀಕಿಸಿದರು.

# ಜಿಲ್ಲಾಮಟ್ಟದ ಬೃಹತ್ ಆರೋಗ್ಯ ಮೇಳ: ದಾಖಲೆಯ ಪ್ರಮಾಣದಲ್ಲಿ ಸೇರಿದ ಜನತೆ



ಮಲ್ಲಮ್ಮ ನುಡಿ ವಾರ್ತೆ

ರಾಯಚೂರು ಮಾ.15-ಜಿಲ್ಲೆಯ ಮಾನವಿಯ ಬಾಷುಮಿಯಾ ಸಾಹುಕಾರ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನಲ್ಲಿ ಮಾರ್ಚ 15ರಂದು ನಡೆದ ಜಿಲ್ಲಾ ಮಟ್ಟದ ಆರೋಗ್ಯ ಮೇಳದಲ್ಲಿ ಅಕ್ಷರಶಃ ಬೃಹತ್ ಪ್ರಮಾಣದಲ್ಲಿ ಸಾರ್ವಜನಿಕರು ಭಾಗಿಯಾಗಿದ್ದು ಕಂಡು ಬಂದಿತು. ಕಾರ್ಯಕ್ರಮ ಹಿನ್ನೆಲೆಯಲ್ಲಿ ಮಾನವಿ, ನೀರಮಾನವಿ, ನಂದ್ಯಾಳ, ಸಂಗಾಪುರ, ಹರವಿ, ನಸಲಾಪುರ, ಯರಮಲದೊಡ್ಡಿ, ಗುಡದಿನ್ನಿ, ಕಡದಿನ್ನಿ, ಬಳ್ಳಟಗಿ, ಆಲದಾಳ, ಚಿಕ್ಕ ಕೊಟೆನೆಕಲ್, ಭೋಗಾವತಿ, ಕಘಗಲ್, ನಲದಗುಡ್ಡ, ನಳ್ಳಿನಮಡಗ, ಕೋಟ್ನೆಕಲ್, ಅಮರೇಶ್ವರ ಕ್ಯಾಂಪ್ ಸೇರಿದಂತೆ ಸುತ್ತಲಿನ ನಾನಾ ಗ್ರಾಮಸ್ಥರು ಬೆಳಗ್ಗೆಯಿಂದಲೇ ಮಾನವಿ ಪಟ್ಟಣದ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನತ್ತ ತಂಡೋಪತಂಡವಾಗಿ ಆಗಮಿಸುತ್ತಿದ್ದ ದೃಶ್ಯಗಳು ಸಾಮಾನ್ಯವಾಗಿತ್ತು. ಬೆಳಗಿನ 10.30ರ ಸುಮಾರಿಗೆ ಕಾಲೇಜಿನ ಆವರಣದಲ್ಲಿ ಜನಸ್ತೋಮವೇ ಕಂಡು ಬಂದಿತು. ಜಿಲ್ಲಾಧಿಕಾರಿಗಳಾದ ನಿತೀಶ್ ಕೆ ಮತ್ತು ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯ ನಿರ್ವಹಣಾಧಿಕಾರಿ ರಾಹುಲ್ ಪಾಂಡ್ವೆ ಅವರ ನಿರ್ದೇಶನದಂತೆ ಆರೋಗ್ಯ ಮೇಳವನ್ನು ಅಚ್ಚುಕಟ್ಟಾಗಿ ನಡೆಸಲಾಯಿತು.

ಜಿಲ್ಲಾ ಆರೋಗ್ಯ ಇಲಾಖೆಯ ಅಧಿಕಾರಿ ಡಾ.ಸುರೇಂದ್ರ ಬಾಬು, ರಿಮ್ಸ್ ನಿರ್ದೇಶಕರಾದ ಡಾ.ರಮೇಶ, ಮಾನವಿ ತಾಲೂಕು ಆರೋಗ್ಯ ಅಧಿಕಾರಿ ಡಾ.ಶರಣಬಸವರಾಜ ಅವರ ಮಾರ್ಗದರ್ಶನದಲ್ಲಿ ಕಾರ್ಯಕ್ರಮವನ್ನು ಅಚ್ಚುಕಟ್ಟಾಗಿ ಏರ್ಪಾಡು ಮಾಡಲಾಗಿತ್ತು.

ಅಲ್ಲಲ್ಲಿ ಮಳಿಗೆಗಳು: ಕಾಲೇಜಿನ ಪ್ರವೇಶದ್ವಾರದ ಬಳಿಯಲ್ಲಿ ಹೆಸರು ನೋಂದಣಿಗೆ ಅವಕಾಶ ಕಲ್ಪಿಸಲಾಗಿತ್ತು.

ಸಂಜೆ 5.30 ಗಂಟೆಯ ವೇಳೆಗೆ 9182 ಸಾವಿರ ಜನರು ನೋಂದಣಿ ಮಾಡಿದ್ದರು. ಹೆಸರು ನೋಂದಾಯಿಸಿದ ನಂತರ ಚೀಟಿ ಪಡೆದ ರೋಗಿಗಳು ಬಿಪಿ, ಸುಗರ್ ತಪಾಸಣೆ ನಂತರ ವೈದ್ಯರ ಬಳಿ ತೆರಳಿ ಚಿಕಿತ್ಸೆ ಪಡೆದುಕೊಳ್ಳಲು ವ್ಯವಸ್ಥೆ ಮಾಡಲಾಗಿತ್ತು.

ಬ್ಲಾಕ್ ವಾರು ಮಳಿಗೆಗಳು: ಎ.ಬ್ಲಾಕನಲ್ಲಿ ನೋಂದಣಿಗೆ, ಬಿ.ಬ್ಲಾಕನಲ್ಲಿ ತಪಾಸಣೆಗೆ ಏರ್ಪಾಡು ಮಾಡಲಾಗಿತ್ತು. ಸಿ.ಬ್ಲಾಕನಲ್ಲಿ ವೈದ್ಯಕೀಯ ವಿಭಾಗ, ಹೃದ್ರೋಗ ತಪಾಸಣಾ ವಿಭಾಗ, ನರರೋಗ ತಜ್ಞ ವಿಭಾಗ, ಮೂತ್ರ ಪಿಂಡ ವಿಭಾಗ, ಕ್ಯಾಸ್ಟ್ರೋ ಇಂಟ್ರೋಲಾಜಿ ವಿಭಾಗ, ಅಂಕೋಲಾಜಿ, ಮಾನಸಿಕ ರೋಗ ತಜ್ಞ ವಿಭಾಗ, ಕರ್ನಾಟಕ ಮೆದುಳಿನ ಅಸರೋಗ್ಯ ಉಪಕ್ರಮ ವಿಭಾಗ, ಮಕ್ಕಳ ತಜ್ಞ ವಿಭಾಗ ಮತ್ತು ಚರ್ಮ ರೋಗ ತಜ್ಞ ವಿಭಾಗದಡಿ ರೋಗಿಗಳಿಗೆ ಚಿಕಿತ್ಸೆ ನೀಡಲಾಯಿತು. ಅದೇ ರೀತಿ ಡಿ ಬ್ಲಾಕನಲ್ಲಿ ಶಸ್ತ್ರಚಿಕಿತ್ಸಾ ತಜ್ಞ ವಿಭಾಗ, ಕಿವಿ ಮೂಗು ಗಂಟಲು ವಿಭಾಗ, ನೇತ್ರ ತಜ್ಞ ವಿಭಾಗ, ಎಲುಬು ಕೀಲು ತಜ್ಞ ವಿಭಾಗ, ದಂತ ತಜ್ಞ ವಿಭಾಗ, ಭಾರತೀಯ ಆಯುಷ್ ವೈದ್ಯ ವಿಭಾಗ ಮತ್ತು ಯೋಗ ವಿಭಾಗಕ್ಕೆ ವ್ಯವಸ್ಥೆ ಮಾಡಲಾಗಿತ್ತು.

ಸಚಿವರಿಂದ ವೀಕ್ಷಣೆ:

ಆರೋಗ್ಯ ಸಚಿವರಾದ ದಿನೇಶ್ ಗುಂಡೂರಾವ್, ಎನ್ ಎಸ್ ಬೋಸರಾಜು, ಸಂಸದರಾದ ಕುಮಾರ ನಾಯಕ, ಶಾಸಕರಾದ ಹಂಪಯ್ಯ ನಾಯಕ ಅವರು ಬೆಳಗ್ಗೆ ಮಾನ್ವಿ ಪಟ್ಟಣಕ್ಕೆ ಆಗಮಿಸಿ ಬೃಹತ್ ಆರೋಗ್ಯ ಮೇಳದ ಸ್ಥಳಕ್ಕೆ ಆಗಮಿಸಿ ಕಾರ್ಯಕ್ರಮದ ವೀಕ್ಷಣೆ ನಡೆಸಿದರು. ಇದೆ ವೇಳೆ ವಿವಿಧ ವಿಭಾಗಗಳ 30 ಕೌಂಟರಗಳ ವೀಕ್ಷಣೆ ನಡೆಸಿದರು.

**ಊಟದ ವ್ಯವಸ್ಥೆ:** ಆರೋಗ್ಯ ಮೇಳದ ಸ್ಥಳದಲ್ಲಿ ಕೌಂಟರ್ ಅಳವಡಿಸಿ ಊಟದ ವ್ಯವಸ್ಥೆ ಮಾಡಲಾಗಿತ್ತು. ಗೋದಿ ಹುಗ್ಗಿ, ಅನ್ನ, ಸಾಂಬಾರು ನೀಡಲಾಯಿತು. ಅಲ್ಲಲ್ಲಿ ಕುಡಿಯುವ ನೀರಿನ ಟ್ಯಾಂಕರಗಳನ್ನು ನಿಲ್ಲಿಸಲಾಗಿತ್ತು.

ಎಕ್ಸರೆ, ಸ್ಕ್ಯಾನಿಂಗ್ ವ್ಯವಸ್ಥೆ: ಆಯಾ ವಿಭಾಗಗಳಲ್ಲಿ ತಪಾಸಣೆ ಬಳಿಕ ಎಕ್ಸರೆ, ಸ್ಕ್ಯಾನಿಂಗ್ ಮಾಡಿಸಲು ಸಹ ಸ್ಥಳದಲ್ಲೇ ವ್ಯವಸ್ಥೆ ಮಾಡಲಾಗಿತ್ತು. ಇದಕ್ಕಾಗಿ ಮೊಬೈಲ್ ವೈದ್ಯಕೀಯ ಘಟಕದ ವಾಹನಗಳನ್ನು ನಿಲ್ಲಿಸಲಾಗಿತ್ತು.

ಹಲವು ಮಾಹಿತಿಯ ಆರೋಗ್ಯ ಮಳಿಗೆ: ಕಾಲೇಜಿನ ಆವರಣದಲ್ಲಿ ಜಿಲ್ಲಾ ಆರೋಗ್ಯ ಇಲಾಖೆಯಿಂದ ಮಳಿಗೆ ಅಳವಡಿಸಿ, ನಮ್ಮ ಕ್ಲಿನಿಕ್, ಸುರಕ್ಷಿತ ಮಾತೃತ್ವ ಆಶ್ವಾಸನ, ಶುಚಿ ಯೋಜನೆ, ರಾಷ್ಟ್ರೀಯ ಕಿಶೋರ ಸ್ವಾಸ್ಥ್ಯ ಕಾರ್ಯಕ್ರಮ ಸೇರಿದಂತೆ ನಾನಾ ಯೋಜನೆಗಳ ಮಾಹಿತಿ ನೀಡಲಾಯಿತು.

ಅಂಗನವಾಡಿಯ ವಿಶೇಷ ಮಳಿಗೆ: ಮಾನವಿ ತಾಲೂಕಿನ 50 ಅಂಗನವಾಡಿ ಕಾರ್ಯಕತೆಯರು ಸೇರಿ ವಿಶೇಷ ಮಳಿಗೆ ಹಾಕಿದ್ದರು. ಪೌಷ್ಠಿಕ ಆಹಾರದ ವಿವರ, ಶಾಲಾ ಸಿದ್ದತೆಯ ಆಯಾಮಗಳು, ಸಂಪೂರ್ಣತಾ ಅಭಿಯಾನ ಕಾರ್ಯ, ಬೇಟಿ ಬಚಾವೋ ಬೇಟಿ ಪಡಾವೋ, ಮಿಷನ್ ವಾತ್ಸಲ್ಯ ಕಾರ್ಯಕ್ರಮಗಳ ಮಾಹಿತಿ ಫಲಕಗಳನ್ನು ಅಳವಡಿಸಿ ಮಾಹಿತಿ ನೀಡಿದರು.

ಜನತೆಗೆ ಅನುಕೂಲವಾಯ್ತು: ಮಾನ್ವಿಯಲ್ಲಿ ನಡೆದ ಆರೋಗ್ಯ ಮೇಳದಿಂದ ಮಾನವಿ ಪಟ್ಟಣ ಸೇರಿದಂತೆ ಸುತ್ತಲಿನ ಗ್ರಾಮದ ಅಸಂಖ್ಯೆ ಸಾರ್ವಜನಿಕರಿಗೆ ಸಾಕಷ್ಟು ಅನುಕೂಲವಾಯಿತು.

ಮಾನ್ಯ ಸಚಿವರು, ಸಂಸದರು, ಶಾಸಕರು, ಜಿಲ್ಲಾಧಿಕಾರಿಗಳು, ಜಿಲ್ಲಾ ಪಂಚಾಯತ್ ಸಿಇಓ ಹಾಗೂ ಆರೋಗ್ಯ ಸೇರಿದಂತೆ ಇನ್ನೀತರ ಇಲಾಖೆಯ ಅಧಿಕಾರಿಗಳಿಗೆ ಅಭಿನಂದನೆ ಹೇಳುತ್ತೇವೆ ಎಂದು ಭೋಗಾವತಿ ಪಂಚಾಯಿತಿಯ ಎನ್ ಆರ್ ಎಲ್ ಎಂನ ಶಿವಲೀಲಾ ಮತ್ತು ಎಲ್ ಸಿ ಆರ್ ಪಿ ಭೂಮಿಕಾ ಅವರು ಅಭಿಪ್ರಾಯಪಟ್ಟರು.

ರಾಷ್ಟ್ರೀಯ ಆರೋಗ್ಯ ಅಭಿಯಾನ, ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಆರೋಗ್ಯ ಇಲಾಖೆ ಮತ್ತು ರಾಯಚೂರ ವೈದ್ಯಕೀಯ ವಿಜ್ಞಾನಗಳ ಸಂಸ್ಥೆ ಮತ್ತು ಸಂಘ ಸಂಸ್ಥೆಗಳು, ಆಸ್ಪತ್ರೆಗಳು ಹಾಗೂ ವಿವಿಧ ಇಲಾಖೆಗಳ ಸಹಯೋಗದಲ್ಲಿ ಕಾರ್ಯಕ್ರಮ ಆಯೋಜನೆ ಮಾಡಲಾಗಿತ್ತು.

## ಮಾ.21ರಿಂದ ವಿಶೇಷ ಬಸ್ಸುಗಳ ಕಾರ್ಯಾಚರಣೆ

ರಾಯಚೂರು ಮಾ.15 – ಮಾ.21ರಿಂದ ಮಾ.31ರವರೆಗೆ ಯುಗಾದಿ ಹಬ್ಬದ ಪ್ರಯುಕ್ತ ಶ್ರೀಶೈಲಂ ಶ್ರೀಮಲ್ಲಿಕಾರ್ಜುನ ಜಾತ್ರೆಗೆ ರಾಯಚೂರು ವಿಭಾಗದ ವ್ಯಾಪ್ತಿಯಲ್ಲಿ ಬರುವ ರಾಯಚೂರು, ಲಿಂಗಸೂಗುರು, ಸಿಂಧನೂರು, ಮಾನವಿ, ದೇವದುರ್ಗ, ಮಸ್ಕಿ ಘಟಕಗಳಿಂದ 280 ವಿಶೇಷ ಬಸ್ಸುಗಳ ಕಾರ್ಯಾಚರಣೆಯನ್ನು ಆರಂಭಿಸಲಾಗಿದೆ.

ಸದರಿ ಬಸ್ಸುಗಳು ಮಾ.21ರಿಂದ ಮಾ.31ರವರೆಗೆ ರಾಯಚೂರು-ಕರ್ನೂಲ್-ಶ್ರೀಶೈಲಂ, ಸಿಂಧನೂರು-ಆದೋನಿ-ಶ್ರೀಶೈಲಂ, ಸಿಂಧನೂರು-ರಾಯಚೂರು-ಕರ್ನೂಲ್-ಶ್ರೀಶೈಲಂ, ಲಿಂಗಸೂಗುರು-ಮಸ್ಕಿ-ಸಿಂಧನೂರು-ಆದೋನಿ-ಶ್ರೀಶೈಲಂ, ಮಾನವಿ-ರಾಯಚೂರು-ಕರ್ನೂಲ್-ಶ್ರೀಶೈಲಂ, ಮಾನವಿ-ಸಿಂಧನೂರು-ಆದೋನಿ-ಶ್ರೀಶೈಲಂ, ಮಸ್ಕಿ-ರಾಯಚೂರು-ಕರ್ನೂಲ್-ಶ್ರೀಶೈಲಂ, ಮಸ್ಕಿ-ಸಿಂಧನೂರು-ಆದೋನಿ-ಶ್ರೀಶೈಲಂ, ದೇವದುರ್ಗ-ರಾಯಚೂರು-ಕರ್ನೂಲ್-ಶ್ರೀಶೈಲಂ ಮಾರ್ಗದಲ್ಲಿ ಕಾರ್ಯಾಚರಣೆಯನ್ನು ಮಾಡಲಿದೆ.

50 ಪ್ರಯಾಣಿಕರು ಲಭ್ಯವಿದ್ದಲ್ಲಿ ಅವರ ಸ್ವಸ್ಥಳದಿಂದ ನೇರವಾಗಿ ಶ್ರೀಶೈಲಂಗೆ ಬಸ್ಸು ವ್ಯವಸ್ಥೆಯನ್ನು ಒದಗಿಸುವುದಕ್ಕೆ ಕ್ರಮವನ್ನು ತೆಗೆದುಕೊಳ್ಳಲಾಗುತ್ತಿದ್ದು, ಪ್ರಯಾಣಿಕರು ಮಹಾನಂದಿಗೆ ಹೋಗುವದಕ್ಕೆ ಇಷ್ಟಪಟ್ಟಲ್ಲಿ ಅಲ್ಲಿಗೆ ಕರೆದುಕೊಂಡು ಹೋಗಿ ಬರಲಾಗುತ್ತದೆ.

ಹೆಚ್ಚಿನ ಮಾಹಿತಿಗಾಗಿ ರಾಯಚೂರು ಘಟಕ 1ರ ದೂರವಾಣಿ ಸಂಖ್ಯೆ; 7760992363, ರಾಯಚೂರು ಘಟಕ 2ರ ದೂರವಾಣಿ ಸಂಖ್ಯೆ: 7760992364, ರಾಯಚೂರು ಘಟಕ 3ರ ದೂರವಾಣಿ ಸಂಖ್ಯೆ: 7619351087, ಲಿಂಗಸೂಗುರು; 7760992365, ಸಿಂಧನೂರು; 7760992366, ಮಾನವಿ; 7760992367, ದೇವದುರ್ಗ; 7760992368, ಮಸ್ಕಿ; 7760992361, ಕೇಂದ್ರ ಬಸ್ ನಿಲ್ದಾಣ ರಾಯಚೂರು 7760992370, ವಿಭಾಗೀಯ ಸಂಚಾರ ಅಧಿಕಾರಿ 7760992352ಗೆ ಸಂಪರ್ಕ ಮಾಡಬಹುದಾಗಿದೆ ಎಂದು ಕಲ್ಯಾಣ ಕರ್ನಾಟಕ ರಸ್ತೆ ಸಾರಿಗೆ ನಿಗಮದ ನಿಯಂತ್ರಣಾಧಿಕಾರಿಗಳಾದ ಚಂದ್ರಶೇಖರ ಎಂ.ಎಸ್. ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಕಲಬುರಗಿ ಮಹಾನಗರ ಪಾಲಿಕೆ ವಿವಿಧ ಯೋಜನೆಗಳಡಿ ಸೌಲಭ್ಯ ಪಡೆಯಲು ಅರ್ಜಿ ಆಹ್ವಾನ

ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ,ಮಾ.15.(ಕ.ವಾ.)-ಕಲಬುರಗಿ ಮಹಾನಗರ ಪಾಲಿಕೆಯ ಶೇ.24.10 ಅನುಮೋದಿತ ಕ್ರೀಯಾ ಯೋಜನೆ 2012-13 ಮತ್ತು 2014-15ನೇ ಸಾಲಿನ ಪಾಲಿಕೆ ನಿಧಿ ಹಾಗೂ 2015-16 ಎಸ್.ಎಫ್.ಸಿ. ಮತ್ತು 2019-20ನೇ ಸಾಲಿನ ಪಾಲಿಕೆ ಪ.ಕ್ರೀಯಾ ಯೋಜನೆಯಡಿ ನಿಗದಿಪಡಿಸಿದ ಹಾಗೂ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಜನರ ಕಲ್ಯಾಣ ಕಾರ್ಯಕ್ರಮಗಳಿಗೆ ಈ ಕೆಳಕಂಡ ಯೋಜನೆಗಳಡಿ ಸೌಲಭ್ಯ ಪಡೆಯಲು 2024-25ನೇ ಸಾಲಿಗಾಗಿ ಅರ್ಹ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ ಎಂದು ಕಲಬುರಗಿ ಮಹಾನಗರ ಪಾಲಿಕೆಯ ಆಯುಕ್ತರು ತಿಳಿಸಿದ್ದಾರೆ. 2012-13 ಮತ್ತು 2014-15ನೇ ಸಾಲಿನ ಪಾಲಿಕೆ ನಿಧಿ ಯೋಜನೆಯಡಿ ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡದ ಸಮುದಾಯ ಭವನಗಳಿಗೆ ಆಟದ ಸಾಮಗ್ರಿಗಳು ಒದಗಿಸುವುದು, 2015-16ನೇ ಸಾಲಿನ ಎಸ್.ಎಫ್.ಸಿ. ಕ್ರಿಯಾ ಯೋಜನೆಯಡಿ ಪರಿಶಿಷ್ಟ ಜಾತಿ /ಪರಿಶಿಷ್ಟ ಪಂಗಡದ ಜನರಿಗೆ ಬ್ಯಾಂಡಸೆಟ್ ವಿತರಿಸುವುದು ಹಾಗೂ 2019-20ನೇ ಸಾಲಿನ ಪಾಲಿಕೆ ಪ.ಕ್ರೀ. ಯೋಜನೆಯಡಿ ಪರಿಶಿಷ್ಟ ಪಂಗಡದ ಜನರಿಗೆ ಲಘುವಾಹನ ತರಬೇತಿ ನೀಡಲಾಗುತ್ತದೆ. ಅರ್ಹ ಅಭ್ಯರ್ಥಿಗಳು ನಿಗದಿತ ಅರ್ಜಿ ನಮೂನೆಯನ್ನು ಮಹಾನಗರ ಪಾಲಿಕೆಯ ಶೇ. 24.10 ಮತ್ತು ಆವಕ ಶಾಖೆಯಿಂದ ಕಚೇರಿ ಸಮಯದಲ್ಲಿ ಪಡೆದು ಭರ್ತಿ ಮಾಡಿ ಅವಶ್ಯಕ ದಾಖಲೆಗಳೊಂದಿಗೆ ಕಡ್ಡಾಯವಾಗಿ ದೃಢೀಕರಣದೊಂದಿಗೆ 2025ರ ಏಪ್ರಿಲ್ 17ರ ಸಂಜೆ 5.30 ಗಂಟೆಯೊಳಗಾಗಿ ಕಲಬುರಗಿ ಮಹಾನಗರ ಪಾಲಿಕೆಯ ಕಚೇರಿಯಲ್ಲಿ ಅರ್ಜಿ ಸಲ್ಲಿಸಬೇಕು.

ಹೆಚ್ಚಿನ ಮಾಹಿತಿಗಾಗಿ ಕಲಬುರಗಿ ಮಹಾನಗರ ಪಾಲಿಕೆ ಶೇ. 24.10 ಶಾಖೆಯನ್ನು ಹಾಗೂ ೪ಣಣಠಿ://ತಿತಿತಿ. ಇಚಿಟಚಿಭಣಡಿಚಿರುಥಿಣಥಿ. ಟಡಿಥಿ.ರಂತ ವೆಬ್‌ಸೈಟ್‌ನ್ನು ಸಂಪರ್ಕಿಸಬೇಕು. ಈ ಮೊದಲು ಮಹಾನಗರ ಪಾಲಿಕೆಯಿಂದ ಅಥವಾ ಸರ್ಕಾರದ ವಿವಿಧ ಯೋಜನೆಯಡಿ ಸೌಲಭ್ಯ ಪಡೆದವರು ಪುನಃ ಸೌಲಭ್ಯಕ್ಕೆ ಅರ್ಜಿ ಸಲ್ಲಿಸುವಂತಿಲ್ಲ ಎಂದು ಅವರು ತಿಳಿಸಿದ್ದಾರೆ.



ಚಿಟಗುಪ್ಪ:- ಶ್ರೀ ಗುರು ಅಯ್ಯಪ್ಪ ಸ್ವಾಮಿ ಚಾಂಗಲೇರಾ ಮತ್ತು ಚಿಟಗುಪ್ಪ ಮಠದ ಕಿರಿಯ ಪೀಠಾಧಿಪತಿಗಳಾದ ಶ್ರೀ ಷ.ಬ್ರ. ಮರುಳಾರಾಧ್ಯ ಶಿವಾಚಾರ್ಯ ದಿವ್ಯಸಾನಿಧ್ಯದಲ್ಲಿ ಪಟ್ಟಣದ ಶ್ರೀ ಅಯ್ಯಪ್ಪ ಮಠದ ಓಣಿಯಲ್ಲಿ ಸಕಲಸದ್ಭಕ್ತರು ಪರಸ್ಪರ ಬಣ್ಣ ಎರೆಚಿಕೊಂಡು ಸಡಗರ ಸಂಭ್ರಮದಿಂದ ಹೋಳಿ ಹಬ್ಬ ಆಚರಿಸಿದರು. (ಮಲ್ಲಮ್ಮ ನುಡಿ ಚಿತ್ರ)

## ಶಾಲೆ, ಅಂಗನವಾಡಿ ಕಟ್ಟಡ ನಿರ್ಮಾಣಕ್ಕೆ ಸಿಎಸ್‌ಆರ್ ನಿಧಿ ಬಳಕೆ

ಮಲ್ಲಮ್ಮ ನುಡಿ ವಾರ್ತೆ

ಬೆಂಗಳೂರು,ಮಾ.15-ಸಿಎಸ್‌ಆರ್ ನಿಧಿಯ ಅನುದಾನವನ್ನು ಶಾಲೆ, ಅಂಗನವಾಡಿ ಕಟ್ಟಡ ಕಾಮಗಾರಿಗಳಿಗೆ ನೀಡುವ ಕುರಿತಂತೆ ಆಲೋಚನೆ ಮಾಡಲಾಗುತ್ತಿದೆ ಎಂದು ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಸಚಿವ ಎಂ.ಬಿ.ಪಾಟೀಲ್ ವಿಧಾನಸಭೆಗೆ ತಿಳಿಸಿದರು. ಪ್ರಶ್ನೋತ್ತರ ವೇಳೆಯಲ್ಲಿ ಜೆಡಿಎಸ್ ಹಿರಿಯ ಶಾಸಕ ಜಿ.ಟಿ.ದೇವೇಗೌಡ ಅವರ ಪ್ರಶ್ನೆಗೆ ಉತ್ತರಿಸಿದ ಸಚಿವರು, ಅಂಗನವಾಡಿ ಕಟ್ಟಡಗಳಿಗೂ ಸಿಎಸ್‌ಆರ್ ಅನುದಾನ ನೀಡುವ ಬಗ್ಗೆ ಸರ್ಕಾರ ಸಕಾರಾತ್ಮಕವಾಗಿದೆ. ಸದ್ಯದಲ್ಲೇ ಈ ಸಂಬಂಧ ಮಾರ್ಗಸೂಚಿ ರೂಪಿಸಲಾಗುವುದು ಎಂದು ಹೇಳಿದರು.

ಸಿಎಸ್‌ಆರ್ ಅನುದಾನವನ್ನು ಆರೋಗ್ಯ, ಶಿಕ್ಷಣ, ಕೌಶಲ್ಯ ತರಬೇತಿ, ಪರಿಸರ ನಿಯಂತ್ರಣ, ನೀರಿನ ಸೌಕರ್ಯ ಇತ್ಯಾದಿಗಳಿಗೆ ಉಪಯೋಗಿಸಲಾಗಿದೆ. ಚಾಮುಂಡೇಶ್ವರಿ ವಿಧಾನ ಸಭಾ ಕ್ಷೇತ್ರದಲ್ಲಿ ಕೆ-ಐಎಡಿಬಿ ವತಿಯಿಂದ 5 ಕೈಗಾರಿಕಾ ಪೆಣಟಿಜಜಿಟಿಜಜರದೇಶಗಳನ್ನು ಅಭಿವೃದ್ಧಿಪಡಿಸಲಾಗಿದ್ದು, 1181 ಕೈಗಾರಿಕೆಗಳಿವೆ ಎಂದು ಅವರು ತಿಳಿಸಿದರು. ಕೇಂದ್ರ ಸರ್ಕಾರದ ಕಂಪನಿ ಕಾಯ್ದೆ 2013ರ ಕಲಂ 135ರ ಮಾರ್ಗಸೂಚಿ ಅಡಿಯಲ್ಲಿ 500 ಕೋಟಿ ರೂ. ಹಾಗೂ ಹೆಚ್ಚಿನ ನಿವ್ವಳ ಮೌಲ್ಯವಿರುವ ಅಥವಾ 1000 ಕೋಟಿ ರೂ ಹಾಗೂ ಹೆಚ್ಚಿನ ವಹಿವಾಟು ಕಂಪನಿಗಳು ಸಿಎಸ್‌ಆರ್ ನಿಧಿ ಹಣ ನೀಡಬೇಕು.

5 ಕೋಟಿ ಹಾಗೂ ಹೆಚ್ಚಿನ ನಿವ್ವಳ ಲಾಭ ಹೊಂದಿರುವ ಉದ್ಯಮಗಳು ಹಿಂದಿನ 3 ವರ್ಷಗಳ ಕನಿಷ್ಠ ಶೇ.2ರಷ್ಟು ಸರಾಸರಿ ನಿವ್ವಳ ಲಾಭಾಂಶವನ್ನು ಸಿಎಸ್‌ಆರ್ ಯೋಜನೆ, ಕಾರ್ಯಕ್ರಮಗಳಿಗೆ ಖರ್ಚು ಮಾಡಬೇಕಾಗಿರುತ್ತದೆ ಎಂದು ಅವರು ಹೇಳಿದರು.

# ಕನ್ನಡದ ಚಿತ್ರನಟ ಧ್ರುವ ಸರ್ಜಾಗೆ ಆಹ್ವಾನ



ಮಲ್ಲಮ್ಮ ನುಡಿ ವಾರ್ತೆ

ಭಾಲ್ಕಿ:ಮಾ.15: ತಾಲೂಕಿನ ಉಚ್ಚಾ ಗ್ರಾಮದಲ್ಲಿ ಇದೇ ಮಾ.30 ಮತ್ತು 31 ರಂದು ನಡೆಯಲಿರುವ ಬೀರಲಿಂಗೇಶ್ವರ ಜಾತ್ರಾ ಮಹೋತ್ಸವಕ್ಕೆ ಕನ್ನಡದ ಉದಯೋನ್ಮುಖ ನಟ ಧ್ರುವ ಸರ್ಜಾ ಅವರನ್ನು ಆಹ್ವಾನಿಸಲಾಗಿದೆ.

ಬೆಂಗಳೂರಿನಲ್ಲಿ ಬೀರಲಿಂಗೇಶ್ವರ ಜಾತ್ರಾ ಮಹೋತ್ಸವ ಸಮಿತಿ ವತಿಯಿಂದ ಶನಿವಾರ ಆಕ್ಷನ್ ಪ್ರೀನ್ಸ್ ಧ್ರುವ ಸರ್ಜಾ ಅವರನ್ನು ಕುರಿ ಉಣ್ಣೆಯ ಕಂಬಳಿ ಹೊದಿಸಿ ಸಂಗೊಳ್ಳಿ ರಾಯಣ್ಣನ ಭಾವಚಿತ್ರ ನೀಡಿ ಸನ್ಮಾನಿಸಿ ಜಾತ್ರಾ ಮಹೋತ್ಸವಕ್ಕೆ ಆಹ್ವಾನ ನೀಡಲಾಯಿತು.

ನಟ ಧ್ರುವ ಸರ್ಜಾ ಅವರು ಬಹುಭಾಷಾ ನಟ ಆಕ್ಷನ್ ಕಿಂಗ್ ಅರ್ಜುನ ಸರ್ಜಾ ಅವರ ಸೋದರಳಿಯ ಆಗಿದ್ದು ಬಹದ್ದೂರ್, ಅದ್ದೂರಿ, ಭರ್ಜರಿ ಸೇರಿದಂತೆ ಮುಂತಾದ ಚಿತ್ರಗಳಲ್ಲಿ ನಾಯಕ ನಟನಾಗಿ ನಟಿಸಿದ್ದಾರೆ. ಪ್ರಸ್ತುತ ಕೆ.ಡಿ ಚಿತ್ರ ಬಿಡುಗಡೆಗೆ ಸಿದ್ಧಗೊಂಡಿದೆ. ಈ ಸಂದರ್ಭದಲ್ಲಿ ಬೀರಲಿಂಗೇಶ್ವರ ಜಾತ್ರಾ ಮಹೋತ್ಸವ ಸಮಿತಿ ಗೌರವಾಧ್ಯಕ್ಷ ಕೆ.ಡಿ.ಗಣೇಶ, ಅಧ್ಯಕ್ಷ ಪ್ರದೀಪ ಬೇಂದ್ರೆ, ಉಪಾಧ್ಯಕ್ಷರಾದ ವಿನಾಯಕ ಮಣಕೂಜಿ, ಬಾಲಾಜಿ ಜಬಾಡೆ, ಅಜಯ ಮೆಟಗೆ, ಪ್ರಧಾನ ಕಾರ್ಯದರ್ಶಿ ಉಮೇಶ ಕಲ್ಲೂರ, ಕಾರ್ಯದರ್ಶಿಗಳಾದ ಸಂಗು ಹಂದಿಕೇರೆ, ಸಂತೋಷ ಮದನಸೂರೆ, ಬೀರಪ್ಪ ಸೇರಿದಂತೆ ಹಲವರು ಇದ್ದರು.

> ಉಚ್ಚಾ ಗ್ರಾಮದಲ್ಲಿ ನಡೆಯಲಿರುವ ಬೀರಲಿಂಗೇಶ್ವರ ಜಾತ್ರಾ ಮಹೋತ್ಸವಕ್ಕೆ ಕನ್ನಡ ಚಿತ್ರರಂಗದ ನಟ ಧ್ರುವ ಸರ್ಜಾ ಅವರನ್ನು ಆಹ್ವಾನಿಸಲಾಗಿದೆ. ಮಾ.31ರಂದು ನಡೆಯುವ ಜಾತ್ರೆ ಕಾರ್ಯಕ್ರಮದಲ್ಲಿ ಅವರು ಭಾಗವಹಿಸಲಿದ್ದಾರೆ.
>
> – ಕೆ.ಡಿ.ಗಣೇಶ
> ಗೌರವಾಧ್ಯಕ್ಷ ಜಾತ್ರಾ ಮಹೋತ್ಸವ ಸಮಿತಿ

# ಬಾಗಲಕೋಟೆ-ಬಣ್ಣದಲ್ಲಿ ಮಿಂದೆದ್ದ ಜನ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಮಾ.15– ಐತಿಹಾಸಿಕ ಬಾಗಲಕೋಟೆ ಹೋಳಿ ಹಬ್ಬದ ಪ್ರಯುಕ್ತ ನಡೆದಿರುವ ಬಣ್ಣದಾಟದ ಎರಡನೇ ದಿನವಾದ ಶನಿವಾರ ಕೋಟೆ ನಗರಿ ಜನ ಸಂಭ್ರಮದಲ್ಲಿ ತೇಲುವಂತೆ ಮಾಡಿತು.

ಯುವಕರು, ಮಹಿಳೆಯರು, ಯುವತಿಯರು, ಪುಟ್ಟಮಕ್ಕಳು ಸೇರಿ ಪರಸ್ಪರ ಬಣ್ಣ ಎರಚಿ ಸಂತಸಪಟ್ಟರು. ಜೊತೆಗೆ ಡಿಜೆಯಲ್ಲಿ ಕೇಳಿಬಂದ ಹಾಡುಗಳಿಗೆ ಸಕತ್ತಾಗಿ ನೃತ್ಯ ಮಾಡಿದ ಯುವಕರು ಬಣ್ಣದಲ್ಲಿ ಮಿಂದೆದ್ದರು. ನಗರದ ಬಸವೇಶ್ವರ ವೃತ್ತದಲ್ಲಿ ನಮ್ಮೂರ ನಮ್ಮ ರಂಗು ತಂಡ ಆಯೋಜಿಸಿದ್ದ ರೇನ್ ಡ್ಯಾನ್ಸನಲ್ಲಿ ಸಾವಿರಾರು ಜನ ಯುವಕ, ಯುವತಿಯರು ಪಾಲ್ಗೊಂಡು ಕುಣಿದು ಕುಪ್ಪಳಿಸಿದರು.

ಮಧ್ಯಾಹ್ನ ಹಳಪೇಟೆ, ಜೈನಪೇಟೆ ಹಾಗೂ ವೆಂಕಟಪೇಟೆಯಿಂದ ಬಂದ ಬಣ್ಣದ ಬಂಡಿಗಳು, ಟ್ರ್ಯಾಕ್ಟರಗಳು ರಂಗಿನಾಟಕ್ಕೆ ಮತ್ತಷ್ಟು ರಂಗು ತಂದವು. ಎದುರುಬದುರಾದ ಗಾಡಿಗಳು ಪರಸ್ಪರ ಬಣ್ಣ ಎರಚಾಟ ನಡೆಸಿದ ದೃಶ್ಯ ಮನಮೋಹಕವಾಗಿತ್ತು.

ಬಸವೇಶ್ವರ ವೃತ್ತದಿಂದ ಕಾಲೇಜುವರೆಗೆ ನಡೆದ ರಂಗಿನಾಟದ ವೈಭವವನ್ನು ರಸ್ತೆಯ ಇಕ್ಕೆಲಗಳಲ್ಲಿ ನಿಂತ ಜನ ಕಣ್ತುಂಬಿಕೊಂಡರು. ಯಾವುದೇ ಗದ್ದಲ ಗಲಾಟೆಯಿಲ್ಲದೇ ಸೌಹಾರ್ದತೆಯಿಂದ ನಡೆದ ಎರಡನೇ ದಿನದ ಬಣ್ಣದಾಟ ಗಮನ ಸೆಳೆಯಿತು.

# ಕೋಟೆ ಊರಲ್ಲಿ ರಣಗಂಬ ಉತ್ಸವ



ಮಲ್ಲಮ್ಮ ನುಡಿ ವಾರ್ತೆ

ಔರಾದ:ಮಾ.15: ತಾಲೂಕಿನ ಕೋಟೆ ಊರು ಎಂಬ ಖ್ಯಾತಿ ಪಡೆದ ವಡಗಾಂವ(ದೇ) ಗ್ರಾಮದಲ್ಲಿ ಶನಿವಾರ ರಣಗಂಬ ಉತ್ಸವ ಅದ್ದೂರಿಯಾಗಿ ಜರುಗಿತ್ತು. ಈ ರಣಗಂಬ ಎಂಬ ಉತ್ಸವ ತನ್ನದೇ ಆದ ಐತಿಹಾಸಿಕ ಹಿನ್ನೆಲೆ ಹೊಂದಿದೆ. ಪಾಳೇಗಾರಿಕೆ ವಿರುದ್ಧ ವಿಜಯದ ಸಂಕೇತ ಈ ರಣಗಂಬ ಆಚರಿಸಲಾಗುತ್ತಿದೆ.

ಪ್ರತಿವರ್ಷ ಹೋಳಿ ಹಬ್ಬದ ಮರುದಿನ ನಡೆಯುವ ಈ ಉತ್ಸವದಲ್ಲಿ ಗಡಿಭಾಗದ ತೆಲಂಗಾಣ, ಆಂಧ್ರಪ್ರದೇಶ, ಮಹಾರಾಷ್ಟ್ರದ ಅಪಾರ ಸಂಖ್ಯೆ ಭಕ್ತರು ಪಾಲ್ಗೊಂಡು ರಣಗಂಬಕ್ಕೆ ಪೂಜೆ ಸಲ್ಲಿಸಿ ತಮ್ಮ ಇಷ್ಟಾರ್ಥ ಪೂರೈಸಿದರು.

ಈ ಉತ್ಸವ ಜನ ಜಾತ್ರೆ ರೂಪದಲ್ಲಿ ಆಚರಿಸುತ್ತಾರೆ. ಭಕ್ತಿ ಭಾವದಿಂದ ಉತ್ಸವದಲ್ಲಿ ಪಾಲ್ಗೊಂಡು ಹರಕೆ ತೀರಿಸುತ್ತಾರೆ.

ದೇಶಮುಖ ಮನೆತನದ ಬಸವರಾಜ ದೇಶಮುಖ, ಶರಣಬಸಪ್ಪ ದೇಶಮುಖ, ಡಾ. ಉಮಾ ದೇಶಮುಖ, ಸುರೇಖಾ ಬಾಯಿ ದೇಶಮುಖ, ಅಲ್ಲಮ ಪ್ರಭು ದೇಶಮುಖ, ಮಲ್ಲಿಕಾರ್ಜುನ ದೇಶಮುಖ, ಕುಮಾರ ದೇಶಮುಖ ಪೂಜೆ ಸಲ್ಲಿಸಿ ಚಾಲನೆ ನೀಡಿದರು. ಗ್ರಾಮದ ಮುಖಂಡರಾದ ವೀರಪ್ಪ ಖಾನಾಪುರೆ, ಜಗನ್ನಾಥ್ ಪಟ್ನೆ, ಶಂಕ್ರಪ್ಪ ಧರ್ಮಜೆ, ಮಲ್ಲಪ್ಪ ನೇಳಗೆ, ಸಿದ್ದಯ್ಯ ಸ್ವಾಮಿ ಸೇರಿದಂತೆ ಗ್ರಾಮಸ್ಥರು ಉಪಸ್ಥಿತರಿದ್ದರು.

# ರಾಜ್ಯ ವಕ್ಫ್ ಬೋರ್ಡ ಅಧ್ಯಕ್ಷರಾಗಿ ಕಲಬುರಗಿಯ ಸೈಯದ್ ಹುಸೈನಿ ಆಯ್ಕೆ

ಮಲ್ಲಮ್ಮ ನುಡಿ ವಾರ್ತೆ

ಬೆಂಗಳೂರು:ಮಾ.15: ರಾಜ್ಯ ವಕ್ಫ್ ಬೋರ್ಡ್ ನೂತನ ಅಧ್ಯಕ್ಷರ ವಿಚಾರದಲ್ಲಿ ಕಾಂಗ್ರೆಸ್‌ನಲ್ಲಿ ಜಟಾಪಟಿ ನಡೆದು ಕೊನೆಗೆ ಕಲಬುರಗಿಯ ಹಝ್ರತ್ ಖ್ವಾಜಾ ಬಂದಾ ನವಾಝ್ ದರ್ಗಾದ ಸಜ್ಜಾದ ನಶೀನ್ ಸೈಯದ್ ಮುಹಮ್ಮದ್ ಅಲಿ ಹುಸೈನಿ ಅವರು ಆಯ್ಕೆಯಾಗಿದ್ದಾರೆ.

ಮುಹಮ್ಮದ್ ಅಲಿ ಹುಸೈನಿ ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಹಾಗೂ ರಾಜ್ಯ ಸಭಾ ಸದಸ್ಯ ನಾಸೀರ್ ಹುಸೇನ್ ಅವರ ಬೆಂಬಲಿಗರಾಗಿದ್ದಾರೆ. ಶನಿವಾರ ನಗರದ ಕನ್ನಿಂಗ್ ಹ್ಯಾಮ್ ರಸ್ತೆಯಲ್ಲಿರುವ ರಾಜ್ಯ ವಕ್ಫ್ ಬೋರ್ಡ್ ಕಚೇರಿಯಲ್ಲಿ ನಡೆದ ಚುನಾವಣೆಯಲ್ಲಿ ಸೈಯದ್ ಮುಹಮ್ಮದ್ ಅಲಿ ಹುಸೈನಿ ಅವರನ್ನು ಅವಿರೋಧವಾಗಿ ಆಯ್ಕೆ ಮಾಡಲಾಗಿದೆ. ಚುನಾವಣೆಗೆ ಮೊದಲು ಚಿತ್ರದುರ್ಗದ ಅನ್ವರ್ ಪಾಷಾ ಪರವಾಗಿ ವಕ್ಫ್ ಸಚಿವ ಜಮೀರ್ ಅಹಮ್ಮದ್ ಲಾಬಿ ಮಾಡಿದ್ದರು. ಎರಡೂವರೆ ವರ್ಷಗಳ ಕಾಲ ಅಧಿಕಾರ ಹಂಚಿಕೆ ಸೂತ್ರದಂತೆ ಅಧ್ಯಕ್ಷ ಸ್ಥಾನ ನಮ್ಮ ಬೆಂಬಲಿಗನಿಗೆ ಕೊಡಿಸಿ ಎಂದು ಜಮೀರ್ ಲಾಬಿ ಮಾಡಿದ್ದರು ಎನ್ನಲಾಗಿದೆ

ಜಮೀರ್ ಬೇಡಿಕೆಗೆ ಒಪ್ಪಿಗೆ ಸಿಗದ ಕಾರಣ ಇಂದು ಅಧ್ಯಕ್ಷರಾಗಿ ಖರ್ಗೆ ಬೆಂಬಲಿಗ ಬಹುಮತದೊಂದಿಗೆ ಅವಿರೋಧವಾಗಿ ಆಯ್ಕೆ ಆಗಿದ್ದಾರೆ. ವಕ್ಫ್ ಬೋರ್ಡ್ ಮಾಜಿ ಅಧ್ಯಕ್ಷ ಕೆ.ಅನ್ವರ್ ಬಾಷಾ ನೇತೃತ್ವದಲ್ಲಿ ಆರು ಮಂದಿ ಸದಸ್ಯರು ಮತದಾನ ಬಹಿಷ್ಕರಿಸಿದ್ದರು. ವಕ್ಫ್ ಅಧ್ಯಕ್ಷರಾಗಿ ಮುಹಮ್ಮದ್ ಅಲಿ ಹುಸೈನಿ ಅಧಿಕಾರ ಸ್ವೀಕಾರ ಕಾರ್ಯಕ್ರಮಕ್ಕೆ ಖರ್ಗೆ ಆಪ್ತ ನಾಸೀರ್ ಹುಸೇನ್ ಹಾಜರಾಗಿದ್ದರೆ ಅಸಮಾಧಾನದಿಂದ ಅಧ್ಯಕ್ಷರ ಆಯ್ಕೆಪ್ರಕ್ರಿಯೆಗೆ ಹಾಜರಾಗದೇ ಜಮೀರ್ ಅಹಮ್ಮದ್ ಅಂತರ ಕಾಯ್ದುಕೊಂಡಿದ್ದರು.

# ಚಿನ್ನ ಕಳ್ಳ ಸಾಗಾಣಿಕೆಯಲ್ಲಿ ಕೇಂದ್ರ ಸಚಿವರು ಭಾಗಿ



ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ.ಮಾ15: ನಟಿ ರನ್ಯಾರಾವ್ ಗೋಲ್ಡ್ ಸ್ಮಗ್ಲಿಂಗ್ ಪ್ರಕರಣದಲ್ಲಿ ರಾಜ್ಯದ ಇಬ್ಬರು ಸಚಿವರು ಭಾಗಿಯಾಗಿದ್ದಾರೆ ಎಂಬುದು ಶುದ್ಧ ಸುಳ್ಳು. ಬಹುಶಃ ಕೇಂದ್ರ ಸಚಿವರು ಭಾಗಿಯಾಗಿರಬಹುದು ಎಂದು ವೈದ್ಯಕೀಯ ಶಿಕ್ಷಣ ಹಾಗೂ ಕೌಶಲಾಭಿವೃದ್ಧಿ, ಜೀವನೋಪಾಯ ಖಾತೆ ಸಚಿವ ಡಾ.ಶರಣಪ್ರಕಾಶ್ ಪಾಟೀಲ್ ಹೇಳಿದರು.

ನಗರದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ರನ್ಯಾ ಭಾಗಿಯಾಗಿರುವ ಪ್ರಕರಣದಲ್ಲಿ ರಾಜ್ಯದ ಸಚಿವರ ಪಾತ್ರ ಹೇಗೆ ಇರಲು ಸಾಧ್ಯವಿದೆ ಎಂದು ಪ್ರಶ್ನಿಸಿದ ಅವರು, ವಿಮಾನ ನಿಲ್ದಾಣಗಳು ಕೇಂದ್ರ ಸರ್ಕಾರದ ಅಧೀನದಲ್ಲಿ ಇರುತ್ತವೆ. ಹಾಗಾಗಿ, ಬಹುಶಃ ತಪ್ಪು ಅಂದಾಜಿನಿಂದ ಹಾಗೆ ಹೇಳಿರಬಹುದು ಎಂದರು.

ವಿಮಾನ ನಿಲ್ದಾಣಗಳಲ್ಲಿ ಶಿಷ್ಟಾಚಾರದ ಜವಾಬ್ದಾರಿ ಕೇಂದ್ರ ಸರ್ಕಾರದ ಅಡಿ ಬರುತ್ತದೆ. ಹೀಗಾಗಿ ನಮ್ಮ ಸರ್ಕಾರದ ಯಾವುದೇ ಸಚಿವರು ಭಾಗಿಯಾಗಿರುವ ಸಾಧ್ಯತೆಗಳಿವೆ ಎಂದರು.

ಶೀಘ್ರ ಸೂಪರ್ ಸ್ಪೆಷಾಲಿಟಿ ಆಸ್ಪತ್ರೆ: ಮುಂದಿನ ಕೆಲವೇ ದಿನಗಳಲ್ಲಿ ಕಲಬುರಗಿ ನಗರದಲ್ಲಿ ಸೂಪರ್ ಸ್ಪೆಷಾಲಿಟಿ ಆಸ್ಪತ್ರೆ ಉದ್ಘಾಟನೆ ನೆರವೇರಿಸಲಾಗುವುದು ಎಂದು ಸಚಿವ ಡಾ.ಶರಣಪ್ರಕಾಶ್ ಪಾಟೀಲ್ ಹೇಳಿದರು. ಮುಖ್ಯಮಂತ್ರಿ ಸಿದ್ದರಾಮಯ್ಯ, ಎಐಐಸಿಸಿ ಅಧ್ಯಕ್ಷರನ್ನು ಆಹ್ವಾನಿಸಲಾಗುವುದು. ಅದಕ್ಕಾಗಿ ಅವರ ಸಮಯ ಕೇಳಲಾಗಿದೆ ಎಂದರು. ಜಿಮ್ಸ್ ಆಸ್ಪತ್ರೆಯಲ್ಲಿ ವೈದ್ಯರ ನಿರ್ಲಕ್ಷ್ಯದಿಂದ ಇಬ್ಬರ ಸಾವಿನ ಪ್ರಕರಣ ಕುರಿತು ಪ್ರಸ್ತಾಪಿಸಿದ ಅವರು, ಇದುವರೆಗೆ ಜಿಮ್ಸ್ ನಲ್ಲಿ ಇಂತಹ ಪ್ರಕರಣ ನಡೆದಿಲ್ಲ. ಮಾಧ್ಯಮಗಳ ಮೂಲಕ ತಮಗೆ ಗೊತ್ತಾಗಿದೆ. ಈ ನಿಟ್ಟಿನಲ್ಲಿ ಸಣ್ಣ ತಪ್ಪಾಗಿದ್ದರೂ ಸಹಿಸುವುದಿಲ್ಲ. ಈ ಬಗ್ಗೆ ತನಿಖೆ ನಡೆಸಲಾಗುವುದು ಎಂದು ಖಾತ್ರಿಪಡಿಸಿದರು. ಗ್ಯಾರಂಟಿ ಬದಲಾವಣೆ ಇಲ್ಲ: ಗ್ಯಾರಂಟಿ ಯೋಜನೆಯಲ್ಲಿ ಯಾವುದೇ ಬದಲಾವಣೆ ತರುವ ಉದ್ದೇಶವಿಲ್ಲ. ಬಿಜೆಪಿಯವರು ಸುಮ್ಮನೆ ಗೊಂದಲ ಸೃಷ್ಟಿಸುತ್ತಿದ್ದಾರೆ ಎಂದು ಸಚಿವ ಶರಣಪ್ರಕಾಶ್ ಹೇಳಿದರು.

ಗ್ಯಾರಂಟಿ ಕಮಿಟಿ ಬಗ್ಗೆ ವಿನಾಕಾರಣ ಟೀಕೆ ಮಾಡುತ್ತಿದ್ದಾರೆ. ನಾವೇನೂ ಬಹಳ ದೊಡ್ಡ ಮೊತ್ತದ ಹಣ ಕೊಡುತ್ತಿಲ್ಲ. ಬಿಜೆಪಿಯವರ ರೀತಿ ಸಾರ್ವಜನಿಕ ಆಸ್ತಿಯನ್ನು ಮಾರಿಲ್ಲ. ಬಿಜೆಪಿಯವರು ಆರ್ ಎಸ್ ಎಸ್ ಅಂಗ ಸಂಸ್ಥೆಗಳಿಗೆ ಎಷ್ಟು ಭೂಮಿ ಕೊಟ್ಟಿದ್ದಾರೆ ಅನ್ನೋದು ನಮಗೂ ಗೊತ್ತಿದೆ ಎಂದು ಖಾರವಾಗಿ ನುಡಿದರು.

ಕೊರೊನಾ ಕಾಲದಲ್ಲಿ ಹೆಣದ ಮೇಲೆ ಹಣ ಮಾಡಿದವರಿಂದ ನಾವು ಪಾಠ ಕಲಿಯಬೇಕಾ ಎಂದು ಪ್ರಶ್ನಿಸಿದರಲ್ಲದೆ, ಮೂರು ಬಿಟ್ಟುವರು ಊರಿಗೆ ದೊಡ್ಡವರು. ಅವರಿಂದ ನಾವು ಬುದ್ಧಿ ಕಲಿಯಬೇಕಾ ಎಂದು ವಾಗ್ದಾಳಿ ನಡೆಸಿದರು.

# ಕಾಂಗ್ರೆಸ್‌ನಲ್ಲಿ ಯಾವ ಬೇಗುದಿಯಿಲ್ಲ:ಎಂ.ಬಿ.ಪಾಟೀಲ



ಮಲ್ಲಮ್ಮ ನುಡಿ ವಾರ್ತೆ

ವಿಜಯಪುರ,ಮಾ.15: ಡಿಕೆಶಿ ಡಿನ್ನರ್ ಪಾರ್ಟಿಗೆ ಕೆಲ ಸಚಿವರು ಗೈರು ಎಂಬುವುದು ಮಾಧ್ಯಮ ಸೃಷ್ಟಿ ಅಷ್ಟೇ, ಕಾಂಗ್ರೆಸನಲ್ಲಿ ಯಾವುದೇ ಆಂತರಿಕ ಬೇಗುದಿಯಿಲ್ಲ ಎಂದು ಜಿಲ್ಲಾ ಉಸ್ತುವಾರಿ ಸಚಿವ ಎಂ.ಬಿ.ಪಾಟೀಲ ಪ್ರತಿಕ್ರಿಯಿಸಿದ್ದಾರೆ.

ನಗರದಲ್ಲಿ ಇಂದು ಸುದ್ದಿಗಾರರ ಜೊತೆಗೆ ಮಾತನಾಡಿದ ಅವರು, ಇದೆಲ್ಲಾ ಮಾಧ್ಯಮಗಳ ಸೃಷ್ಟಿ ಎಂದರು.

ನಾನು ಅಟೆಂಡ್ ಆಗಿದ್ದೆ, ಫೊ?ಟೋ ನೋಡಿದ್ದೀರಿ. ಸತೀಶ್ ಜಾರಕಿಹೊಳಿ, ಖಂಡ್ರೆ, ರಾಜಣ್ಣ ಅಟೆ–ಂಡ್ ಆಗಿದ್ದಾರೆ ಎಂದು ತಿಳಿಸಿದರು. ಪರಮೇಶ್ವರ ಅವರ ಕ್ಷೇತ್ರದಲ್ಲಿ ಯಾರೋ ಮರಣ ಹೊಂದಿದ್ದರಂತೆ. ಅವರು ಅಲ್ಲಿಗೆ ಹೋಗಿದ್ದರು. ಸುಮ್ಮ ಸುಮ್ಮನೆ ಸೃಷ್ಟಿ ಮಾಡುತ್ತಿದ್ದೀರಿ ಎಂದರು.

ಸತೀಶ ಜಾರಕಿಹೊಳಿ, ರಾಜಣ್ಣ ಡಿನ್ನರ್ ಪಾರ್ಟಿಗೆ ಬಂದಿದ್ದರೂ ಇಲ್ಲ ಅಂತ ಸೃಷ್ಟಿ ಮಾಡುತ್ತೀರಿ ಎಂದು ಹೇಳಿದರು. ಪರಮೇಶ್ವರ ಅವರಿಗೆ ತುಂಬಾ ಹತ್ತಿರ ಇದ್ದವರು ತೀರಿಕೊಂಡಿದ್ದರು. ತೀರಿಕೊಂಡಾಗ ಇದು ಇಂಪಾರ್ಟೆಂಟ್ ಆಗುತ್ತಾ ಎಂದು ಕೇಳಿದರು. ಡಿನ್ನರ್ ಪಾರ್ಟಿಗೆ ಸಿದ್ದರಾಮಯ್ಯ ಅವರು ಬಂದಿದ್ದರು. ಇನ್ನೇನು ಬೇಕು ನಿಮಗೆ ಎಂದು ಮರು ಪ್ರಶ್ನಿಸಿದರು. ಪರಮೇಶ್ವರ ಬಿಟ್ಟು ಎಲ್ಲರೂ ಬಂದಿದ್ದರು ಎಂದು ಪುನರುಚ್ಚರಿಸಿದರು.

ಕಾಂಗ್ರೆಸ್ಸಿನಲ್ಲಿ ಯಾವುದೇ ಆಂತರಿಕ ಬೇಗುದಿ ಇಲ್ಲ ಎಂದ ಸಚಿವ ಎಂ ಬಿ ಪಾಟೀಲ, ಇದರ ಮೇಲೆ ತಿಳಿದುಕೊಂಡು ಬಿ.ಡಿ. ಸಿದ್ದರಾಮಯ್ಯ, ಎಂ.ಬಿ. ಪಾಟೀಲ, ಸತೀಶ ಜಾರಕಿಹೊಳಿ, ರಾಜಣ್ಣ ಅಟೆ–ಂಡ್ ಆಗಿದ್ದರು ಎಂಬುದು ಸ್ಪಷ್ಟವಾಗುತ್ತದೆ ಎಂದರು. ಪರಮೇಶ್ವರ ಅವರನ್ನು ಬಿಟ್ಟು ಬೇರೆ ಎಲ್ಲರೂ ಅಟೆ–ಂಡ್ ಆಗಿದ್ದರು. ತುಂಬಾ ಹತ್ತಿರದವರು ತೀರಿಕೊಂಡಿ–ದ್ದರು ಎಂದು ಪರಮೇಶ್ವರ ಅವರು ಬಂದಿರಲಿಲ್ಲ. ನನಗೂ ಯಾರಾದರೂ ಹತ್ತಿರದವರಿದ್ದವರು ತೀರಿಕೊಂಡಿದ್ದರೆ ನಾನು ಹೋಗುತ್ತಿರಲಿಲ್ಲ ಎಂದು ಹೇಳಿದರು. ಎಲ್ಲರೂ ಆರಾಮ ಇದ್ದಾರೆ. ಮಾಧ್ಯಮವರಿಗೆ ಬೇಗುದಿ ಇದೆ ಎಂದು ಸಚಿವರು ತಿಳಿಸಿದರು.

ಡಿಕೆಶಿ ಕೆಪಿಸಿಸಿ ಅಧ್ಯಕ್ಷ ಹುದ್ದೆ ಐದು ವರ್ಷ ಪೂರೈಸಿದ ಹಿನ್ನಲೆ ಅಧಿವೇಶನ ನಡೆದಾಗ ಸಿಎಂ ಡಿಸಿಎಂ ಸಹಜವಾಗಿ ಊಟ ಕೊಡುತ್ತಾರೆ. ಇದರಲ್ಲಿ ತಪ್ಪೇನಿದೆ ಎಂದು ಕೇಳಿದರು.

ನಾನು ಕೂಡಾ ಅಧಿವೇಶನ ನಡೆದಾಗ ಊಟ ಕೊಟ್ಟಿದ್ದೇನೆ. ಮಾಧ್ಯಮದವರಿಗೂ ಊಟ ಕೊಟ್ಟಿದ್ದಾರೆ ಎಂದು ತಿಳಿಸಿದರು.

ಕೆಪಿಸಿಸಿ ಅಧ್ಯಕ್ಷ ಸ್ಥಾನ ಬದಲಾವಣೆ ವಿಚಾರ ಡಿನ್ನರ್ ಪಾರ್ಟಿಯಲ್ಲಿ ಚರ್ಚೆ ಆಗಿಲ್ಲ. ನಮ್ಮ ಕಾಂಗ್ರೆಸ್ ಪಕ್ಷದಲ್ಲಿ ಹೈಕಮಾಂಡ್ ಇದೆ. ಇಂತಹ ನಿರ್ಧಾರಗಳನ್ನು ಹೈಕಮಾಂಡ್ ತೆಗೆದುಕೊಳ್ಳುತ್ತದೆ. ಡಿನ್ನರ್ ಪಾರ್ಟಿಯಲ್ಲಿ ಆಗಲ್ಲ ಎಂದು ಸಚಿವರು ನುಡಿದರು.

# ಸಾರ್ವಜನಿಕರು ಆರೋಗ್ಯದತ್ತ ಗಮನ ಹರಿಸಬೇಕು: ಸಚಿವ ದಿನೇಶ್ ಗುಂಡೂರಾವ್ ಸಲಹೆ

ಮಲ್ಲಮ್ಮ ನುಡಿ ವಾರ್ತೆ

ರಾಯಚೂರು ಮಾ.15 : ಬಡವರ ಆರೋಗ್ಯದ ದೃಷ್ಟಿಯಿಂದ ರಾಜ್ಯ ಸರ್ಕಾರವು ಅನೇಕ ಉಚಿತ ಆರೋಗ್ಯ ಶಿಬಿರಗಳನ್ನು ಹಮ್ಮಿಕೊಳ್ಳುತ್ತಿದ್ದು, ಸಾರ್ವಜನಿಕರು ಶಿಬಿರದ ಲಾಭ ಪಡೆದು ಆರೋಗ್ಯದ ಕಡೆಗೆ ಹೆಚ್ಚಿನ ಗಮನ ಹರಿಸಬೇಕೆಂದು ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಹಾಗೂ ದಕ್ಷಿಣ ಕನ್ನಡ ಜಿಲ್ಲಾ ಉಸ್ತುವಾರಿ ಸಚಿವರಾದ ದಿನೇಶ್ ಗುಂಡೂರಾವ್ ಅವರು ಹೇಳಿದರು.

ಮಾ.15ರ ಶನಿವಾರ ದಂದು ಜಿಲ್ಲೆಯ ಮಾನ್ವಿ ಪಟ್ಟಣದ ಬಾಷುಮಿಯಾ ಸಾಹುಕಾರ ಸರ್ಕಾರಿ ಪ್ರಥಮ ದರ್ಜೆ ಕಾಲೇಜು ಆವರಣದಲ್ಲಿ ರಾಷ್ಟ್ರೀಯ ಆರೋಗ್ಯ ಅಭಿಯಾನ, ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ರಾಯಚೂರು ವೈದ್ಯಕೀಯ ವಿಜ್ಞಾನಗಳ ಸಂಸ್ಥೆ ರಾಯಚೂರು ಹಾಗೂ ವಿವಿಧ ಸಂಘ–ಸಂಸ್ಥೆಗಳು, ವಿವಿಧ ಇಲಾಖೆಗಳ ಸಂಯುಕ್ತಾಶ್ರಯದಲ್ಲಿ ಹಮ್ಮಿಕೊಂಡಿದ್ದ ಬೃಹತ್ ಆರೋಗ್ಯ ಮೇಳ–2025ರ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಮಾತನಾಡಿದರು.

ರಾಜ್ಯದಲ್ಲಿ ಎರಡನೇ ಬಾರಿ ಆರೋಗ್ಯ ಶಿಬಿರ ಆಯೋಜನೆ ಮಾಡಲಾಗಿದ್ದು, ಮೊದಲನೇ ಬಾರಿ ಚಾಮರಾಜನಗರ ಜಿಲ್ಲೆಯಲ್ಲಿ ಹಮ್ಮಿಕೊಳ್ಳಲಾಗಿದ್ದು, ಹತ್ತರಿಂದ ಹನ್ನೆರಡು ಸಾವಿರ ಜನರು ಬಂದಿದ್ದರು. 2ನೇ ಬಾರಿ ರಾಯಚೂರಿನ ಮಾನ್ವಿ ಪಟ್ಟಣದಲ್ಲಿ ಆಯೋಜನೆ ಮಾಡಲಾಗಿದ್ದು, ಮುಂದಿನ ಆರೋಗ್ಯ ಶಿಬಿರವನ್ನು ಬೆಳಗಾವಿ ಜಿಲ್ಲೆಯ ಸೌದತ್ತಿಯಲ್ಲಿ ಹಮ್ಮಿಕೊಳ್ಳಲಾಗಿದೆ ಎಂದ ಅವರು, ಆರೋಗ್ಯ ಶಿಬಿರದ ಸದ್ಬಳಕೆಯನ್ನು ಸಾರ್ವಜನಿಕರು ಮಾಡಿಕೊಳ್ಳಬೇಕು. ಜನರ ಆರೋಗ್ಯದ ಕಾಳಜಿಯನ್ನು ಸರ್ಕಾರ ಹೊಂದಿದೆ. ಸಾರ್ವಜನಿಕರು ವೈದ್ಯರೊಂದಿಗೆ ಮುಕ್ತವಾಗಿ ತಮ್ಮ ಸಮಸ್ಯೆಗಳನ್ನು ಹೇಳಿ ಕಡಿಮೆ ಖರ್ಚಿನಲ್ಲಿ ಉತ್ತಮ ಚಿಕಿತ್ಸೆ ಪಡೆದುಕೊಂಡು ಸಮಸ್ಯೆಯನ್ನು ಬಗೆಹರಿಸಿಕೊಳ್ಳಬೇಕು ಎಂದು ಸಲಹೆ ನೀಡಿದರು.



ರಾಜ್ಯದ ಮುಖ್ಯಮಂತ್ರಿಗಳಾದ ಸಿದ್ದರಾಮಯ್ಯ ಅವರು ರಾಜ್ಯದ ಅಭಿವೃದ್ಧಿಗೆ ಶ್ರಮಿಸುತ್ತಿದ್ದಾರೆ. 20 ಲಕ್ಷ 81 ಸಾವಿರ ಜನರಿಗೆ ಉಚಿತ ಆರೋಗ್ಯ ಕಾರ್ಡಗಳನ್ನು ವಿತರಿಸಿದ್ದಾರೆ. ಅಲ್ಲದೆ ರಾಯಚೂರು ಜಿಲ್ಲೆಗೆ 8 ಹೊಸ ಪ್ರಾಥಮಿಕ ಆರೋಗ್ಯ ಕೇಂದ್ರಗಳನ್ನು ಮಂಜೂರು ಮಾಡಲಾಗಿದೆ. ಗಬ್ಬೂರು, ಪೋತ್ನಾಲ್ ಪ್ರಾಥಮಿಕ ಕೇಂದ್ರವನ್ನು ಸಮುದಾಯ ಆರೋಗ್ಯ ಕೇಂದ್ರವಾಗಿ ಮೇಲ್ದರ್ಜೆಗೇರಿಸಲಾಗಿದೆ. 30 ಹಾಸಿಗೆಯ 4 ಸಮುದಾಯ ಆರೋಗ್ಯ ಕೇಂದ್ರಗಳನ್ನು 50 ಹಾಸಿಗೆಯ ಆಸ್ಪತ್ರೆಯಾಗಿ ಮೇಲ್ದರ್ಜೆಗೆ ಹಾಗೂ ಲಿಂಗಸೂರಿನಲ್ಲಿ ಜಿಲ್ಲಾಸ್ಪತ್ರೆ ನಿರ್ಮಾಣ ಮಾಡಲು, ದೇವದುರ್ಗದಲ್ಲಿ ಎಂಸಿಎಚ್ ಆಸ್ಪತ್ರೆ ನಿರ್ಮಾಣ ಮಾಡಲು ಕ್ರಮ ಕೈಗೊಳ್ಳಲಾಗಿದೆ. ಅತಿ ಶೀಘ್ರದಲ್ಲಿ ಶಂಕುಸ್ಥಾಪನೆ ಕಾರ್ಯ ಮಾಡಲಾಗುತ್ತದೆ ಎಂದು ಆರೋಗ್ಯ ಸಚಿವರು ಹೇಳಿದರು.

ಬಾಣಂತಿಯರ ಸಾವು ಪ್ರಕರಣಗಳನ್ನು ಶೂನ್ಯತೆ ತರಲು ಬಜೆಟ್‌ನಲ್ಲಿ 360 ಕೋಟಿ ರೂಪಾಯಿಗಳನ್ನು ಮೀಸಲಿಡಲಾಗಿದೆ. ಇದಕ್ಕಾಗಿ ಕಾರ್ಯಕ್ರಮಗಳನ್ನು ರೂಪಿಸಲಾಗಿದ್ದು, ಹಂತಹಂತವಾಗಿ ಅವುಗಳನ್ನು ಅನುಷ್ಠಾನ ಮಾಡಲಾಗುತ್ತದೆ. ಮಹಿಳೆಯರನ್ನು ಕಾಡುವ ಗರ್ಭ ಕ್ಯಾನ್ಸರ್ ತಡೆಗಟ್ಟಲು 14 ವರ್ಷ ಮೇಲ್ಪಟ್ಟ ಹೆಣ್ಣುಮಕ್ಕಳಿಗೆ ಲಸಿಕೆ ಹಾಕಲು ತೀರ್ಮಾನಿಸಲಾಗಿದ್ದು, ಕೇಂದ್ರ ಸರ್ಕಾರ ಸಹಕಾರ ನೀಡಿ ರಾಷ್ಟ್ರೀಯ ಲಸಿಕಾ ಕಾರ್ಯಕ್ರಮವಾಗಿ ಆರಂಭಿಸಿ ಸಹಕಾರ ನೀಡಬೇಕು ಎಂದರು.

ಈ ವೇಳೆ ಸಣ್ಣ ನೀರಾವರಿ ಮತ್ತು ವಿಜ್ಞಾನ ತಂತ್ರಜ್ಞಾನ ಸಚಿವ ಎನ್.ಎಸ್.ಬೋಸರಾಜ ಅವರು ಮಾತನಾಡಿ, ರಾಜ್ಯ ಸರ್ಕಾರ ಅಧಿಕಾರಕ್ಕೆ ಬಂದಾಗಿನಿಂದ ಶಿಕ್ಷಣ ಮತ್ತು ಆರೋಗ್ಯ ಕ್ಷೇತ್ರ–ಕ್ಕೆ ಹೆಚ್ಚಿನ ಒತ್ತು ನೀಡಿದೆ. ಸಿಎಂ ಸಿದ್ದರಾಮಯ್ಯ ಅವರು ರಾಜ್ಯದಲ್ಲಿ ಅನೇಕ ಬದಲಾವಣೆ ಮಾಡಿದ್ದಾರೆ. ಆರೋಗ್ಯ ಸಚಿವರಾದ ದಿನೇಶ್ ಗುಂಡೂರಾವ್ ಅವರು ಅನೇಕ ಜಿಲ್ಲೆಗಳಲ್ಲಿ ಪ್ರವಾಸ ಮಾಡಿ ಕಲ್ಯಾಣ ಕರ್ನಾಟಕ ಭಾಗದಲ್ಲಿ 40 ಹೊಸ ಆಸ್ಪತ್ರೆ, ರಾಯಚೂರಿನಲ್ಲಿ ಕ್ಯಾನ್ಸರ್ ವಿಭಾಗ ಪ್ರಾರಂಭಿಸಲು 52 ಕೋಟಿ ರೂ.ಗಳ ವೆಚ್ಚದಲ್ಲಿ ಈಗಾಗಲೇ ಕ್ರಮಕೈಗೊಂಡಿದ್ದಾರೆ. ರಾಜ್ಯ ಸರ್ಕಾರವು ಬಡವರ ಆರೋಗ್ಯದ ದೃಷ್ಟಿಯಿಂದ ಅನೇಕ ಉಚಿತ ಶಿಬಿರ ನಡೆಸುತ್ತಿದೆ ಎಂದರು.

ಈ ವೇಳೆ ರಾಯಚೂರು ಲೋಕಸಭಾ ಸದಸ್ಯರಾದ ಜಿ.ಕುಮಾರ ನಾಯಕ ಅವರು ಮಾತನಾಡಿ, ಅಭಿವೃದ್ಧಿ ವಿಚಾರದಲ್ಲಿ ರಾಜಕಾರಣ ಮಾಡಬಾರದು ಎಂಬ ಮಾತಿದೆ. ಆದರೆ ಅಭಿವೃದ್ಧಿ ವಿಷಯದಲ್ಲಿ ರಾಜಕಾರಣ ಮಾಡುವುದು ತಪ್ಪಲ್ಲ. ಆರೋಗ್ಯ ಕ್ಷೇತ್ರಕ್ಕೆ ಸರ್ಕಾರಗಳು ಹೆಚ್ಚಿನ ಅನುದಾನ ಮೀಸಲಿಟ್ಟು ಜನರ ಆರೋಗ್ಯದತ್ತ ಕಾಳಜಿ ವಹಿಸುವುದು ಇಂದಿನ ಅತೀ ಅಗತ್ಯವಾಗಿದೆ ಎಂದರು.

ಇದೇ ಸಂದರ್ಭದಲ್ಲಿ ಮಾನವಿ ಕ್ಷೇತ್ರದ ಶಾಸಕರಾದ ಜಿ.ಹಂಪಯ್ಯ ನಾಯಕ, ಮಾನ್ವಿ ಪುರಸಭೆಯ ಅಧ್ಯಕ್ಷರಾದ ಲಕ್ಷ್ಮೀ ವೀರೇಶ್, ರಾಯಚೂರು ಜಿಲ್ಲಾಧಿಕಾರಿಗಳಾದ ನಿತೀಶ್ ಕೆ., ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಾದ ರಾಹುಲ್ ತುಕಾರಾಂ ಪಾಂಡ್ವೆ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳಾದ ಪುಟ್ಟಮಾದಯ್ಯ ಎಂ, ಆರೋಗ್ಯ ಇಲಾಖೆಯ ಆಯುಕ್ತರಾದ ಕೆ.ಬಿ. ಶಿವುಕುಮಾರ್, ರಾಯಚೂರು ಸಹಾಯಕ ಆಯುಕ್ತರಾದ ಗಜಾನನ ಬಾಳೆ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಅಧಿಕಾರಿ ಡಾ.ಸುರೇಂದ್ರಬಾಬು, ರೀಮ್ಸ್‌ನ ಡಾ.ರಮೇಶ, ಜಿಲ್ಲಾ ಆರ್.ಸಿ.ಹೆಚ್ ಅಧಿಕಾರಿ ಡಾ.ನಂದಿತಾ ಸೇರಿದಂತೆ ವಿವಿಧ ಇಲಾಖೆಯ ಅಧಿಕಾರಿಗಳು, ಸಿಬ್ಬಂದಿ ಇದ್ದರು.

Printed, Published and Owned by: Ramesh Reddy and Printed at Metropolitan Media Company Ltd., Plot No.224, in Sy.No.41/2, 41/B & 42, Kapnoor 2nd stage, Industrial Area, Kalburagi-585104. Published at Sy.No. 466, TMC No. 22-405, First Floor, Gada Complex, Opp. Inspection Bungalow, Humnabad-585330.
Editor: Ramesh Reddy, Office Ph. No: +91 9449732000.